ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಭಾರತದ ಲಕ್ಷ್ಯ ಸೇನ್ ಅವರು ಕುಮಾಮೊಟೊ ಮಾಸ್ಟರ್ಸ್ ಜಪಾನ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಸಿಂಗಲ್ಸ್‌ನಲ್ಲಿ ಕ್ವಾರ್ಟರ್ ಫೈನಲ್‌ಗೆ ಪ್ರವೇಶ ಪಡೆದಿದ್ದಾರೆ.

14 ನವೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 244 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ದೊಡ್ಡದಾಗಿ ಸಿಗ್ನಲ್ ಕೊಟ್ಟ ಡೆವಿಲ್ ಟೀಮ್ » 2



ಮೇಕೆದಾಟು ಯೋಜನೆ : ಕರ್ನಾಟಕಕ್ಕೆ ಗೆಲುವು » 3



ರಸ್ತೆ ಬದಿ ಕಸ ಸುರಿದವರಿಗೆ ಪುರಸಭೆ ಸಿಬ್ಬಂದಿ ತರಾಟೆ » 4

# ರಾಜ್ಯದ 9 ಜಿಲ್ಲೆಯಲ್ಲಿ ಕೈಗಾರಿಕಾ ಪಾರ್ಕ್

## ಕೇಂದ್ರ ಸಚಿವ ಪಿಯೂಶ್ ಗೋಯಲ್ ಜೊತೆ ಹೆಚ್.ಡಿ.ಕುಮಾರಸ್ವಾಮಿ ಮಾತುಕತೆ

• ಪ್ರಜೋದಯ ವರದಿ

**ನವದೆಹಲಿ:** ಕರ್ನಾಟಕದ ಕೈಗಾರಿಕಾಭಿವೃದ್ಧಿಗೆ ಪರಿವರ್ತನಾತ್ಮಕ ಹೆಜ್ಜೆ ಎಂದೇ ಪರಿಗಣಿಸಿರುವ 9 ಜಿಲ್ಲೆಗಳನ್ನು ಒಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆ (ಎಸ್‌ಐಸಿಡಿಪಿ) ಅನುಷ್ಠಾನಗೊಳಿಸಬೇಕೆಂದು ಕೋರಿ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಸಚಿವ ಪಿಯೂಶ್ ಗೋಯಲ್ ಅವರೊಂದಿಗೆ ಮಾತುಕತೆ ನಡೆಸಿದರು.

ಗುರುವಾರ ವಾಣಿಜ್ಯ ಸಚಿವಾಲಯದ ಕಚೇರಿಗೆ ತೆರಳಿ ಗೋಯಲ್ ಅವರನ್ನು ಭೇಟಿಯಾದ ಕುಮಾರಸ್ವಾಮಿ ಅವರು, ಈ ಯೋಜನೆ ಕುರಿತ ಮನವಿಯನ್ನು ಸಲ್ಲಿಸಿ ರಾಜ್ಯದ ಕೈಗಾರಿಕಾಭಿವೃದ್ಧಿ ಬಗ್ಗೆ ವಿವಿಧ ಆಯಾಮಗಳಲ್ಲಿ ಚರ್ಚೆ ನಡೆಸಿದರು.



- ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆ ಅನುಷ್ಠಾನಕ್ಕೆ ಕೋರಿಕೆ
- ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ಮಂಗಳೂರು, ಹುಬ್ಬಳ್ಳಿ-ಧಾರವಾಡ, ರಾಯಚೂರು, ಬೀದರ್ ಜಿಲ್ಲೆ ಒಳಗೊಂಡ ಯೋಜನೆ

ಬಳಿಕ ಹೆಚ್.ಡಿ.ಕುಮಾರಸ್ವಾಮಿ ಅವರು ಮಾತನಾಡಿ, ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಮಂಗಳೂರು, ಹುಬ್ಬಳ್ಳಿ-ಧಾರವಾಡ, ರಾಯಚೂರು ಮತ್ತು ಬೀದರ್ ಜಿಲ್ಲೆಗಳನ್ನು ಒಳಗೊಂಡ ವಿಶಾಲವಾದ, ಬಹುವ್ಯಾಪ್ತಿಯುಳ್ಳ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಯೋಜನೆಯನ್ನು (ಎನ್‌ಐಸಿಡಿಪಿ) ಅನುಷ್ಠಾನ ಮಾಡಬೇಕೆಂದು ಗೋಯಲ್ ಅವರನ್ನು ಕೋರಲಾಯಿತು. ಕೈಗಾರಿಕೆ ಕ್ಷೇತ್ರದಲ್ಲಿ ಮುಂಚೂಣಿ ರಾಜ್ಯವಾಗಿರುವ ಕರ್ನಾಟಕದಾದ್ಯಂತ ಸೂಕ್ತ ಕೈಗಾರಿಕಾ ಕಾರಿಡಾರ್ ಯೋಜನೆಯ ಚೌಕಟ್ಟಿನಡಿಯಲ್ಲಿ

» ನಾಲ್ಕನೇ ಪುಟದಲ್ಲಿ

### ಸಕಾರಾತ್ಮಕ ಸ್ಪಂದನೆ

ಸಚಿವ ಗೋಯಲ್ ಅವರೊಂದಿಗೆ ಚರ್ಚೆ ಬಗ್ಗೆ ಸಂತಸ ವ್ಯಕ್ತಪಡಿಸಿದ ಕುಮಾರಸ್ವಾಮಿ ಅವರು, ವಾಣಿಜ್ಯ ಮತ್ತು ಕೈಗಾರಿಕೆ ಸಚಿವರು ಈ ಪ್ರಸ್ತಾವನೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರಲ್ಲದೆ, ಯೋಜನೆಯ ಅನುಷ್ಠಾನದ ಬಗ್ಗೆ ಆಸಕ್ತಿ ವ್ಯಕ್ತಪಡಿಸಿದರು. ಪ್ರಧಾನಿ ಮೋದಿ ನೇತೃತ್ವದಲ್ಲಿ ಉತ್ಪಾದನೆ ಮತ್ತು ಕೈಗಾರಿಕಾ ಸ್ಪರ್ಧಾತ್ಮಕತೆಯನ್ನು ಬಲಪಡಿಸುವ ಕೇಂದ್ರ ಸರ್ಕಾರದ ವಿಶಾಲ ದೃಷ್ಟಿಕೋನಕ್ಕೆ ಅನುಗುಣವಾಗಿ ಈ ಉಪಕ್ರಮವನ್ನು ದೊಡ್ಡ ಪ್ರಮಾಣದಲ್ಲಿ ಕೈಗೆತ್ತಿಕೊಳ್ಳಲಾಗುವುದೆಂದು ಭರವಸೆ ನೀಡಿದರು. ಈ ಯೋಜನೆಯಿಂದ ರಾಜ್ಯದ ಉತ್ತರ, ಮಧ್ಯ ಮತ್ತು ದಕ್ಷಿಣ ಪ್ರದೇಶಗಳಲ್ಲಿ ಕೈಗಾರಿಕಾ ವಿಸ್ತರಣೆಗೆ ಒತ್ತು ನೀಡುವಲ್ಲಿ ಪ್ರಮುಖ ಹೆಜ್ಜೆಯಾಗಿದೆ ಎಂಬುದಾಗಿ ತಿಳಿಸಿದ್ದಾರೆ.

# ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ 27.93 ಕೋ. ರೂ.

## ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ | ಅನುದಾನ ಬಳಸಿಕೊಂಡು 5 ವಿಭಾಗ ಆರಂಭ

• ಪ್ರಜೋದಯ ವರದಿ

**ಹಾಸನ:** ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ (ಹಿಮ್ಸ್) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತ್ವರಿತವಾಗಿ ಕಾರ್ಯರೂಪಕ್ಕೆ ತರಲು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರ 27.93 ಕೋ.ರೂ. ಪ್ರಸ್ತಾವನೆಗೆ ಅನುಮೋದನೆ ನೀಡಿದೆ.

ಕೃಷ್ಣಬೈರೇಗೌಡ ಅವರು ಜಿಲ್ಲಾ ಉಸ್ತುವಾರಿ ಜವಾಬ್ದಾರಿಯನ್ನು ವಹಿಸಿಕೊಂಡ ಕೂಡಲೇ ಸೆಪ್ಟೆಂಬರ್ 22 ರಂದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣ, ನಿಂತಿದ್ದ ಕಾಮಗಾರಿ ಪೂರ್ಣಗೊಳಿಸಲು 9 ಕೋ.ರೂ.ಗೂ ಹೆಚ್ಚು ಅನುದಾನ ಮಂಜೂರು ಮಾಡಿಸಿದ್ದರು. ಆ ಅನುದಾನ ಬಳಸಿಕೊಂಡು ಕಟ್ಟಡ ಬಾಕಿ ಕಾಮಗಾರಿ ಪೂರ್ಣಗೊಳಿಸುವ ಕೆಲಸ ನಡೆಯುತ್ತಿದೆ. ಇದೀಗ ಮತ್ತೆ 27.93 ಕೋ.ರೂ. ಪ್ರಸ್ತಾವನೆಗೆ ಅನುಮೋದನೆ ದೊರೆತಿರುವುದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ನೆರವಾಗಲಿದೆ.



ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಪ್ರತಿಕ್ರಿಯಿಸಿ, 27.93 ಕೋ.ರೂ. ಪ್ರಸ್ತಾವನೆಗೆ ಅನುಮೋದನೆ ಸಿಕ್ಕಿರುವುದು ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ ಪೂರೈಸಲು ಇದು ಸಹಕಾರಿಯಾಗಲಿದೆ. ನಮ್ಮ ಮನವಿಗೆ ಸ್ಪಂದಿಸಿ, ಜಿಲ್ಲೆಯ ಜನರ ದ್ವನಿಗೆ ಗೌರವಿಸಿ ಹಣ ಬಿಡುಗಡೆಗೆ ಒಪ್ಪಿಗೆ ನೀಡಿದ ವೈದ್ಯಕೀಯ ಶಿಕ್ಷಣ ಸಚಿವರು ಮತ್ತು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದ ತಿಳಿಸುವುದಾಗಿ ಹೇಳಿದ್ದಾರೆ.

ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸಿ, ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ

» ನಾಲ್ಕನೇ ಪುಟದಲ್ಲಿ

# ನ.24ಕ್ಕೆ ಮಾಜಿ ಸಂಸದ ಪ್ರಜ್ವಲ್ ಅರ್ಜಿ ವಿಚಾರಣೆ

• ಪ್ರಜೋದಯ ವರದಿ

**ಬೆಂಗಳೂರು:** ಮಾಜಿ ಸಂಸದ ಪ್ರಜ್ವಲ್‌ಗೆ ವಿಧಿಸಲಾದ ಜೀವಾವಧಿ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು, ಜಾಮೀನು ಮಂಜೂರು ಮಾಡಬೇಕೆಂದು ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆಯನ್ನು ಹೈ ಕೋರ್ಟ್ ನ.24ಕ್ಕೆ ಮುಂದೂಡಿದೆ. ನ್ಯಾಯಮೂರ್ತಿಗಳಾದ ಕೆ.ಎಸ್. ಮುದಗಲ್ ಮತ್ತು ನ್ಯಾಯಮೂರ್ತಿ ಟಿ. ವೆಂಕಟೇಶ್ ನಾಯಕ್ ಅವರ ಪೀಠವು ವಿಚಾರಣೆ ನಡೆಯಿತು. ಪ್ರಾಸಿಕ್ಯೂಷನ್ ಪರವಾಗಿ ನ.24ರಂದು ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ.ರವಿವರ್ಮ ಕುಮಾರ್ ವಾದ ಮಂಡಿಸಲಿದ್ದಾರೆ.

ಹೊಳೆನರಸೀಪುರದ ಮನೆಕೆಲಸದಾಕೆಯ ಮೇಲೆ ಲೈಂಗಿಕ ದೌರ್ಜನ್ಯ ಆರೋಪದಡಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಪ್ರಜ್ವಲ್, ಶಿಕ್ಷೆ ಪ್ರಶ್ನಿಸಿ ಮೇಲ್ಮನವಿ ಸಲ್ಲಿಸಿದ್ದರು. ಪ್ರಜ್ವಲ್ ಪರ ಹಿರಿಯ ವಕೀಲ ಸಿದ್ಧಾರ್ಥ್ ಲೂತ್ರಾ ವಾದ ಮಂಡಿಸಿದರು. ಪ್ರಾಸಿಕ್ಯೂಷನ್ ಸಲ್ಲಿಸಿದ ಸಾಕ್ಷ್ಯಗಳಲ್ಲಿ ಪರಸ್ಪರ ಹೊಂದಾಣಿಕೆ ಇಲ್ಲ. ಪ್ರಜ್ವಲ್ ತಪ್ಪಿತಸ್ಥ ಎಂದು ತೋರಿಸುವ ಪುರಾವೆಗಳಿಲ್ಲ. 4 ವರ್ಷಗಳ ಬಳಿಕ ದೂರು ದಾಖಲಿಸಲಾಗಿದೆ. ಯಾವ ವಿಶ್ವಾಸಾರ್ಹತೆ ಇಲ್ಲದ ವಿಡಿಯೋವನ್ನು ಸಾಕ್ಷ್ಯವನ್ನಾಗಿ ಪರಿಗಣಿಸಲಾಗಿದೆ. ಫಾರ್ಮ್‌ಹೌಸ್‌ನ ಅಂದಿನ ಮಾಲೀಕರ ಹೇಳಿಕೆ, ಕೃತ್ಯ ನಡೆದ ಸ್ಥಳದಲ್ಲಿದ್ದವರ ಹೇಳಿಕೆ ದಾಖಲಿಸಿಲ್ಲ. ಪ್ರಜ್ವಲ್‌ಗೆ ವಿಧಿಸಿರುವ ಜೀವಾವಧಿ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಜಾಮೀನು ನೀಡುವಂತೆ ವಾದ ಮಂಡನೆ ವೇಳೆ ಮನವಿ ಮಾಡಿದ್ದರು.

# ಡಿ.6 ರಂದು ಜಿಲ್ಲೆಗೆ ಸಿ.ಎಂ.ಭೇಟಿ

• ಪ್ರಜೋದಯ ವರದಿ

**ಹಾಸನ :** ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳ ಉದ್ಘಾಟನೆ, ಕಾಮಗಾರಿಗಳ ಶಂಕುಸ್ಥಾಪನೆ, ವಿವಿಧ ಯೋಜನೆಗಳಡಿ ಫಲಾನು ಭವಿಗಳಿಗೆ ಸವಲತ್ತು ವಿತರಣೆಗಾಗಿ ಮಾಹಿತಿಯನ್ನು ನೀಡುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಮುಖ್ಯಮಂತ್ರಿಯವರು ಡಿ.6 ರಂದು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನಲೆಯಲ್ಲಿ ತಮ್ಮ ತಮ್ಮ ಇಲಾಖೆಯ ಮಾಹಿತಿಗಳನ್ನು ನೀಡುವಂತೆ ನಿರ್ದೇಶನ ನೀಡಿದರು.

# ಇಂದು ಬಿಹಾರ ವಿಧಾನಸಭಾ ಚುನಾವಣಾ ಫಲಿತಾಂಶ

• ಪ್ರಜೋದಯ ವರದಿ

**ನವದೆಹಲಿ:** ಬಿಹಾರ ವಿಧಾನಸಭಾ ಚುನಾವಣೆಯ ಫಲಿತಾಂಶಕ್ಕಾಗಿ ಜನರು ಕುತೂಹಲದಿಂದ ಕಾದಿದ್ದಾರೆ.

ಶುಕ್ರವಾರ ನಡೆಯಲಿರುವ ಮತ ಎಣಿಕೆಯಲ್ಲಿ ಮತಗಟ್ಟೆಗಳ ಸಮೀಕ್ಷೆಗಳಂತೆ ಜೆಡಿಯು ಮುಖ್ಯಸ್ಥ ನಿತೀಶ್ ಕುಮಾರ್ 5ನೇ ಬಾರಿ ಮುಖ್ಯಮಂತ್ರಿ ಗದ್ದುಗೇರಲಿದ್ದಾರೆಯೇ ಅಥವಾ ತೇಜಸ್ವಿ ಯಾದವ್ ನೇತೃತ್ವದ ತೇಜಸ್ವಿ ಯಾದವ್ ಮಹಾಘಟಬಂದನ್ ಮ್ಯಾಜಿಕ್ ಮಾಡಲಿದೆಯೇ ಎಂಬುದನ್ನು ಇಡೀ ದೇಶವೇ ಕಾತುರದಿಂದ ಕಾದಿದೆ.

ಈ ಬಾರಿ ಬಿಹಾರ ಚುನಾವಣೆಯಲ್ಲಿ ದಾಖಲೆಯ ಶೇ 67.13ರಷ್ಟು ಮತದಾನವಾಗಿದೆ. ಒಟ್ಟು 243 ಸದಸ್ಯಬಲದ ಬಿಹಾರ ವಿಧಾನಸಭೆಗೆ ನ.6 ಹಾಗೂ ನ.11ರಂದು ಎರಡು ಹಂತಗಳಲ್ಲಿ ಮತದಾನ ನಡೆದಿತ್ತು. ಮತ ಎಣಿಕೆಯು ಶುಕ್ರವಾರ ಬೆಳಿಗ್ಗೆ 8ಕ್ಕೆ ಆರಂಭವಾಗಲಿದೆ. ಸೋಲು-ಗೆಲುವಿನ ಟ್ರೆಂಡ್ ಬೆಳಿಗ್ಗೆ 9ಕ್ಕೆ ಲಭ್ಯವಾಗಲು ಆರಂಭವಾಗುವ ಸಾಧ್ಯತೆಗಳಿವೆ. ಬಿಹಾರದ 38 ಜಿಲ್ಲೆಗಳಲ್ಲಿ ಒಟ್ಟು 46 ಮತ ಎಣಿಕೆ ಕೇಂದ್ರಗಳನ್ನು ಚುನಾವಣಾ ಆಯೋಗ ತೆರೆದಿದೆ. ಈ ಬಾರಿ ಚುನಾವಣೆಯಲ್ಲಿ ಮತದಾನಕ್ಕೆ ಒಟ್ಟು 7.45 ಕೋಟಿ ಮತದಾರರು ಅರ್ಹತೆ ಪಡೆದಿದ್ದರು. ಕಣದಲ್ಲಿ 2,616 ಅಭ್ಯರ್ಥಿಗಳಿದ್ದು, ಮತಗಳು ದಾಖಲಾಗಿರುವ ವಿದ್ಯುನ್ಮಾನ ಮತಯಂತ್ರಗಳು ಮತ್ತು ವಿವಿಪ್ಯಾಟ್‌ಗಳನ್ನು ಭದ್ರತಾ ಕೊಠಡಿಯಲ್ಲಿ ಇಟ್ಟು ಬಿಗಿ ಭದ್ರತೆ ಒದಗಿಸಲಾಗಿದೆ ಎಂದು ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.



ಕೇಂದ್ರ ವೀಕ್ಷಕರು ಮತ್ತು ಅಭ್ಯರ್ಥಿಗಳ ಏಜೆಂಟರ ಸಮ್ಮುಖದಲ್ಲಿ ಮತ ಎಣಿಕೆ ನಡೆಯಲಿದೆ. ಇದರ ಸಂಪೂರ್ಣ ಪ್ರಕ್ರಿಯೆಯನ್ನು

» ನಾಲ್ಕನೇ ಪುಟದಲ್ಲಿ

# ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿಗೆ ಜಿಲ್ಲಾಧಿಕಾರಿ ಪತ್ರ

## ರೈತರಲ್ಲಿ ಮೂಡಿದ ಆಶಾಭಾವ | ಜಿಲ್ಲಾದ್ಯಂತ 4,81,069 ಮೆಟ್ರಿಕ್ ಟನ್ ಉತ್ಪಾದನೆ ಗುರಿ

• ಪ್ರಜೋದಯ ವರದಿ

**ಹಾಸನ:** ಭತ್ತ ಮತ್ತು ರಾಗಿಯಂತೆ ಮೆಕ್ಕೆಜೋಳವನ್ನು ಬೆಂಬಲ ಬೆಲೆ ಯಡಿ ಖರೀದಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಆಹಾರ ನಾಗರಿಕ ಸರಬರಾಜು ವ್ಯವಹಾರಗಳ ಕಾರ್ಯದರ್ಶಿಗೆ ಪತ್ರ ಬರೆದಿದ್ದು, ರೈತರಲ್ಲಿ ಆಶಾಭಾವ ಮೂಡಿಸಿದೆ.

ಮುಸುಕಿನ ಜೋಳ ಈ ಬಾರಿ ಬಿಳಿಸುಳಿ ರೋಗದಿಂದ ನಲುಗಿದ್ದು, ಅನ್ನದಾತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಳಪೆ ಬಿತ್ತನೆ ಬೀಜ ಹಾಗು ಹವಾ ಮಾನ ವೈಪರೀತ್ಯದಿಂದ ನಿರೀಕ್ಷಿತ ಇಳುವರಿ ಸಿಕ್ಕಿಲ್ಲ. ಇರುವ ಅಲ್ಪ ಬೆಳೆ ಯನ್ನಾದರೂ ಬೆಂಬಲ ಬೆಲೆಯಡಿ ಖರೀದಿಸಿ ನೆರವಾಗಬೇಕೆಂದು ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಪದಾಧಿಕಾರಿಗಳು ಆಗ್ರಹಿಸಿದ ಹಿನ್ನಲೆಯಲ್ಲಿ ಮುತುವರ್ಜಿ ವಹಿಸಿರುವ ಜಿಲ್ಲಾಧಿಕಾರಿ ಸರ್ಕಾರದ ಮಟ್ಟದಲ್ಲಿ ಚರ್ಚೆಗೆ ವೇದಿಕೆ ಸೃಷ್ಟಿಸಿದ್ದಾರೆ.

### 1700 ರೂ. ದರ ನಿಗದಿ

ಪ್ರಸ್ತುತ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್ ಮೆಕ್ಕೆ ಜೋಳಕ್ಕೆ 1700 ರಿಂದ 1800 ರೂ. ದರ ನಿಗದಿ ಪಡಿಸಲಾಗಿದೆ. ಸಾಲ ಸೋಲ ಮಾಡಿ ಬೆಳೆ ಕೈಗೊಂಡಿದ್ದ ರೈತರು ಆರ್ಥಿಕ ಸಮಸ್ಯೆಯಿಂದ ಪಾರಾಗಲು ಕಡಿಮೆ ಬೆಲೆಗೆ ಮಾರಾಟ ಮಾಡುವಂತಾಗಿದೆ. ಆದರೆ ಮಧ್ಯಪ್ರದೇಶ ಸೇರಿ ಮತ್ತಿತರ ರಾಜ್ಯಗಳಲ್ಲಿ ಪ್ರತಿ ಕ್ವಿಂಟಾಲ್‌ಗೆ 2,400 ರೂ.ನಂತೆ ಖರೀದಿಸಲಾಗು ತ್ತಿದೆ. ಅದೇ ನಿಯಮದಂತೆ ನಮ್ಮ ರಾಜ್ಯದಲ್ಲೂ ಖರೀದಿ ಪ್ರಾರಂಭಿಸ ಬೇಕೆನ್ನುವುದು ರೈತ ಮುಖಂಡರ ಆಗ್ರಹ.



### ಮೆಕ್ಕೆಜೋಳ ಖರೀದಿ ಸುಲಭವಲ್ಲ

ಕೃಷಿ ಹಾಗು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳ ಪ್ರಕಾರ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಅಸಾಧ್ಯದ ಪ್ರಕ್ರಿಯೆ ಎನ್ನಲಾಗಿದೆ. ರಾಗಿ ಹಾಗು ಭತ್ತವನ್ನು ಪಡಿತರ ವಿತರಣೆಗೆ ಬಳಸುವುದರಿಂದ ಬೆಂಬಲ ಬೆಲೆಯಡಿ ಅವಶ್ಯಕತೆಗೆ ತಕ್ಕಷ್ಟು ಖರೀದಿ ಮಾಡಲಾಗುತ್ತದೆ. ಮೆಕ್ಕೆ ಜೋಳವನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ವಿತರಿಸದಿರುವುದರಿಂದ ಅದನ್ನು ಖರೀದಿಸಿದರೆ ಪ್ರಯೋಜನವಿಲ್ಲ. ಆದ್ದರಿಂದ ಖರೀದಿ ಮಾಡುವುದು ಸುಲಭವಲ್ಲ. ರೈತರ ಸಮಸ್ಯೆಗೆ ಸ್ಪಂದಿಸಿ ಖರೀದಿಸಲು ಸೂಚಿಸಿದರೆ ಪ್ರಕ್ರಿಯೆ ಪ್ರಾರಂಭಿಸುತ್ತೇವೆಂದು ಅಧಿಕಾರಿಗಳು ಹೇಳುತ್ತಾರೆ.

> **ಮೆಕ್ಕೆ ಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಅವರು ಆಹಾರ ಮತ್ತು ನಾಗರಿಕ ಸರಬರಾಜು ವ್ಯವಹಾರಗಳ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ. ಸರ್ಕಾರದ ನಿರ್ಧಾರದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.**
>
> **-ಪಿ.ರಮೇಶ್‌ಕುಮಾರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ**

> **ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿಸುವಂತೆ ಜಿಲ್ಲಾಡಳಿತ ಮೂಲಕ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದೇವೆ. ನಮ್ಮ ಮನವಿಗೆ ಸ್ಪಂದಿಸಿ ಜಿಲ್ಲಾಧಿಕಾರಿ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರನ್ನು ಭೇಟಿ ಮಾಡಲಾಗುವುದು.**
>
> **-ಪಿ.ಭೂಮೇಶ್, ರೈತ ಮುಖಂಡ**

ಜಿಲ್ಲೆಯು 2,29,974 ಹೆಕ್ಟೇರ್ ಕೃಷಿ ಭೂಮಿ ಹೊಂದಿದೆ. 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 1,01,065 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆ ಕೈಗೊಳ್ಳಲಾಗಿದೆ. ಅಂದರೆ ಶೇ.40 ರಷ್ಟು ಭೂಮಿಯಲ್ಲಿ ಮೆಕ್ಕೆಜೋಳ ಬೆಳೆಯಲಾಗುತ್ತಿದೆ. ಹೈನುಗಾರಿಕೆ ಹಾಗು ವಾತಾವರಣಕ್ಕೆ ಜೋಳದ ಫಸಲು ಚೆನ್ನಾಗಿರುತ್ತದೆ. ಪ್ರಸ್ತುತ ಬೆಳೆಯು ಕಟಾವಿನ ಹಂತದಲ್ಲಿದ್ದು, 4,81,069 ಮೆಟ್ರಿಕ್ ಟನ್ ಉತ್ಪಾದನೆ ಗುರಿ ಹಾಕಿಕೊಳ್ಳಲಾಗಿದೆ. ಮಾರುಕಟ್ಟೆಯಲ್ಲಿ 1700 ರಿಂದ 1800 ರೂ.ಗೆ ಮಾರಾಟವಾಗುತ್ತಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಕ್ವಿಂಟಾಲ್‌ಗೆ 400 ರೂ. ಇಳಿಕೆಯಾಗಿದೆ. ಪ್ರತಿ ಕ್ವಿಂಟಾಲ್‌ಗೆ 2400 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿದ್ದರೂ ರೈತರು ಒತ್ತಾಯ ಪೂರ್ವಕವಾಗಿ ಕಡಿಮೆ ಬೆಲೆಗೆ ಮಾರಾಟ ಮಾಡುವಂತಾಗಿದೆ.

### ಶೇ.5 ರಿಂದ 10 ರಷ್ಟು ಪಶು ಆಹಾರ ಉತ್ಪಾದನೆಗೆ

ಜಿಲ್ಲೆಯಲ್ಲಿನ ಮೆಕ್ಕೆಜೋಳದ ಒಟ್ಟು ಉತ್ಪಾದನೆಯಲ್ಲಿ ಶೇ.5 ರಿಂದ 10 ರಷ್ಟು ಮಾತ್ರ ಪಶು ಆಹಾರ ಉತ್ಪಾದನೆಗಾಗಿ ಕೆಎಂಎಫ್ ಖರೀದಿ ಮಾಡುತ್ತಿದೆ. ಉಳಿದ ರೈತರು ಬೆಳೆ ಮಾರಾಟಕ್ಕೆ ಸ್ಥಳೀಯ ಮಾರುಕಟ್ಟೆಯನ್ನೇ ಅವಲಂಬಿಸುವಂತಾಗಿದೆ. ನಷ್ಟದಿಂದ ಪಾರು ಮಾಡಲು ಬೆಂಬಲ ಬೆಲೆಯಡಿ ಖರೀದಿಸಲು ಖರೀದಿ ಕೇಂದ್ರ ತೆರೆಯಲು ಅನುಮತಿ ಮಾಡಿಕೊಡುವಂತೆ ಜಿಲ್ಲಾಧಿಕಾರಿ ಲತಾಕುಮಾರಿ ಕೋರಿದ್ದಾರೆ.




# ಹಾರನಹಳ್ಳಿಯಲ್ಲಿ ದೀಪೋತ್ಸವ

• ಪ್ರಜೋದಯ ವರದಿ

**ಅರಸೀಕೆರೆ:** ತಾಲ್ಲೂಕಿನ ಹಾರನಹಳ್ಳಿ ಕೋಡಿಮಠದಲ್ಲಿ ನ.22ರ ಶನಿವಾರ ಸಂಜೆ 6 ಗಂಟೆಗೆ ಕಾರ್ತಿಕ ಮಾಸದ ಅಂಗವಾಗಿ ದೀಪೋತ್ಸವ ಹಮ್ಮಿಕೊಳ್ಳಲಾಗಿದೆ.ಶ್ರೀ ಮಠದ ಪೀಠಾಧ್ಯಕ್ಷ ಶ್ರೀ ಶಿವಾ ನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಧಾರ್ಮಿಕ ಕೈಂಕರ್ಯ ನೆರವೇರಲಿದ್ದು ವಿವಿಧ ಮಠಾಧೀಶರು, ಜನಪ್ರತಿನಿಧಿಗಳು ಹಾಗು ವಿವಿಧ ಕ್ಷೇತ್ರದ ಸಾಧಕರು ಪಾಲ್ಗೊಳ್ಳಲಿದ್ದಾರೆ.

ಸುಮಾರು 800 ವರ್ಷಗಳ ಇತಿಹಾಸ ಹೊಂದಿರುವ ಕತ್ತೃ ಗದ್ದುಗೆ ನೀಲಮ್ಮಜ್ಯಯ್ಯ ಮತ್ತು ಜೀವಂತ ಸಮಾಧಿಯಾಗಿರುವ ಪವಾಡ ಪುರುಷ ಶ್ರೀ ಶಿವಲಿಂಗ ಸ್ವಾಮೀಜಿ ಅವರ ಗದ್ದುಗೆ ಕ್ಷೇತ್ರದ ಕೇಂದ್ರಬಿಂದು. ಲೌಕಿಕವಾಗಿ ಬಹಿರಂಗದ ಕತ್ತಲೆಯನ್ನು ಜ್ಯೋತಿ ತೊಲಗಿಸಿದರೆ ಅಲೌಕಿಕವಾಗಿ ಮನದ ಕತ್ತಲೆಯನ್ನು ಅಂತರಂಗದ ಅಜ್ಞಾನವನ್ನು ನಿವಾರಿಸುವ ಶಕ್ತಿ ಜ್ಞಾನಕ್ಕಿದೆ. ಆ ನಿಟ್ಟಿನಲ್ಲಿ ಸ್ವಾಮೀಜಿ ಅವರು ಪ್ರತಿವರ್ಷ ದೀಪೋತ್ಸವ ಆಚರಿಸುತ್ತಿದ್ದಾರೆ. ಶ್ರೀ ಶಿವಾನಂದ ಶಿವಯೋಗಿ ಸ್ವಾಮೀಜಿ ಹಾರನಹಳ್ಳಿ ಮಾತ್ರವಲ್ಲದೆ ಬಿಕ್ಕೋಡು ಮಠವನ್ನುಅಭಿವೃದ್ಧಿಗೊಳಿಸಿರುವುದು ಅವರ ವಿದ್ವತ್ತಿಗೆ ಸಾಕ್ಷಿ. ಶ್ರೀ ಮಠದ ಅಭಿವೃದ್ಧಿ ಕಾರ್ಯಗಳು ಶ್ರೀಗಳ ಕ್ರಿಯಾಶೀಲತೆಗೆ ಕೈಗನ್ನಡಿಯಾಗಿದೆ.

### ಶ್ರಮ ಶಕ್ತಿ ನೀತಿ ವಿರುದ್ಧದ ಹೋರಾಟ ತೀವ್ರಗೊಳಿಸಿ । ಸಿಐಟಿಯು ರಾಷ್ಟ್ರೀಯ ಅಧ್ಯಕ್ಷೆ ಡಾ.ಹೇಮಲತಾ ಕರೆ

# ಕೇಂದ್ರ ಸರ್ಕಾರದಿಂದ ಕಾರ್ಮಿಕರ ಕಾನೂನು ತಿದ್ದುಪಡಿ

• ಪ್ರಜೋದಯ ವರದಿ

**ಹಾಸನ:** ಕಾರ್ಮಿಕರು ಶತಮಾನಗಳಿಂದ ಹೋರಾಟದ ಮೂಲಕ ಪಡೆದ ಹಕ್ಕುಗಳನ್ನು ಕೇಂದ್ರ ಸರ್ಕಾರ ಕಾನೂನು ತಿದ್ದುಪಡಿ ಮೂಲಕ ನಾಶಮಾಡುತ್ತಿದೆ. ದುಡಿಯುವ ಜನರ ವಿರೋಧಿ ನೀತಿಗಳ ವಿರುದ್ಧ ಹೋರಾಟ ತೀವ್ರಗೊಳಿಸಬೇಕಾಗಿದೆ ಎಂದು ಸಿಐಟಿಯು ರಾಷ್ಟ್ರೀಯ ಅಧ್ಯಕ್ಷೆ ಡಾ.ಹೇಮಲತಾ ಅವರು ಕರೆ ನೀಡಿದರು.

ನಗರ ಅಂಬೇಡ್ಕರ್ ಭವನದಲ್ಲಿ ಗುರುವಾರದಿಂದ ಆರಂಭವಾದ ಸಿಐಟಿಯು 16ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಶ್ರಮ ಶಕ್ತಿ ನಿರ್ಣಾಯಕ ಹೋರಾಟ ನಡೆಸಬೇಕೆಂದು ಹೇಳಿದರು.

ಶ್ರಮ ಶಕ್ತಿ ಯೋಜನೆ ಮೂಲಕ ಕಾರ್ಮಿಕ ಸಚಿವಾಲಯವನ್ನೇ ನಿತ್ರಾಣಗೊಳಿಸುವ ಕೆಲಸ ನಡೆಯುತ್ತಿದೆ. ಕಾರ್ಮಿಕ ಇಲಾಖೆ ಕಾರ್ಮಿಕರ ರಕ್ಷಣೆ ಮಾಡುವ ಬದಲು ಮಾಲೀಕರ ಪರವಾಗಿ ವಕಾಲತ್ತು ವಹಿಸಿ ಸಂಪರ್ಕ ಸಾಧನ ಮಾಡಲಾಗುತ್ತಿದೆ. ಶ್ರಮ ಶಕ್ತಿ ಯೋಜನೆ ಸಂವಿಧಾನಾತ್ಮಕ ಹಕ್ಕುಗಳನ್ನು ನಾಶ ಮಾಡುವ ಮನುಸ್ಮೃತಿ ಆಧಾರಿತ ನೀತಿಗಳ ಜಾರಿಗೆ ಸಂಚು ರೂಪಿಸಿದೆ. ಮಹಿಳಾ ಶೋಷಣೆ, ದೀನ ದಲಿತರ ಶೋಷಣೆ ಈ ನೀತಿಯಲ್ಲಿ ಅಡಗಿದೆ. ಇದು ಆರ್‌ಎಸ್‌ಎಸ್ ನೀತಿಗಳನ್ನು ದುಡಿಯೊ ಜನರ ಮೇಲೆ ಹೇರೋ ಯತ್ನವೆಂದು ಆಕ್ರೋಶ ಹೊರ ಹಾಕಿದರು.



### ಕ್ರಾಂತಿ ಘೋಷಣೆ

ಉದ್ಘಾಟನಾ ಸಮಾರಂಭಕ್ಕೂ ಮೊದಲು ಕೆಂಪು ವಸ್ತ್ರಧಾರಿಗಳ ಮುಗಿಲು ಮುಟ್ಟುವ ಕ್ರಾಂತಿ ಘೋಷಣೆ ನಡುವೆ ಸಿಐಟಿಯು ರಾಜ್ಯ ಅಧ್ಯಕ್ಷೆ ಎಸ್.ವರಲಕ್ಷ್ಮಿ ಧ್ವಜಾರೋಹಣ ನೆರವೇರಿಸಿದರು. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿರುವ ಕಾರ್ಮಿಕ ಪ್ರತಿನಿಧಿಗಳನ್ನು ಸ್ವಾಗತ ಸಮಿತಿ ಗೌರವಾಧ್ಯಕ್ಷ ಹೆಚ್.ಎನ್. ಪರಮಶಿವಯ್ಯ ಸ್ವಾಗತಿಸಿದರು.

ಕೇಂದ್ರ ಸರ್ಕಾರ ಕಳೆದ ಹನ್ನೊಂದು ವರ್ಷಗಳಿಂದ ಕಾರ್ಮಿಕ ಸಂಘಟನೆಗಳ ಜೊತೆಗೆ ಕೇಂದ್ರ ಸರ್ಕಾರ ಕನಿಷ್ಠ ಸಮಾಲೋಚನೆ ನಡೆಸಲಿಲ್ಲ. ಕಾರ್ಮಿಕ ಹಕ್ಕುಗಳ ಜಾರಿ ಬಗ್ಗೆ ಭಾರತದ ಕಾರ್ಮಿಕ ಸಂಘಟನೆಗಳ ಸಮ್ಮೇಳನವನ್ನೇ ನಡೆಸಿಲ್ಲ. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರ ಬಂದ ನಂತರ ಕಾರ್ಮಿಕ ಕಾನೂನಿನ ಉಲ್ಲಂಘನೆ ಕ್ರಿಮಿನಲ್ ಅಪರಾಧ ಅಲ್ಲ ಎನ್ನೋ ನೀತಿ ಜಾರಿಯಾಗಿದೆ. ಬದಲಾಗಿ ಅದು ಕೇವಲ ದಂಡಕ್ಕೆ ಸೀಮಿತಗೊಳಿಸಲಾಗಿದೆ ಎಂದು ದೂರಿದರು.

ಕಾರ್ಮಿಕರು ಹೋರಾಟಕ್ಕೆ ಕರೆ ನೀಡಿದರೆ ಅವರನ್ನು ಗೃಹ ಬಂಧನಕ್ಕೆ ಒಳಪಡಿಸುವ ಮೂಲಕ ಕಾರ್ಮಿಕರ ಪ್ರಜಾಸತ್ತಾತ್ಮಕ ಹಕ್ಕುಗಳನ್ನ ನಾಶ

» ನಾಲ್ಕನೇ ಪುಟದಲ್ಲಿ



E-mail : prajodayahsn@gmail.com
ಪ್ರಜೋದಯ
14 ನವೆಂಬರ್ 2025 ಶುಕ್ರವಾರ

# ಸಿನಿ ಪ್ರಜಾ




## ಸೃಜನ್ ಲೋಕೇಶ್ ಅಭಿನಯದ ಬಹು ನಿರೀಕ್ಷಿತ ಜಿಎಸ್‌ಟಿ ಟ್ರೈಲರ್ ರಿಲೀಸ್!

ಟಾಕಿಂಗ್ ಸ್ಟಾರ್ ಸೃಜನ್ ಲೋಕೇಶ್ ಚೊಚ್ಚಲ ನಿರ್ದೇಶನದ ಜೊತೆಗೆ ನಾಯಕ ನಟನಾಗಿ ಅಭಿನಯಿಸಿರುವ ಬಹುನಿರೀಕ್ಷಿತ ಜಿಎಸ್‌ಟಿ ಚಿತ್ರದ ಟ್ರೈಲರ್ ರಿಲೀಸ್ ಆಗಿದೆ.

ಸಂದೇಶ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಸಂದೇಶ್ ಎನ್. ಅವರು ನಿರ್ಮಿಸಿರುವ ಈ ಚಿತ್ರವು ಹಾರರ್-ಕಾಮಿಡಿ ಕಥಾಹಂದರವನ್ನು ಹೊಂದಿದೆ. ಚಿತ್ರಕ್ಕೆ ಚಂದನ್ ಶೆಟ್ಟಿ ಅವರ ಸಂಗೀತ ಮತ್ತು ಸುರೇಶ್ ಅವರ ಛಾಯಾಗ್ರಹಣವಿದೆ.

ಈ ಚಿತ್ರದಲ್ಲಿ ಸೃಜನ್ ಲೋಕೇಶ್ ಅವರಿಗೆ ನಾಯಕಿಯಾಗಿ ರಜನಿ ಭಾರದ್ವಾಜ್ ನಟಿಸಿದ್ದಾರೆ. ಜೊತೆಗೆ ಅವರ ಗಿರಿಜಾ ಲೋಕೇಶ್ ಮತ್ತು ಸೃಜನ್ ಅವರ ಪುತ್ರ ಸುಕೃತ್ ಕೂಡ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಉಳಿದಂತೆ ಪ್ರಮೋದ್ ಶೆಟ್ಟಿ, ಶೋಭರಾಜ್, ಶರತ್ ಲೋಹಿತಾಶ್ವ, ನಿವೇದಿತಾ ಗೌಡ, ತಬಲಾ ನಾಣಿ, ರವಿಶಂಕರ್ ಗೌಡ ಮತ್ತು ವಿನೋದ್ ಗೊಬ್ಬರಗಾಲ ಮತ್ತಿತರರ ತಾರಾಬಳಗವಿದೆ. ಈ ಚಿತ್ರವು ನವೆಂಬರ್ 28 ರಂದು ರಾಜ್ಯಾದ್ಯಂತ ತೆರೆಗೆ ಬರಲು ಸಿದ್ಧವಾಗಿದೆ.

## 14-11-2025 ದಿನ ಭವಿಷ್ಯ

**ಮೇಷ:** ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿ ಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ಪ್ರಣಯ ಮತ್ತು ಸಾಮಾಜಿಕವಾಗಿ ಬೆರೆಯುವುದು ಬಾಕಿಯಿರುವ ಕೆಲಸಗಳ ಹೊರತಾಗಿ ನಿಮ್ಮ ಮನಸ್ಸಿನ ಮೇಲೆ ಪ್ರಭಾವ ಬೀರುತ್ತವೆ.

**ವೃಷಭ:** ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಒಳ್ಳೆಯ ದಿನ ಕಾನೂನು ಸಲಹೆ ಪಡೆಯಲು ವಕೀಲರನ್ನು ಭೇಟಿ ಮಾಡಿ.

**ಮಿಥುನ:** ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ. ದೂರು ನೀಡಲು ಯಾವುದೇ ಅವಕಾಶ ನೀಡಬೇಡಿ.

**ಕರ್ಕಾಟಕ:** ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ - ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲುವಿಫಲವಾಗಿನಿಮಗೆನಿರಾಶೆಯುಂಟುಮಾಡಬಹುದು.

**ಸಿಂಹ:** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ.

**ಕನ್ಯಾ:** ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಬುದ್ಧಿವಂತ ಹೂಡಿಕೆಗಳು ಮಾತ್ರ ಆದಾಯಗಳನ್ನು ನೀಡುತ್ತವೆ- ಆದ್ದರಿಂದ ನೀವು ಕಷ್ಟಪಟ್ಟುಗಳಿಸಿದ ನಿಮ್ಮ ಹಣವನ್ನು ಎಲ್ಲಿ ಹೂಡಬಯಸುತ್ತೀರೆನ್ನುವಲ್ಲಿ ಖಚಿತತೆಯಿರಲಿ. ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ.

**ತುಲಾ:** ಹಾಸ್ಯಪ್ರಜ್ಞೆಯಿರುವ ಸಂಬಂಧಿಕರ ಸಂಘ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ ಮತ್ತು ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು. ಪ್ರೀತಿಯಿಂದ ಪ್ರೀತಿ ಜನಿಸುತ್ತದೆಂದು ನೆನಪಿಡಿ.

**ವೃಶ್ಚಿಕ:** ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರುಚೈತನ್ಯ ಹೊಂದುತ್ತೀರಿ. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.

**ಧನು:** ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ ಮತ್ತು ಬುದ್ಧಿವಂತಿಕೆಯನ್ನಿರಿಸಿದೆ - ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

**ಮಕರ:** ಅನಾವಶ್ಯಕ ಉದ್ವೇಗ ಮತ್ತು ಚಿಂತೆ ನಿಮ್ಮ ಜೀವನದ ರಸ ಹೀರಬಹುದು ಮತ್ತು ನಿಮ್ಮನ್ನು ಖಾಲಿಯಾಗಿಸಬಹುದು. ಇವುಗಳನ್ನು ತೊಡೆದುಹಾಕದಿದ್ದಲ್ಲಿ ಅವು ಕೇವಲ ನಿಮ್ಮ ಸಮಸ್ಯೆಯನ್ನು ಉಲ್ಬಣಗೊಳಿಸುತ್ತವೆ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು. ಇಂದು ಪ್ರೀತಿಯ ಅನುಪಸ್ಥಿತಿಯ ಭಾವನೆ ಬರಬಹುದು.

**ಕುಂಭ:** ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ - ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ಇಂದು ಟಿವಿ ಅಥವಾ ಮೊಬೈಲ್ ನಲ್ಲಿ ಯಾವುದೇ ಚಲಚಿತ್ರ ನೋಡುವಲ್ಲಿ ನೀವು ನಿರತರಾಗಿರಬಹುದು.

**ಮೀನ:** ಆರೋಗ್ಯ ವಿಷಯಗಳಲ್ಲಿ ನಿಮ್ಮ ಬಗ್ಗೆ ನೀವೇ ನಿರ್ಲಕ್ಷ್ಯ ಮಾಡದಂತೆ ಎಚ್ಚರಿಕೆ ವಹಿಸಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನಿಮ್ಮ ಕುಟುಂಬದ ಬೆಂಬಲದಿಂದ ನೀವು ಚೆನ್ನಾಗಿ ಕೆಲಸ ಮಾಡುತ್ತಿದ್ದೀರಿ ಎಂದು ಅರಿವಾಗುತ್ತದೆ.

# ಒಂದಲ್ಲ ಎರಡಲ್ಲ ಒಟ್ಟು 7 ಕನ್ನಡ ಚಿತ್ರಗಳು ಈ ವಾರ ರಿಲೀಸ್



ಕಾಂತಾರ'-1 ಅಬ್ಬರ ಕಮ್ಮಿ ಆಯ್ತು. ಓಟಿಟಿಗೂ ಬಂದಾಯ್ತು. ಡಿಸೆಂಬರ್‌ನಲ್ಲಿ ಕನ್ನಡದ ದೊಡ್ಡ ದೊಡ್ಡ ಸಿನಿಮಾಗಳು ತೆರೆಗಪ್ಪಳಿಸುತ್ತಿವೆ. ಆದರೆ ರಾಜ್ಯೋತ್ಸವ ಮಾಸವನ್ನು ಯಾರೂ ಬಳಸಿಕೊಳ್ಳುತ್ತಿಲ್ಲ. ದೊಡ್ಡ ಸಿನಿಮಾಗಳು ಈ ತಿಂಗಳು ಬರ್ತಿಲ್ಲ.

ಕಳೆದ ವಾರ ಕೂಡ ಸಣ್ಣ ಸಿನಿಮಾಗಳೇ ಪ್ರೇಕ್ಷಕರ ಮುಂದೆ ಬಂದಿತ್ತು. ಈ ವಾರ ಒಂದಷ್ಟು ಇಂಟ್ರೆಸ್ಟಿಂಗ್ ಸಿನಿಮಾಗಳು ಬಿಡುಗಡೆ ಆಗ್ತಿದೆ. ವಿಭಿನ್ನ ಜಾನರ್ ಚಿತ್ರಗಳು ಪಟ್ಟಿಯಲ್ಲಿದೆ. ಟ್ರೈಲರ್, ಸಾಂಗ್ಸ್ ರಿಲೀಸ್ ಆಗಿ ಸದ್ದು ಮಾಡಿ ಭರವಸೆ ಮೂಡಿಸಿವೆ. ಒಂದಲ್ಲ ಎರಡಲ್ಲ 7 ಸಿನಿಮಾಗಳು ಕನ್ನಡ ಪ್ರೇಕ್ಷಕರ ಮುಂದೆ ಬರ್ತಿದೆ.

**1. ಗತವೈಭವ:** ಸಿಂಪಲ್ ಸುನಿ ನಿರ್ದೇಶನದ ಗತವೈಭವ ಸಿನಿಮಾ ಕೊನೆಗೂ ಈ ವಾರ ಬಿಡುಗಡೆ ಆಗ್ತಿದೆ. ಬಹಳ ಹಿಂದೆ ಸೆಟ್ಟೇರಿದ್ದ ಸಿನಿಮಾ ಕಾರಣಾಂತರಗಳಿಂದ ತಡವಾಗಿತ್ತು. ದುಷ್ಯಂತ್ ಜೊತೆ ಆಶಿಕಾ ರಂಗನಾಥ್ ಈ ಚಿತ್ರದಲ್ಲಿ ನಟಿಸಿದ್ದಾರೆ. ಇಬ್ಬರೂ ಬೇರೆ ಬೇರೆ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ರಾಕ್ಷಸ, ವಾಸ್ಕೋಡಗಾಮನ ಸಹಚರ, ಕಂಬಳದ ವೀರ ಹೀಗೆ ಭಿನ್ನ ವಿಭಿನ್ನ ಅವತಾರದಲ್ಲಿ ದುಷ್ಯಂತ್ ಮಿಂಚಿದ್ದಾರೆ. ಎಲ್ಲಾ ಕಡೆ ಆಶಿಕಾ ಆತನಿಗೆ ಜೊತೆಯಾಗಿ ಕಾಣಿಸಿಕೊಳ್ಳುತ್ತಾರೆ. ಚಿತ್ರದಲ್ಲಿ ನಾಯಕ ಗ್ರಾಫಿಕ್ ಡಿಸೈನರ್ ಆಗಿದ್ದು. ಆತನ ಕಲ್ಪನೆಯಲ್ಲಿ ಸಿನಿಮಾ ಕಥೆ ಸಾಗುತ್ತದೆ.

**2. ಲವ್ ಓಟಿಪಿ:** ಅನೀಶ್ ತೇಜೇಶ್ವರ್ ನಿರ್ದೇಶಿಸಿ ನಟಿಸಿರುವ ರೊಮ್ಯಾಂಟಿಕ್ ಸಿನಿಮಾ ಲವ್ ಓಟಿಪಿ ಕೂಡ ಈ ವಾರ ಪ್ರೇಕ್ಷಕರ ಮುಂದೆ ಬರಲಿದೆ. ಎಂ. ವಿಜಯ್ ರೆಡ್ಡಿ ಚಿತ್ರಕ್ಕೆ ಹಣ ಹೂಡಿದ್ದಾರೆ. ಅನೀಶ್ ತೇಜೇಶ್ವರ್ ಜೊತೆ ಪ್ರಮೋದಿನಿ, ಸ್ವರೂಪಿಣಿ ಚಿತ್ರದಲ್ಲಿ ಬಣ್ಣ ಹಚ್ಚಿದ್ದಾರೆ. ಲವ್, ಆಕ್ಷನ್, ಫ್ಯಾಮಿಲಿ ಸೆಂಟಿಮೆಂಟ್, ಕ್ರಿಕೆಟ್ ಹೀಗೆ ಸಾಕಷ್ಟು ವಿಚಾರಗಳು ಈ ಚಿತ್ರದಲ್ಲಿದೆ.

ಇಬ್ಬಿಬ್ಬರು ಹುಡುಗಿಯರನ್ನು ಒಮ್ಮೆಲೆ ಪ್ರೀತಿಸಿ ಸಂಕಷ್ಟಕ್ಕೆ ಸಿಲುಕುವ ನಾಯಕ ಕಥೆ ಚಿತ್ರದಲ್ಲಿದೆ. ಇದೇ ಕಾರಣಕ್ಕೆ ತಾನು ದೊಡ್ಡ ಕ್ರಿಕೆಟರ್ ಆಗಬೇಕು ಎನ್ನುವ ಕನಸಿಗೂ ಅಡ್ಡಿಯಾಗುತ್ತದೆ. ಅದನ್ನೆಲ್ಲಾ ಮೀರಿ ಹೇಗೆ ನಾಯಕ ಅಕ್ಷಯ್ ಗೆಲ್ತಾನೆ ಅನ್ನೋದು ಸಿನಿಮಾ ಕಥೆ.

**3. ಉಡಾಳ:** ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ನಿರ್ಮಾಣದ ಸಿನಿಮಾ ಉಡಾಳ. ಇದು ಪಕ್ಕಾ ಜವಾರಿ ಸಿನಿಮಾ. ಈ ಹಿಂದೆ ಪದವಿಪೂರ್ವ ಚಿತ್ರದಲ್ಲಿ ನಟಿಸಿದ್ದ ಪೃಥ್ವಿ ಶಾಮನೂರು ನಟನೆಯ ಎರಡನೇ ಸಿನಿಮಾ. ನವೀನ್ ಶಂಕರ್ ಹಾಗೂ ನಿಶ್ವಿಕಾ ನಾಯ್ಡು ಇತ್ತೀಚೆಗೆ ಚಿತ್ರದ ಟ್ರೈಲರ್ ಲಾಂಚ್ ಮಾಡಿದ್ದರು. ಬಹುತೇಕ ಉತ್ತರ ಕರ್ನಾಟಕದಲ್ಲಿ ನಡೆಯುವ ಕಥೆ ಇದಾಗಿದ್ದು ಅಲ್ಲಿನ ಭಾಷೆಯನ್ನೇ ಬಳಸಿಕೊಳ್ಳಲಾಗಿದೆ. ಅಮೋಲ್ ಪಾಟೀಲ್ ಆಕ್ಷನ್ ಕಟ್ ಹೇಳಿದ್ದಾರೆ.

ಪೃಥ್ವಿಗೆ ಹೃತಿಕಾ ನಾಯಕಿ ಯಾಗಿದ್ದಾರೆ. ಇನ್ನುಳಿದಂತೆ ಬಾಲ ರಾಜವಾಡಿ, ಮಾಳು ನಿಪ್ನಾಳ, ಹರೀಶ್ ಹಿರಿಯೂರು, ಸುಮಿತ್ ಸಂಕೋಜಿ, ವಾದಿರಾಜ್ ಬಬ್ಲಾಡಿ, ಪ್ರವೀಣ್ ಗಸ್ತಿ, ಗೋವಿಂದೇಗೌಡ, ದಯಾನಂದ ಬೀಳಗಿ ಚಿತ್ರದ ತಾರಾಗಣದಲ್ಲಿದ್ದಾರೆ. ಚೇತನ್ ಡ್ಯಾವಿ ಸಂಗೀತ ಚಿತ್ರಕ್ಕಿದ್ದು ಎಲ್ಲಾ ಹಾಡುಗಳಿಗೆ ಯೋಗರಾಜ್ ಭಟ್ ಸಾಹಿತ್ಯ ಬರೆದಿದ್ದಾರೆ.

ಈ ಮೂರು ಸಿನಿಮಾಗಳ ಜೊತೆಗೆ ಹೊಸಬರ ಇನ್ನು 4 ಚಿತ್ರಗಳು ಈ ವಾರ ತೆರೆಗೆ ಬರ್ತಿವೆ. ಕೈಟ್ ಬ್ರದರ್ಸ್ ಎಂಬ ಮಕ್ಕಳ ಸಿನಿಮಾ ಕೂಡ ಲಿಸ್ಟ್‌ನಲ್ಲಿದೆ. ಪ್ರೇಮಂ ಮಧುರಂ ಎನ್ನುವ ಮತ್ತೊಂದು ಲವ್ ಸ್ಟೋರಿ ಸಿನಿಮಾ ಬಿಡುಗಡೆಗೆ ಅಣಿಯಾಗಿದೆ. ಇನಿಯನ ಆತ್ಮ ಎಂಬ ಹಾರರ್ ಸಿನಿಮಾ ಕೂಡ ತೆರೆಗಪ್ಪಳಿಸಲು ಸಜ್ಜಾಗಿದೆ. ಬಹಳ ಹಿಂದೆ ಶುರುವಾಗಿದ್ದ ಹಿಕೋರ ಚಿತ್ರಕ್ಕೂ ಬಿಡುಗಡೆ ಭಾಗ್ಯ ಸಿಗಲಿದೆ.






# ದೊಡ್ಡದಾಗಿ ಸಿಗ್ನಲ್ ಕೊಟ್ಟ ಡೆವಿಲ್ ಟೀಂ

ದರ್ಶನ್ ನಟನೆಯ ಡೆವಿಲ್ ಸಿನಿಮಾ ಬಿಡುಗಡೆಗೆ ಇನ್ನೊಂದು ತಿಂಗಳು ಬಾಕಿಯಿದೆ. ಈಗಾಗಲೇ ಅಭಿಮಾನಿಗಳು ಕೌಂಟ್ ಡೌನ್ ಶುರು ಮಾಡಿದ್ದಾರೆ. ರೇಣುಕಾಸ್ವಾಮಿ ಪ್ರಕರಣದಲ್ಲಿ ದರ್ಶನ್ ಸದ್ಯ ಜೈಲಿನಲ್ಲಿದ್ದಾರೆ. ಅವರ ಅನುಪಸ್ಥಿತಿಯಲ್ಲೇ ಸಿನಿಮಾ ಬಿಡುಗಡೆ ಬಹುತೇಕ ಖಚಿತವಾಗಿದೆ.

ಡಿಸೆಂಬರ್ 12ಕ್ಕೆ ಆಕ್ಷನ್ ಥ್ರಿಲ್ಲರ್ ಡೆವಿಲ್ ಸಿನಿಮಾ ತೆರೆಗೆ ತರಲು ಮುಹೂರ್ತ ಫಿಕ್ಸ್ ಆಗಿದೆ. ಈಗಾಗಲೇ ಚಿತ್ರದ ಟೀಸರ್ ಹಾಗೂ 2 ಸಾಂಗ್ ಬಂದು ಅಭಿಮಾನಿಗಳ ಮನಗೆದ್ದಿದೆ. ಪ್ರಕಾಶ್ ವೀರ್ ನಿರ್ದೇಶಿಸಿ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಈ ಹಿಂದೆ ದರ್ಶನ್ ಜೊತೆ ತಾರಕ್ ಚಿತ್ರವನ್ನು ಅವರು ತೆರೆಗೆ ತಂದಿದ್ದರು.

ಡೆವಿಲ್ ಚಿತ್ರದಲ್ಲಿ ರಚನಾ ರೈ ನಾಯಕಿಯಾಗಿ ನಟಿಸಿದ್ದಾರೆ. ಮಹೇಶ್ ಮಂಜ್ರೇಕರ್, ಅಚ್ಯುತ್ ಕುಮಾರ್, ಅವಿನಾಶ್ ಕೂಡ ಚಿತ್ರದ ತಾರಾಗಣದಲ್ಲಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ಹಾಗೂ ಸುಧಾಕರ್ ರಾಜ್ ಛಾಯಾಗ್ರಹಣ ಚಿತ್ರಕ್ಕಿದೆ. ಬಹುಕೋಟಿ ವೆಚ್ಚದಲ್ಲಿ ಸಿನಿಮಾ ನಿರ್ಮಾಣವಾಗಿದೆ. ಬಹಳ ಅದ್ಧೂರಿಯಾಗಿ ಚಿತ್ರವನ್ನು ಸ್ವಾಗತಿಸಲು ಅಭಿಮಾನಿಗಳು ಮುಂದಾಗಿದ್ದಾರೆ.

13 ವರ್ಷಗಳ ಹಿಂದೆ ದರ್ಶನ್ ಪರಪ್ಪನ ಅಗ್ರಹಾರ ಜೈಲಿನಲ್ಲಿ ಇದ್ದಾಗಲೇ ಸಾರಥಿ ಸಿನಿಮಾ ಬಿಡುಗಡೆಯಾಗಿ ಗೆದ್ದಿತ್ತು. ಅದೇ ಈಗ ರಿಪೀಟ್ ಆಗುತ್ತದೆ ಎಂದು ಅಭಿಮಾನಿಗಳು ಭಾವಿಸಿದ್ದಾರೆ.

### ಏನಿದೆ ಹೊಸ ಅಪ್‌ಡೇಟ್


ಕಾಟೇರ ಸಕ್ಸಸ್ ಬಳಿಕ ಸಹಜವಾಗಿಯೇ ಡೆವಿಲ್ ಸಿನಿಮಾ ನಿರೀಕ್ಷೆ ಹೆಚ್ಚಿಸಿದೆ. ದೇಶ ವಿದೇಶಗಳಲ್ಲಿ ಚಿತ್ರದ ಚಿತ್ರೀಕರಣ ಮಾಡಲಾಗಿದೆ.

ಚಿತ್ರದಲ್ಲಿ ವಿಭಿನ್ನ ಗೆಟಪ್‌ಗಳಿರೋ ಪಾತ್ರದಲ್ಲಿ ದರ್ಶನ್ ನಟಿಸಿದ್ದಾರೆ. ರಾಜ್ಯದ ಸಿಎಂ ಪಾತ್ರದಲ್ಲಿ ಕೂಡ ಕಾಣಿಸಿಕೊಂಡಿದ್ದಾರೆ ಎನ್ನಲಾಗ್ತಿದೆ. ಡೆವಿಲ್ ಚಿತ್ರದ ಫಸ್ಟ್ ಶೆಡ್ಯೂಲ್ ಮುಗಿದ ಬಳಿಕ ರೇಣುಕಾಸ್ವಾಮಿ ಪ್ರಕರಣ ಬೆಳಕಿಗೆ ಬಂದಿತ್ತು. ನಾಲ್ಕೈದು ತಿಂಗಳು ವಿಚಾರಣಾಧೀನ ಕೈದಿಯಾಗಿ ಜೈಲಿನಲ್ಲಿದ್ದ ದರ್ಶನ್ ಜಾಮೀನು ಪಡೆದು ಬಿಡುಗಡೆ ಆಗಿದ್ದರು. ಬೆನ್ನು ನೋವಿನ ನಡುವೆಯೂ ಚಿತ್ರೀಕರಣದಲ್ಲಿ ಭಾಗಿ ಆಗಿದ್ದರು. ಆದರೆ ಚಿತ್ರೀಕರಣ ಮುಗಿದ ಬಳಿಕ ಸುಪ್ರೀಂ ಕೋರ್ಟ್‌ನಲ್ಲಿ ಜಾಮೀನು ರದ್ದಾಗಿ ಮತ್ತೆ ಜೈಲು ಸೇರುವಂತಾಗಿತ್ತು.

ಈ ಪ್ರಕರಣದಲ್ಲಿ ದರ್ಶನ್ 2ನೇ ಬಾರಿ ಜೈಲು ಸೇರಿ 3 ತಿಂಗಳಾಗುತ್ತಾ ಬಂತು. ಸದ್ಯಕ್ಕೆ ಜಾಮೀನು ಸಿಗುವುದು ಅನುಮಾನ. ಬೆಂಗಳೂರಿನ 64ನೇ ಸಿಸಿಎಚ್ ಕೋರ್ಟ್‌ನಲ್ಲಿ ರೇಣುಕಾಸ್ವಾಮಿ ಪ್ರಕರಣ ವಿಚಾರಣೆ ಶುರುವಾಗಿದೆ. ಆರೋಪಿಗಳ ಮೇಲೆ ಈಗಾಗಲೇ ದೋಷಾರೋಪ ಹೊರಿಸಲಾಗಿದ್ದು ಅದೆಲ್ಲಾ ಸುಳ್ಳು ಎಂದು ಹೇಳಿದ್ದಾರೆ. ಮುಂದಿ ಸಾಕ್ಷಿಗಳಿಗೆ ನೋಟಿಸ್ ನೀಡಿ ವಿಚಾರಣೆಗೆ ಕರೆಯಬೇಕಿದೆ. ವಕೀಲರ ಮನವಿ ಮೇರೆಗೆ ನವಂಬರ್ 19ಕ್ಕೆ ವಿಚಾರಣೆ ಮುಂದೂಡಲಾಗಿದೆ.

ಡೆವಿಲ್ ಸಿನಿಮಾ ಬಿಡುಗಡೆಗೆ ಒಂದು ತಿಂಗಳು ಬಾಕಿ ಇರುವಾಗ ಹೊಸ ಸಾಂಗ್ ಬಿಡುಗಡೆ ಚಿತ್ರತಂಡ ಮುಂದಾಗಿದೆ. 3ನೇ ಸಾಂಗ್ ರಿಲೀಸ್ ದಿನಾಂಕ, ಸಮಯ ಘೋಷಣೆ ಮಾಡಿದ್ದಾರೆ. ನವೆಂಬರ್ 16 ಅಂದರೆ ಇದೇ ಭಾನುವಾರ ಮಧ್ಯಾಹ್ನ 12 ಗಂಟೆ 3 ನಿಮಿಷಕ್ಕೆ ಹೊಸ ಸಾಂಗ್ ರಿಲೀಸ್ ಆಗಲಿದೆ. ಇದಕ್ಕೂ ಸಂತು ಮಾಸ್ಟರ್ ಕೊರಿಯೋಗ್ರಫಿ ಮಾಡಿದ್ದಾರೆ.

ನೆಚ್ಚಿನ ನಟನ ಅನುಪಸ್ಥಿತಿಯಲ್ಲಿ ಡೆವಿಲ್ ಸಿನಿಮಾ ಬಿಡುಗಡೆಗಾಗಿ ಅಭಿಮಾನಿಗಳು ಕಾಯುವಂತಾಗಿದೆ. ಶೀಘ್ರದಲ್ಲೇ ಡೆವಿಲ್ ಟ್ರೈಲರ್ ಲಾಂಚ್ ಕಾರ್ಯಕ್ರಮ ಕೂಡ ನಡೆಯಲಿದೆ. ನಿರ್ಮಾಪಕರು ಹಾಗೂ ತಂಡಕ್ಕೆ ಯಾವುದೇ ಸಮಸ್ಯೆ ಆಗುವುದು ಬೇಡ ಎನ್ನುವ ಕಾರಣಕ್ಕೆ ಜೈಲಿನಲ್ಲಿ ಇದ್ದರೂ ಸಿನಿಮಾ ಬಿಡುಗಡೆ, ಪ್ರಚಾರಕ್ಕೆ ನಟ ದರ್ಶನ್ ಸಲಹೆ ನೀಡಿದ್ದಾರೆ. ಆಪ್ತರ ಮೂಲಕ ಈ ಬಗ್ಗೆ ಸಂದೇಶ ರವಾನಿಸಿದ್ದಾರೆ. ಹಾಗಾಗಿ ಯಾವುದೇ ಸಮಸ್ಯೆ ಇಲ್ಲದೇ ಸಿನಿಮಾ ತೆರೆಗೆ ಬರಲು ಸಜ್ಜಾಗುತ್ತಿದೆ.



# ಮಾರ್ಕ್ ಮೇನಿಯಾ ಶುರು; ಗ್ಯಾಂಗ್‌ಸ್ಟರ್ಸ್ ಪೊಲೀಸ್ - ಕಿಚ್ಚ ಸುದೀಪ್ ರೌದ್ರಾವತಾರ


ಸುದೀಪ್.. ಕನ್ನಡ ಚಿತ್ರರಂಗದ ಕೆಚ್ಚೆದೆಯ ಕಿಚ್ಚ, ಅಭಿಮಾನಿಗಳ ಪಾಲಿನ ಪ್ರೀತಿಯ ಅಭಿನಯ ಚಕ್ರವರ್ತಿ. ನಾನು ನ್ಯಾಷನಲ್ ಸ್ಟಾರ್ ಎಂದು ಈಗ ಕಾಲರ್ ಎತ್ತಿಕೊಂಡು ಓಡಾಡುವರ ನಡುವೆ ಆ ಕಾಲದಲ್ಲಿಯೇ ಕನ್ನಡ, ತೆಲುಗು, ತಮಿಳು, ಹಿಂದಿ ಈ ಐದೂ ಭಾಷೆಗಳಲ್ಲಿ ಮಿಂಚಿದ ಸುದೀಪ್ ಕೇವಲ ನಾಯಕ ಮಾತ್ರ ಅಲ್ಲ ನಿರ್ದೇಶಕ ಕೂಡ ಹೌದು.

ಗಾಯಕ ಕೂಡ ಹೌದು. ಕ್ರಿಕೆಟ್ ಪ್ಲೇಯರ್ ಕೂಡ ಹೌದು. ಕೇವಲ ಇಷ್ಟೇ ಅಲ್ಲ ಅತ್ಯುತ್ತಮ ನಿರೂಪಕ ಕೂಡ ಹೌದು. ಇಂಥಾ ಸುದೀಪ್ ಕಳೆದ ವರ್ಷ ಮ್ಯಾಕ್ಸ್ ಮೂಲಕ ಬೆಳ್ಳಿತೆರೆಯಲ್ಲಿ ಅಬ್ಬರಿಸಿದ್ದರು. ಬಾಕ್ಸಾ ಫೀಸ್‌ನಲ್ಲಿ ಹಣದ ಹೊಳೆ ಹರಿಸಿದ್ದರು. ಈ ವರ್ಷ ಮಾರ್ಕ್ ಚಿತ್ರದ ಸರದಿ. ಹೌದು.. ಮಾರ್ಕ್, ಪಕ್ಕದ ಮನೆಯ ನಿರ್ದೇಶಕ ವಿಜಯ್ ಕಾರ್ತಿಕೆಯನ್ ಜೊತೆ ಸೇರಿ ಸುದೀಪ್ ಮಾಡಿರುವ ಎರಡನೇ ಮಹಾಯಜ್ಞ. ಪ್ಯಾನ್ ಇಂಡಿಯಾ ಲೆವಲ್‌ನಲ್ಲಿ ಇದೇ ಡಿಸೆಂಬರ್ 25ಕ್ಕೆ ಕ್ರಿಸ್ಮಸ್ ಹಬ್ಬದ ಪ್ರಯುಕ್ತ ಬಿಡುಗಡೆಯಾಗಲಿರುವ ಈ ಚಿತ್ರದ ಮತ್ತೊಂದು ಟೀಸರ್ (ನವೆಂಬರ್ 7 ) ಬಿಡುಗಡೆಯಾಗಿದೆ. ಕಿಚ್ಚ ಸುದೀಪ್ ಅವರ ಅಸಂಖ್ಯಾತ.. ಅಗಣಿತ.. ಅಭಿಮಾನಿಗಳನ್ನು ಹುಚ್ಚೆಬ್ಬಿಸಿದೆ. ಬಿಡುಗಡೆಯಾದ ಒಂದು ಗಂಟೆಯಲ್ಲಿ (06-45 ರಿಂದ 07-45ರವರೆಗೆ) ಕನ್ನಡದಲ್ಲಿ 107,245ಕ್ಕೂ ಅಧಿಕ ವೀವ್ಸ್‌ನ ಈ ಇಂಟ್ರಡಕ್ಷನ್ ಟೀಸರ್ ಪಡೆದಿದೆ ಅಂದರೆ, ಮಾರ್ಕ್ ಕ್ರೇಜ್ ಹೇಗಿದೆ ಎನ್ನುವುದನ್ನು ನೀವೆ ಲೆಕ್ಕ ಹಾಕಿ. 1; 13 ನಿಮಿಷ ಇರುವ ಈ ಟೀಸರ್ ಚಿತ್ರದ ಮೇಲಿನ ನಿರೀಕ್ಷೆಗಳನ್ನು ಇನ್ನೂ ಹೆಚ್ಚಿಸಿದ್ದು, ಚಿತ್ರವನ್ನು ಬೆಳ್ಳಿತೆರೆಯಲ್ಲಿ ಕಣ್ತುಂಬಿಕೊಳ್ಳುವ ಆತುರ ಕಾತುರ ಚಿತ್ರ ಪ್ರೇಕ್ಷಕರಲ್ಲಿ ಹೆಚ್ಚಾಗಿದೆ. ಇದಕ್ಕೆ ಕೈಗನ್ನಡಿ ಎಂಬಂತೆ ಹಲವರು ಸದ್ಯ ಸೋಶಿಯಲ್ ಮೀಡಿಯಾದಲ್ಲಿ ಮಾರ್ಕ್‌ಗೆ ಉಫೇ ಉಫೇ ಎನ್ನುತ್ತಿದ್ದಾರೆ. ಟೀಸರ್ ಮಾತ್ರ ಬೆಂಕಿ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಮಾರ್ಕ್ ಬಗ್ಗೆ ಮಾತಾಡಬೇಕಾದರೆ ಮನಸಲ್ಲೇ ಮಾತಾಡ್ಬೇಕು ಎಂಬ ಡೈಲಾಗ್‌ಗೆ ಹಲವರು ಈಗಲೇ ಶಿಳ್ಳೆ ಹೊಡೆಯಲು ಶುರು ಮಾಡಿದ್ದಾರೆ. ಎಂದಿನಂತೆ ಸುದೀಪ್ ಅವರ ಸ್ಟೈಲ್ ಮತ್ತು ಸ್ವ್ಯಾಗ್‌ಗೆ ಇವರ ಅಭಿಮಾನಿಗಳು ಫಿದಾ ಆಗಿದ್ದಾರೆ. ಅದರಲ್ಲಿಯೂ ರೌಡಿಯ ಕುತ್ತಿಗೆ ಹಿಡಿದು ಮೇಲಕ್ಕೆತ್ತಿ ಮದ್ಯ ಕುಡಿಯುವ ದೃಶ್ಯವನ್ನು ನೋಡಿ ಸುದೀಪ್ ಅವರಿಗೆ ಸುದೀಪ್ ಅವರೆ ಸಾಟಿ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.



ಇನ್ನು ಮಾರ್ಕ್ ಯಾರು ..? ಈ ಪ್ರಶ್ನೆಗೆ ಪೊಲೀಸ್, ಇವರ ಪಾತ್ರದ ಹೆಸರು ಅಜಯ್ ಮಾರ್ಕಂಡೆ ಎಂಬ ಉತ್ತರ ಎಲ್ಲರಿಗೆ ಈಗಾಗಲೇ ಗೊತ್ತು. ಆದರೆ ಈ ಮಾರ್ಕ್‌ನ ಕಥೆ ಮತ್ತು ರೌಡಿಗಳ ವ್ಯಥೆ ಏನು ಎನ್ನುವುದರ ಸುಳಿವು, ಬಿಡುಗಡೆಯಾದ ಟೀಸರ್‌ನಲ್ಲಿ ಇಲ್ಲದಿದ್ದರೂ ಕೂಡ ಮಾರ್ಕ್ ಗ್ಯಾಂಗಸ್ಟರ್ ಮತ್ತು ಒಬ್ಬ ಅಸಾಧಾರಣ ಅಸಾಮಾನ್ಯ ಪೊಲೀಸ್ ಅಧಿಕಾರಿಯ ಘರ್ಷಣೆಯ ಕಥೆ ಎನ್ನುವುದು ಟೀಸರ್ ನೋಡಿದರೆ ಮೇಲ್ನೋಟಕ್ಕೆ ಗೊತ್ತಾಗುತ್ತೆ. ಮಾರ್ಕ್‌ನ ಕೊಂದವರಿಗೆ ಬಹುಮಾನವನ್ನು ಗ್ಯಾಂಗಸ್ಟರ್‌ಗಳ ಲೀಡರ್ ಘೋಷಣೆ ಮಾಡುತ್ತಾನೆ. ಹಣದಾಸೆಗೆ ಮಾರ್ಕ್ ಜೀವ ತೆಗೆಯಲು ರೌಡಿಗಳ ಗುಂಪು ಹಪಹಪಿಸುತ್ತೆ. ಆದರೆ ಉರುಳುವುದು ಹೆಣಗಳ ರಾಶಿಯೇ ಹೊರತು ಮಾರ್ಕ್ ಇಲ್ಲಿ ಕದಲುವುದಿಲ್ಲ, ಹೆದರುವುದಿಲ್ಲ.

ಸುದೀಪ್ ಅವರ ಜೊತೆ ನವೀನ್ ಚಂದ್ರ, ದೀಪಿಕಾ, ಅರ್ಚನಾ ಕೊಟ್ಟಿಗೆ, ರೋಶಿನಿ ಪ್ರಕಾಶ್ ಹಾಗೂ ನಿಶ್ವಿಕಾ ನಾಯ್ಡು ಮಾರ್ಕ್ ಚಿತ್ರದ ತಾರಾಗಣದಲ್ಲಿದ್ದಾರೆ. ಡ್ರ್ಯಾಗನ್ ಮಂಜು ಕೂಡ ಚಿತ್ರದಲ್ಲಿದ್ದಾರೆ. ಶೇಖರ್ ಚಂದ್ರ ಛಾಯಾಗ್ರಹಣ, ಅಜನೀಶ್ ಲೋಕನಾಥ್ ಚಿತ್ರವನ್ನು ಸತ್ಯಜ್ಯೋತಿ ಫಿಲ್ಮ್ಸ್ ನಿರ್ಮಾಣ ಮಾಡಿದೆ. ಕಿಚ್ಚ ಸುದೀಪ್ ಕೂಡ ಚಿತ್ರಕ್ಕೆ ಕಾಸು ಹೂಡಿದ್ದಾರೆ. ಸದ್ಯ ಟೀಸರ್ ಬಿಡುಗಡೆಯಾಗಿದೆ. ಮಾರ್ಕ್ ಮೇನಿಯಾ ಶುರುವಾಗಿದೆ. ಇನ್ನೇನು ಕೆಲವೇ ದಿನ ಈ ಡಿಸೆಂಬರ್ 25ರಂದು ಮಾರ್ಕ್ ಮೆರವಣಿಗೆ ದೇಶದೆಲ್ಲೆಡೆ ಹೊರಡಲಿದೆ. ಅದಕ್ಕೂ ಮುನ್ನ ಚಿತ್ರತಂಡ ದೇಶವ್ಯಾಪಿ ಚಿತ್ರದ ಪ್ರಚಾರವನ್ನು ಮಾಡಲು ಕಣಕ್ಕಿಳಿಯಲಿದೆ.




# ಆಮಿರ್ ಖಾನ್ ಮೆಚ್ಚಿದ ತಿಥಿ ಗಡ್ಡಪ್ಪನ ಬದುಕು ಬದಲಿಸಲಿಲ್ಲ

- ಈ ಸಿನಿಮಾಗೆ ಸಿಕ್ಕಿದ್ದ ಸಂಭಾವನೆ ಎಷ್ಟು ಗೊತ್ತೇ?

ತಿಥಿ ಕನ್ನಡ ಚಿತ್ರರಂಗದ ದಿಕ್ಕನ್ನೇ ಬದಲಿಸಿದ ಸಿನಿಮಾ. ಈಗಿನಂತೆ ಪ್ಯಾನ್ ಇಂಡಿಯಾ ಟ್ರೆಂಡ್ ಇದ್ದಿದ್ದರೆ, ಇನ್ನೂ ದೊಡ್ಡ ಮಟ್ಟಕ್ಕೆ ಸದ್ದು ಮಾಡುತ್ತಿತ್ತು. ಹಾಗಂತ ಈ ಸಿನಿಮಾ ದೇಶದ ಗಮನ ಸೆಳೆಯುವಲ್ಲಿ ಯಶಸ್ವಿ ಆಯ್ತು. ಯುವ ಪ್ರತಿಭೆಗಳಾದ ನಿರ್ದೇಶಕ ರಾಮ್ ರೆಡ್ಡಿ ಹಾಗೂ ಚಿತ್ರಕಥೆ ಬರೆದಿದ್ದ ಈರೇಗೌಡ ದಿಗ್ಗಜರ ಗಮನ ಸೆಳೆದಿದ್ದರು. ಈ ಸಿನಿಮಾ ಥಿಯೇಟರ್‌ಗೆ ಲಗ್ಗೆ ಇಡುವುದಕ್ಕೂ ಮುನ್ನ ಸಾಕಷ್ಟು ಫಿಲ್ಮ್ ಫೆಸ್ಟಿವಲ್‌ಗಳಲ್ಲಿ ಗೆದ್ದು ಬಂದಿತ್ತು.

ಅದ್ಯಾವಾಗ ಥಿಯೇಟರ್‌ಗೆ ಲಗ್ಗೆ ಇಟ್ಟಿತೋ ಅಲ್ಲಿಂದ ಈ ಸಿನಿಮಾ ಕ್ರೇಜ್ ಇನ್ನೋ ಹೆಚ್ಚು ಸದ್ದು ಮಾಡಿತ್ತು. ಈ ಸಿನಿಮಾ ಮಂಡ್ಯದ ಸಣ್ಣ ಗ್ರಾಮದ ಹಣ್ಣು ಮುದುಕನ ಬದುಕನ್ನು ದೇಶದ ಜನರ ಮುಂದೆ ತಂದು ನಿಲ್ಲಿಸಿತ್ತು. ನಟನೆಯ ಗಂಧ ಗಾಳಿಯೂ ಗೊತ್ತಿರದ ತೀರಾ ಕಡು ಬಡತನ ಇಳಿ ವಯಸ್ಸಿನ ಗಡ್ಡಪ್ಪ ಅಲಿಯಾಸ್ ಚನ್ನೇಗೌಡ ದೇಶಾದ್ಯಂತ ಫೇಮಸ್ ಆಗಿದ್ದರು. ಸಿನಿಮಾ ನೋಡಿ ಜನರು ಹೊಗದ್ದೇ ಹೊಗಳಿದ್ದು. ಹೊಗಳಿ ಅಟ್ಟಕ್ಕೆ ಏರಿಸಿದ್ದರು.

ಮಂಡ್ಯದ ನೊದೆಕೊಪ್ಪಲು ಗ್ರಾಮದ ಚನ್ನೇಗೌಡ ರಾತ್ರೋ ರಾತ್ರಿ ಗಡ್ಡಪ್ಪನಾಗಿ ಫೇಮಸ್ ಆಗಿಬಿಟ್ಟಿದ್ದರು. ತನ್ನ ಬದುಕಿನ ಕೊನೆಯ ಘಟ್ಟದಲ್ಲಿ ಸಿಕ್ಕಿದ ಈ ಜನಪ್ರಿಯತೆಯನ್ನು ಹೇಗೆ ತೆಗೆದುಕೊಳ್ಳಬೇಕು ಅನ್ನೋ ಗೊಂದಲ. ತನ್ನನ್ನು ಹುಡುಕಿಕೊಂಡು ಬರುವ ಸಿನಿಮಾ ಮಂದಿಗಳ ಜೊತೆ ಹೇಗೆ ಮಾತಾಡಬೇಕು ಅಂತ ತಿಳಿಯದ ಮುಗ್ಧ ಮನಸ್ಸು. ಇಂತಹ ಮನಸ್ಸುಗಳನ್ನು ಬಳಸಿಕೊಳ್ಳುವುದಕ್ಕೆ ಕಾಯುತ್ತಿದ್ದ ಸಿನಿಮಾ ಮಂದಿ. ಇವೆಲ್ಲದರ ನಡುವೆ ಗಡ್ಡಪ್ಪನ ಬದುಕು ಬದಲಾಗಲೇ ಇಲ್ಲ.

**ಬದುಕು ಬದಲಿಸಿತೇ ತಿಥಿ?:** ತಿಥಿ ಬಂದು ಫೇಮಸ್ ಆಯ್ತು. ಇಡೀ ರಾಷ್ಟ್ರವೇ ಮೆಚ್ಚಿದ್ದಕ್ಕೆ ರಾಷ್ಟ್ರ ಪ್ರಶಸ್ತಿನೂ ಬಂದಿತ್ತು. ಬಾಲಿವುಡ್‌ನ ಮಿಸ್ಟರ್ ಪರ್ಫೆಕ್ಷನಿಸ್ಟ್ ಆಮಿರ್ ಖಾನ್ ಕೂಡ ಸಿನಿಮಾ ಮೆಚ್ಚಿಕೊಂಡಾಡಿದ್ದರು. ತಿಥಿ ಸಿನಿಮಾವನ್ನು ಗಡ್ಡಪ್ಪನ ಪರ್ಫಾಮೆನ್ಸ್ ಅನ್ನು ಬಾಯ್ತುಂಬ ಹೊಗಳಿದ್ದರು. ಇಲ್ಲಿಂದ ಗಡ್ಡಪ್ಪನ ಬದುಕು ಬದಲಾಯ್ತು. ಇಳಿ ವಯಸ್ಸಿನಲ್ಲಿ ಬಡತನಕ್ಕೆ ಮುಕ್ತಿ ಸಿಕ್ಕಿತು ಅಂತೆಲ್ಲ ಮಾತಾಡಿಕೊಂಡರು. ಅಸಲಿಗೆ ಗಡ್ಡಪ್ಪನ ಬದುಕೇನು ಬದಲಾಗಲಿಲ್ಲ ಅನ್ನೋದು ವಿಪರ್ಯಾಸ.

**ತಿಥಿಗೆ ಸಿಕ್ಕಿದ ಸಂಭಾವನೆಯೇ ಹೆಚ್ಚು!:** 2016ರಲ್ಲಿ ತೆರೆಕಂಡ ಸಿನಿಮಾ ತಿಥಿ ಮೂಲಕ ಗಡ್ಡಪ್ಪ ಜನಪ್ರಿಯತೆ ಗಳಿಸಿದರು. ಈ ಸಿನಿಮಾದಲ್ಲಿ ನಟನೆ ಬಾರದ ಸ್ಥಳೀಯರನ್ನೇ ಇಟ್ಟುಕೊಂಡು ಸಿನಿಮಾ ಮಾಡುವುದಕ್ಕೆ ನಿರ್ದೇಶಕ ರಾಮ್ ರೆಡ್ಡಿ ಮುಂದಾಗಿದ್ದರು. ಹೀಗೆ ಹುಡುಕಾಟದಲ್ಲಿ ಇದ್ದಾಗ ಚಿತ್ರತಂಡಕ್ಕೆ ಅವರ ಕಲ್ಪನೆಯಂತೆ ಗಡ್ಡ ಬಿಟ್ಟುಕೊಂಡು ಮಂಡ್ಯದ ನೊದೆಕೊಪ್ಪಲು ಗ್ರಾಮದಲ್ಲಿ ಓಡಾಡಿಕೊಂಡಿದ್ದವರು ಚೆನ್ನೇಗೌಡರು. ಕೊನೆಗೆ ಇವರನ್ನೇ ಒಪ್ಪಿಸಿ ಗಡ್ಡಪ್ಪನನ್ನಾಗಿ ಪರಿವರ್ತಿಸಿದರು. ಈಗಾಗಲೇ ಕೆಲವೆಡೆ ವರದಿಯಾಗಿರುವಂತೆ ತಿಥಿ ಸಿನಿಮಾಗೆ ಗಡ್ಡಪ್ಪನಿಗೆ ಸಿಕ್ಕಿದ ಸಂಭಾವನೆ 50 ಸಾವಿರ ರೂಪಾಯಿ. ಇದೇ ಅವರ ವೃತ್ತಿ ಬದುಕಿನಲ್ಲಿ ಪಡೆದ ಅತೀ ದೊಡ್ಡ ಸಂಭಾವನೆ.

**ಗಡ್ಡಪ್ಪನನ್ನು ಬಳಸಿಕೊಂಡವರೇ ಒಬ್ಬಿಬ್ಬರಲ್ಲ:** ತಿಥಿ ಗಡ್ಡಪ್ಪ ಅಂತಲೇ ಜನಪ್ರಿಯತೆ ಸಿಕ್ಕಿದ ಮೇಲೆ ಸೆಲ್ಫಿಗಾಗಿ ಮನೆ ಮುಂದೆ ಬರುತ್ತಿದ್ದವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿತ್ತು. ಇನ್ನೊಂದು ಕಡೆ ಸಿನಿಮಾ ಮಂದಿಯ ಸಂಖ್ಯೆಯೂ ಹೆಚ್ಚಾಯ್ತು. ರಾಷ್ಟ್ರ ಮಟ್ಟದಲ್ಲಿ ಹೆಸರು ಸಿಕ್ಕಿದ ಮುಗ್ಧ ಜೀವವನ್ನು ಬಳಸಿಕೊಳ್ಳುವ ಖಯಾಲಿ ಇಲ್ಲಿಂದ ಶುರುವಾಗಿತ್ತು. ಬಾಯಿಗೆ ಬಂದ ಸಂಭಾವನೆ ಕೊಟ್ಟರು. ಮೂಲಗಳ ಪ್ರಕಾರ, ತಿಥಿ ಬಳಿಕ ಗಡ್ಡಪ್ಪಗೆ ಸಿಗುತ್ತಿದ್ದ ಸಂಭಾವನೆ ಬರೀ ಐದು ಸಾವಿರ ಅಷ್ಟೇ. ಹೀಗಾಗಿ ಕೊನೆಯ ಕ್ಷಣಗಳಲ್ಲಿ ಅವರು ಆರ್ಥಿಕವಾಗಿ ಸಬಲರಾಗಿರಲಿಲ್ಲ ಅನ್ನೋದು ಬಲ್ಲವರ ಮಾತು.

**ಅನಾರೋಗ್ಯ.. ತಿರಸ್ಕಾರ:** ತಿಥಿ ಬಳಿಕ ಸಿನಿಮಾ ಮಾಡುವುದಕ್ಕೆ ಅದೆಷ್ಟೋ ಮಂದಿ ಗಡ್ಡಪ್ಪನನ್ನು ಇಟ್ಟುಕೊಂಡು ಸಿನಿಮಾ ಮಾಡುವುದಕ್ಕೆ ಬಂದಿದ್ದರು. ಕೆಲವರು ಅವರ ಜೊತೆ ಸಿನಿಮಾವನ್ನೂ ಮಾಡಿದರು. ಡಬಲ್ ಮೀನಿಂಗ್ ಡೈಲಾಗ್ ಹೇಳಿಸಿದರು. ಅವರ ಇಮೇಜ್ ಡ್ಯಾಮೇಜ್ ಮಾಡಿದರು. ಇದೇ ವೇಳೆ ಗಡ್ಡಪ್ಪ ಹೃದಯ ಸಂಬಂಧಿ ಸಮಸ್ಯೆಯಿಂದ ಬಳಲುತ್ತಿದ್ದರು. ಇದಕ್ಕೆ ಸರಿಯಾಗಿ ಸ್ಟ್ರೋಕ್ ಆಗಿ ಹಾಸಿಗೆ ಹಿಡಿದರು. ಸೆಲ್ಫಿಗೆ ಹುಡುಗಿಕೊಂಡು ಬರುವವರು ಸಹಾಯಕ್ಕೆ ಬರಲಿಲ್ಲ. ಸಿನಿಮಾದವರು ಹತ್ತಿರಕ್ಕೂ ಸುಳಿಯಲಿಲ್ಲ. ಗಡ್ಡಪ್ಪ ಅವತಾರದ ಚನ್ನೇಗೌಡ ಕೊನೆಯ ದಿನಗಳಲ್ಲಿ ಪ್ರೀತಿಸಿದ್ದಕ್ಕಿಂತ ತಿರಸ್ಕಾರಕ್ಕೆ ಒಳಗಾದವರೇ ಹೆಚ್ಚು.

# ಮೇಕೆದಾಟು ಯೋಜನೆ: ಕರ್ನಾಟಕಕ್ಕೆ ಗೆಲುವು

## ಸುಪ್ರೀಂ ಕೋರ್ಟ್‌ನಲ್ಲಿ ತಮಿಳುನಾಡು ಅರ್ಜಿ ವಜಾ | ತಜ್ಞರ ಸಮಿತಿ ನಿರ್ವಹಿಸುವುದು ಉತ್ತಮ | ನ್ಯಾಯಾಲಯ ಪುನರುಚ್ಚಾರ

• ಪ್ರಜೋದಯ ವರದಿ

**ನವದೆಹಲಿ:** ಕರ್ನಾಟಕ ಮತ್ತು ತಮಿಳುನಾಡು ಮಧ್ಯೆ ಕಾವೇರಿ ನೀರು ಹಂಚಿಕೆಯ ಮೇಕೆದಾಟು ಯೋಜನೆ ವಿವಾದದಲ್ಲಿ ಪ್ರವೇಶಿಸಲು ನಿರಾಕರಿಸಿರುವ ಸುಪ್ರೀಂ ಕೋರ್ಟ್, ನೀರಿನ ಹಂಚಿಕೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಈ ಉದ್ದೇಶಕ್ಕಾಗಿ ರಚಿಸಲಾದ ತಜ್ಞರ ಸಮಿತಿ ನಿರ್ವಹಿಸುವುದು ಉತ್ತಮ ಎಂದು ಪುನರುಚ್ಚರಿಸಿದೆ.


ಕರ್ನಾಟಕದ ಮೇಕೆದಾಟು ಅಣೆಕಟ್ಟಿನ ವಿವರವಾದ ಯೋಜನಾ ವರದಿಯನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ ಇತ್ತೀಚೆಗೆ ಸಲ್ಲಿಸಿದ್ದ ಅರ್ಜಿಯನ್ನು ಗುರುವಾರ ವಜಾ ಗೊಳಿಸಿದ ಸುಪ್ರೀಂ ಕೋರ್ಟ್, ಅನುಮೋದನೆಗಳು ನ್ಯಾಯಾಂಗದಿಂದ ಬರಬೇಕಿರುವುದು ಅಲ್ಲ. ಕಾವೇರಿ ನೀರು ನಿಯಂತ್ರಣ ಸಮಿತಿ ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದಿಂದ ಬರಬೇಕು ಎಂದು ಹೇಳಿದೆ.

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಪೀಠವು, ತಮಿಳುನಾಡಿನ ಮನವಿಯನ್ನು ತಪ್ಪಾಗಿ ಗ್ರಹಿಸಲಾಗಿದೆ, ರಾಜ್ಯವು ಆದೇಶವನ್ನು ಮೇಲ್ವಿಚಾರಣೆ ಮಾಡಲು ಅಧಿಕಾರ ಹೊಂದಿರುವ ತಜ್ಞರ ಸಮಿತಿಯನ್ನು ಸಂಪರ್ಕಿಸಬೇಕಾಗಿತ್ತು ಎಂದು ಹೇಳಿತು.

ಕೇಂದ್ರ ಜಲ ಆಯೋಗದ ನಿರ್ದೇಶನಗಳು ತಜ್ಞರ ಶಿಫಾರಸುಗಳನ್ನು ಆಧರಿಸಿವೆ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಅನುಮೋದನೆಗಳು ವಿವರವಾದ ಯೋಜನಾ ವರದಿ ಅನುಮೋದನೆಗೆ ಪೂರ್ವಾಪೇಕ್ಷಿತವಾಗಿದೆ ಎಂದು ಪೀಠವು ಗಮನಿಸಿತು.

**ತಮಿಳುನಾಡು ಮನವಿ ತಿರಸ್ಕೃತ, ಕೋರ್ಟ್ ಹೇಳಿದ್ದೇನು?**

ಬಳಕೆಯಾಗದ ಕುಡಿಯುವ ನೀರನ್ನು ವರ್ಗಾಯಿಸದಂತೆ ಕರ್ನಾಟಕಕ್ಕೆ ನಿರ್ದೇಶನಗಳನ್ನು ಕೋರಿ ತಮಿಳುನಾಡು ಮತ್ತೊಂದು ಅರ್ಜಿಯನ್ನು ಸಲ್ಲಿಸಿತ್ತು. ಆದೇಶಗಳನ್ನು ಜಾರಿಗೊಳಿಸದಿರುವ ಎಲ್ಲಾ ಆರೋಪಗಳನ್ನು ಕೇಂದ್ರವು ಸೂಚಿಸಿದ ಕಾವೇರಿ ಜಲವಿವಾದ ನಿರ್ವಹಣಾ ಅಧಿಕಾರಿಗಳ ಮುಂದೆ ಇಡಬೇಕು ಎಂದು ಹೇಳುತ್ತಾ ನ್ಯಾಯಾಲಯವ ಅರ್ಜಿ ಪುರಸ್ಕರಿಸಲು ನಿರಾಕರಿಸಿತು.



ಕಾವೇರಿ ಜಲಾನಯನ ಪ್ರದೇಶದ ನೀರಿನ ವಿಷಯದಲ್ಲಿ, ವಿವಾದವನ್ನು ಈ ನ್ಯಾಯಾಲಯ ನಿರ್ಧರಿಸಿದೆ. ಯಾವುದೇ ಸಮಸ್ಯೆಗಳನ್ನು, ಕಾವೇರಿ ನೀರು ನಿಯಂತ್ರಣ ಸಮಿತಿ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ, ಕೇಂದ್ರ ಜಲ ಆಯೋಗದ ಮುಂದೆ ಎತ್ತಬಹುದು ಎಂದು ಮುಖ್ಯ ನ್ಯಾಯಮೂರ್ತಿಗಳು ಹೇಳಿದರು, ಅಧಿಕಾರಿಗಳಿಗೆ ತ್ವರಿತವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳುವಂತೆ ನಿರ್ದೇಶಿಸಿದರು.

**ನ್ಯಾಯಾಂಗ ನಿಂದನೆ ಎಚ್ಚರಿಕೆ**

ಕರ್ನಾಟಕವು ಸಿಡಬ್ಲ್ಯುಸಿ ಅಥವಾ ಸುಪ್ರೀಂ ಕೋರ್ಟ್ ನೀಡಿದ ನಿರ್ದೇಶನಗಳನ್ನು ಪಾಲಿಸಲು ವಿಫಲವಾದರೆ, ನ್ಯಾಯಾಂಗ ನಿಂದನೆ ಪ್ರಕ್ರಿಯೆಗೆ ಒಳಗಾಗುವ ಅಪಾಯವಿದೆ ಎಂದು ಸುಪ್ರೀಂ ಕೋರ್ಟ್ ಇದೇ ಸಂದರ್ಭದಲ್ಲಿ ಎಚ್ಚರಿಕೆ ನೀಡಿದೆ. ಕರ್ನಾಟಕವು ಎಲ್ಲಾ ನಿರ್ದೇಶನಗಳನ್ನು ಪಾಲಿಸಿದೆ ಎಂದು ಸಮರ್ಥಿಸಿಕೊಂಡಿತು, ತಮಿಳುನಾಡು ಎತ್ತಿರುವ ಅನೇಕ ಸಮಸ್ಯೆಗಳು ಉತ್ಪ್ರೇಕ್ಷಿತವಾಗಿದೆ ಎಂದು ವಾದಿಸಿತು.

ವಿಚಾರಣೆಯಲ್ಲಿ ವಿವಾದದ ದೀರ್ಘ ಇತಿಹಾಸದ ಬಗ್ಗೆಯೂ ಟೀಕೆಗಳು ಬಂದವು. ಕರ್ನಾಟಕ-ತಮಿಳು ನಾಡು 50 ವರ್ಷಗಳಿಂದ ಕಾವೇರಿ ಜಲ ವಿವಾದ ಬಗ್ಗೆ ಹೋರಾಟ ನಡೆಸುತ್ತಿವೆ ಎಂದು ವಕೀಲರು ಗಮನಸೆಳೆದಾಗ, ಸಿಜೆಐ ಈ ನದಿ ತೀರದ ವಿವಾದಗಳು ಮುಂದುವರಿಯುತ್ತಲೇ ಇರುತ್ತವೆ, ನಾವು ಇಲ್ಲಿ ಇರುವುದಿಲ್ಲ ಎಂದು ಹೇಳಿದರು. ಮತ್ತೊಬ್ಬ ವಕೀಲರು ನದಿ ದೀರ್ಘವಾಗಿದ್ದರೆ ವಿವಾದಗಳು ದೀರ್ಘಕಾಲಿಕ ಎಂದು ವ್ಯಂಗ್ಯವಾಡಿದರು, ನ್ಯಾಯಾಲಯದಿಂದ ಲಘು ಪ್ರತಿಕ್ರಿಯೆ ಬಂದಿತು.

ರೈತರ ಸಂಘಟನೆಗಳು ನೀರು ಹಂಚಿಕೆಯ ಕುರಿತು ಅರ್ಜಿಗಳನ್ನು ಸಲ್ಲಿಸಿವೆ ಎಂದು ಸಿಜೆಐ ಹೇಳಿದರು. ಸಿಡಬ್ಲ್ಯುಸಿ ಶಿಫಾರಸುಗಳನ್ನು ಸರಿಯಾಗಿ ಅನುಷ್ಠಾನಗೊಳಿಸುವಂತೆ ಕೋರಿ ಸಲ್ಲಿಸಲಾದ ಪಿಐಎಲ್ ಬಾಕಿ ಇದೆ ಎಂದರು. ಸಿಡಬ್ಲ್ಯೂಎಂಎ ಮತ್ತು ಸಿಡಬ್ಲ್ಯೂಆರ್ ಗಳು ಈ ಸಮಸ್ಯೆಯನ್ನು ನಿರ್ವಹಿಸಲು ಭಾರತ ಒಕ್ಕೂಟವು ರಚಿಸಿದ ಸಂಸ್ಥೆಗಳು ಎಂದು ನಾವು ಈ ಸಂದರ್ಭದಲ್ಲಿ ಮತ್ತೆ ಹೇಳುತ್ತಿದ್ದು, ಈ ಹಿನ್ನೆಲೆಯಲ್ಲಿ, ನಾವು ಯಾವುದೇ ಆದೇಶಗಳನ್ನು ನೀಡುವುದಿಲ್ಲ ಎಂದರು.

**ಡಿ.ಕೆ. ಶಿವಕುಮಾರ್ ಪ್ರತಿಕ್ರಿಯೆ**

ಆದೇಶಕ್ಕೆ ಪ್ರತಿಕ್ರಿಯಿಸಿದ ಕರ್ನಾಟಕ ಉಪ ಮುಖ್ಯಮಂತ್ರಿ ಮತ್ತು ಜಲ ಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್, ಈ ತೀರ್ಪು ಕರ್ನಾಟಕಕ್ಕೆ ಹಿನ್ನಡೆಯಲ್ಲ, ಬದಲಿಗೆ ನ್ಯಾಯ ತಂದಿದೆ ಎಂದು ಹೇಳಿದರು. ಮೇಕೆದಾಟು ಕರ್ನಾಟಕದ ನ್ಯಾಯಯುತ ಯೋಜನೆ ಎಂದು ಕರೆದ ಅವರು, ಇದು ನಮ್ಮ ಹಕ್ಕು ಮತ್ತು ನಮ್ಮ ನೀರು. ನಾವು ತೊಂದರೆ ನೀಡುತ್ತಿಲ್ಲ. ತಮಿಳುನಾಡಿಗೆ ಲಾಭವಾಗಲಿದೆ. ಆದೇಶದ ಪ್ರಕಾರ ಅವರಿಗೆ ಸಾಕಷ್ಟು ನೀರು ಸಿಗುತ್ತದೆ. ನಾವು ಯೋಜನೆಯೊಂದಿಗೆ ಮುಂದುವರಿಯಬೇಕು. ಇದನ್ನು ನಮ್ಮ ಪ್ರದೇಶದಲ್ಲಿ ನಿರ್ಮಿಸಲಾಗಿದೆ. ಇದು ಬೆಂಗಳೂರಿಗರ ವಿಜಯವಾಗಿದೆ ಎಂದು ಹೇಳಿದರು.

# ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ವಿವಿಧ ಸ್ಪರ್ಧೆಗಳ ಆಯೋಜನೆ

• ಪ್ರಜೋದಯ ವರದಿ

**ಹಾಸನ:** ನಗರ ಕೇಂದ್ರ ಗ್ರಂಥಾಲಯದಲ್ಲಿ 2025-26 ನೇ ಸಾಲಿನ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಅಂಗವಾಗಿ ನ.15 ರಿಂದ ನ.19 ರವರೆಗೆ ಹಾಸನ ನಗರ ವ್ಯಾಪ್ತಿಯಲ್ಲಿ ಬರುವ ಶಾಲಾ- ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ವಿವಿಧ ಸ್ಪರ್ಧಾ ಕಾರ್ಯಕ್ರಮಗಳನ್ನು ಸಾರ್ವಜನಿಕ ಓದುಗರು ಹಾಗೂ ವಿದ್ಯಾರ್ಥಿಗಳು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.

**ಸ್ಪರ್ಧೆಗಳ ವಿವರ:** ನ.15 ರಂದು ಬೆಳಿಗ್ಗೆ 11 ರಿಂದ 1 ರವರೆಗೆ ಮ್ಯುಸಿಕಲ್ ಚೇರ್ ಸ್ಪರ್ಧೆ (1 ರಿಂದ 2 ನೇ ತರಗತಿ ವಿದ್ಯಾರ್ಥಿಗಳಿಗಾಗಿ), ಮಧ್ಯಾಹ್ನ 3 ರಿಂದ 5 ರವರೆಗೆ ಚಿತ್ರ ಬಿಡಿಸುವ ಸ್ಪರ್ಧೆ ಕರ್ನಾಟಕದ ಭೂಪಟ ಬಿಡಿಸಿ ಸ್ಥಳಗಳನ್ನು ಗುರುತಿಸುವುದು. ಬೇಲೂರು, ಹಂಪಿ, ಬಾದಾಮಿ, ಬೆಂಗಳೂರು, ವಿಜಯಪುರ, ಚಿತ್ರದುರ್ಗ, ಮೈಸೂರು, ಶ್ರವಣಬೆಳಗೊಳ (3 ರಿಂದ 4 ನೇ ತರಗತಿ ವಿದ್ಯಾರ್ಥಿಗಳಿಗಾಗಿ).

ನ.17 ರಂದು ಬೆಳಿಗ್ಗೆ 11 ರಿಂದ 01 ರವರೆಗೆ ಕನ್ನಡ ನಾಡು ನುಡಿ ಬಗ್ಗೆ ರಸಪ್ರಶ್ನೆ ಸ್ಪರ್ಧೆ (5 ರಿಂದ 7 ನೇ ತರಗತಿ ವಿದ್ಯಾರ್ಥಿಗಳಿಗಾಗಿ), ಮಧ್ಯಾಹ್ನ 3 ರಿಂದ 5 ರವರೆಗೆ ಗಾಯನ ಸ್ಪರ್ಧೆ (ಭಾವಗೀತೆ) (8 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗಾಗಿ).

ನ.19 ರಂದು ಬೆಳಿಗ್ಗೆ 11 ರಿಂದ 01 ರವರೆಗೆ ಹತ್ತನೇ ತರಗತಿ ಮೇಲ್ಪಟ್ಟ ವಿದ್ಯಾರ್ಥಿಗಳಿಗಾಗಿ ಪ್ರಬಂಧ ಸ್ಪರ್ಧೆ (ವಿಷಯ ವಿದ್ಯಾರ್ಥಿಗಳ ಜೀವನದಲ್ಲಿ ಗ್ರಂಥಗಳ ಮಹತ್ವ ಹಾಗೂ ಪಾತ್ರ) ಮಧ್ಯಾಹ್ನ 03 ರಿಂದ 5 ರವರೆಗೆ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

**ಸೂಚನೆಗಳು:** ವಿದ್ಯಾರ್ಥಿಗಳು ತಮ್ಮ ಹೆಸರುಗಳನ್ನು ನ.15 ರೊಳಗೆ ನೋಂದಾಯಿಸಿಕೊಳ್ಳಬಹುದು. ಒಂದು ಸ್ಪರ್ಧೆಗೆ ಒಂದು ಶಾಲೆಯಿಂದ 5 ಜನ ವಿದ್ಯಾರ್ಥಿಗಳನ್ನು ಮಾತ್ರ ಕರೆತರಬಹುದಾಗಿದೆ. ಬರೆಯಲು ಹಾಳೆಗಳನ್ನು ಮಾತ್ರ ಕೊಡಲಾಗುವುದು.

# ‘ಸಿದ್ದರಾಮಯ್ಯರಿಂದ ಇಂದಿರಾ ಮೊಮ್ಮಗನ ಪಾದ ಪೂಜೆ’

• ಪ್ರಜೋದಯ ವರದಿ

**ಮೈಸೂರು:** ರಾಹುಲ್ ಗಾಂಧಿ ಸಿಎಂ ಸಿದ್ದರಾಮಯ್ಯ ಮುಂದೆ ಬಚ್ಚಾ. ಆದರೆ, ದೆಹಲಿಯಲ್ಲಿ ಅವರ ಭೇಟಿಗಾಗಿ ಸಿಎಂ ಕಾಯ್ತಿರೋದು ಬೇಸರ ತಂದಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿದ್ದಾರೆ.

ಈ ಕುರಿತು ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯಗೆ ಈ ದೈನಸಿ ಸ್ಥಿತಿ ಬರಬಾರದಿತ್ತು. ಮೈಸೂರಿಗನಾಗಿ, ಕನ್ನಡಿಗನಾಗಿ ನನಗೆ ಸಿಎಂ ಸ್ಥಿತಿ ಕಂಡು ಬೇಸರವಾಗಿದೆ. ಇಂದಿರಾಗಾಂಧಿ, ಸೋನಿಯಾ ಗಾಂಧಿಯನ್ನೇ ಟೀಕೆ ಮಾಡುತ್ತಿದ್ದ ಸಿದ್ದರಾಮಯ್ಯ ಅವರು ಈಗ ಅವರ ಮೊಮ್ಮಗನ ಪಾದ ಪೂಜೆ ಮಾಡಲು ಸಿದ್ಧವಾಗಿರೋದು ಬೇಸರ ತಂದಿದೆ ಎಂದರು.

ಸಿ.ಎಂ. ಸಿದ್ದರಾಮಯ್ಯ ಅವರೇ ನೀವು ಹುಲಿಯಾನಾ ಇಲಿಯಾನಾ ಹೇಳಿ? ಕಳೆದ 2013ರಲ್ಲಿ ಸಿದ್ದರಾಮಯ್ಯ ಹುಲಿಯಾ ಆಗಿದ್ದರು. ಈಗ ಸಿದ್ದರಾಮಯ್ಯ ಇಲಿಯಾಗಿದ್ದಾರೆ. ರಾಹುಲ್ ಗಾಂಧಿ ಭೇಟಿಗೆ ಸಿದ್ದರಾಮಯ್ಯ ಗೇಟ್‌ನಲ್ಲಿ ಕಾಯುತ್ತಿರುವುದು ನಮಗೆ ಬೇಸರ ತರಿಸಿದೆ ಎಂದು ಹೇಳಿದರು.



2013ರಲ್ಲಿ ಸಿದ್ದರಾಮಯ್ಯ ಹುಲಿಯಾಗಿದ್ದರು. ಈಗ ಇಲಿಯಾಗಿದ್ದಾರೆ. ಹಿಂದೆ ಇಂದಿರಾಗಾಂಧಿ, ಸೋನಿಯಾ ಗಾಂಧಿಯವರನ್ನೇ ಟೀಕಿಸುತ್ತಿದ್ದ ಸಿದ್ದರಾಮಯ್ಯ, ಇಂದು ಅವರ ಮೊಮ್ಮಗನ ಪಾದಪೂಜೆ ಮಾಡಲು ಸಿದ್ಧವಾಗಿರುವುದು ನೋವಿನ ಸಂಗತಿ. ಸಿದ್ದರಾಮಯ್ಯನವರ ಮುಂದೆ ರಾಹುಲ್ ಗಾಂಧಿ ಒಬ್ಬ ಬಚ್ಚಾ, ಅಂಥವನ ಭೇಟಿಗಾಗಿ ಗೇಟ್‌ನಲ್ಲಿ ಕಾಯುತ್ತಿರುವುದು ನಮಗೆ ಬೇಸರ ತರಿಸಿದೆ ಎಂದು ಪ್ರತಾಪ್ ಸಿಂಹ ವ್ಯಂಗ್ಯವಾಡಿದರು.

ಟಾಂಗಾ ಸಾಬಿ, ಜಟ್ಕಾ ಸಾಬಿಗಿಂತ ವಿದ್ಯಾವಂತ ಮುಸ್ಲಿಮರ ಬಗ್ಗೆ ಜನರು ಹೆಚ್ಚು ಎಚ್ಚರಿಕೆಯಿಂದ ಇರಬೇಕು. ವಿದ್ಯಾವಂತ ಮುಸ್ಲಿಮರು ಭಯೋತ್ಪಾದಕರಾದರೆ ಅವರನ್ನು ಪತ್ತೆಹಚ್ಚುವುದು ಹೇಗೆ ಎಂದು ಪ್ರಶ್ನಿಸಿದರು. ಭಾರತವನ್ನು ಹಿಂದೂ ರಾಷ್ಟ್ರ ಆಗಲು ಬಿಡುವುದಿಲ್ಲ ಎಂದಿರುವ ಸಿದ್ದರಾಮಯ್ಯ, ಇದನ್ನು ಮುಸ್ಲಿಂ ರಾಷ್ಟ್ರ ಮಾಡಲು ಹೊರಟಿದ್ದಾರೆಯೇ ಎಂದು ಸಿಂಹ ಪ್ರಶ್ನಿಸಿದರು.

# ಕಬ್ಬು ಬೆಳೆಗಾರರ ಕಿಚ್ಚು: 50ಕ್ಕೂ ಹೆಚ್ಚು ಟ್ರ್ಯಾಕ್ಟರ್ ಕಬ್ಬಿಗೆ ಬೆಂಕಿ

## ಸಾವಿರಾರು ಟನ್ ಕಬ್ಬು ಭಸ್ಮ: ಬಾಗಲಕೋಟೆಯಲ್ಲಿ ತೀವ್ರಗೊಂಡ ಹೋರಾಟ

• ಪ್ರಜೋದಯ ವರದಿ

**ಬಾಗಲಕೋಟೆ:** ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹೋರಾಟ ತೀವ್ರಗೊಂಡಿದೆ. ಬಾಗಲಕೋಟೆಯ ಮುಧೋಳದ ಮಾಹಾಲಿಂಗಪುರ ಪಟ್ಟಣ ಬಳಿಯ ಸಂಗಾನಟ್ಟಿ ಕ್ರಾಸ್ ಬಳಿ ಕಬ್ಬಿನ ಟ್ರ್ಯಾಕ್ಟರ್ ಟ್ರೇಲರ್ ಪಲ್ಟಿ ಮಾಡಿ ಕಬ್ಬಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. 50ಕ್ಕೂ ಹೆಚ್ಚು ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ್ದು, ಸಾವಿರಾರು ಟನ್ ಕಬ್ಬು ಬೆಳೆ ಭಸ್ಮವಾಗಿದೆ.

ಆರಂಭದಲ್ಲಿ ನಿಪ್ಪಾಣಿ- ಮಹಾಲಿಂಗಪುರ ರಾಜ್ಯ ಹೆದ್ದಾರಿ ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಆಗಿತ್ತು. ಪ್ರತಿ ಟನ್ ಕಬ್ಬಿಗೆ 3,500 ರೂ. ಕೊಡಬೇಕೆಂದು ಆಗ್ರಹಿಸಿದ್ದ ರೈತರು, ಸೈದಾಪುರ ಸಕ್ಕರೆ ಕಾರ್ಖಾನೆಗೆ ಮುತ್ತಿಗೆ ಹಾಕಲು ಯತ್ನಿಸಿದ್ದರು. ಆ ಬಳಿಕ ತಾಳ್ಮೆ ಕಳೆದುಕೊಂಡ ರೈತರು ಮಹಲಿಂಗಪುರ-ನಿಪ್ಪಾಣಿ ರಸ್ತೆಯಲ್ಲಿರುವ ಸೈದಾಪುರ ಸಕ್ಕರೆ ಕಾರ್ಖಾನೆ ಆವರಣದಲ್ಲಿನ ಕಬ್ಬು ತುಂಬಿದ ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿದ್ದಾರೆ. 50ಕ್ಕೂ ಟ್ರ್ಯಾಕ್ಟರ್‌ಗಳಿಗೆ ಬೆಂಕಿ ಹಚ್ಚಿ ಕಣ್ಣೀರಿಟ್ಟಿದ್ದಾರೆ. ಸ್ಥಳದಲ್ಲಿ 200ಕ್ಕೂ ಅಧಿಕ ಟ್ರ್ಯಾಕ್ಟರ್‌ಗಳನ್ನ ನಿಲ್ಲಿಸಲಾಗಿತ್ತು.



**ಕಿಡಿಗೇಡಿಗಳ ಕೃತ್ಯ: ಶಿವಾನಂದ್ ಪಾಟೀಲ್**

ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಮಾತನಾಡಿ, ಇದು ರೈತರು ಮಾಡಿರುವ ಕೆಲಸವಲ್ಲ. ಕೆಲ ಕಿಡಿಗೇಡಿಗಳು ಮಾಡಿರುವ ಕೆಲಸ. ಜಿಲ್ಲಾ ಉಸ್ತುವಾರಿ ಸಚಿವರು ಮೂರು ದಿನದಿಂದ ಮುಧೋಳದಲ್ಲಿದ್ದಾರೆ. ರೈತರು-ಕಾರ್ಖಾನೆಗಳ ಜೊತೆ ಮಾತುಕತೆ ಮಾಡುತ್ತಿದ್ದಾರೆ. ಇಡೀ ರಾಜ್ಯದಲ್ಲಿ ಎಲ್ಲೂ ಕೂಡ ರೈತರು ಹೀಗೆ ಮಾಡಿಲ್ಲ, ಹಾಗಾಗಿ ಇದು ರೈತರ ಹೆಸರಲ್ಲಿ ಕಿಡಿಗೇಡಿಗಳು ಮಾಡಿದ್ದು ಎಂದಿದ್ದಾರೆ.

ಕಬ್ಬು ಬೆಳೆಗಾರರಿಗೆ ಸರ್ಕಾರ ಹೆಚ್ಚಿನ ಹಣ ಕೊಟ್ಟಿದೆ. ಇದಕ್ಕಿಂತ ಮೇಲೆ ಸರ್ಕಾರ ಇನ್ನೇನು ಮಾಡೋಕಾಗಲ್ಲ. ಇಡೀ ರಾಜ್ಯದ ಕಬ್ಬು ಬೆಳೆಗಾರರೇ ಒಪ್ಪಿಕೊಂಡಿದ್ದಾರೆ. ಮುಧೋಳ ಕಬ್ಬು ಬೆಳೆಗಾರರು ಸರ್ಕಾರದ ನಿರ್ಧಾರ ಒಪ್ಪವಂತೆ ಕಬ್ಬು ಬೆಳೆಗಾರರಿಗೆ ಮನವಿ ಮಾಡಿದರು.

ಸರ್ಕಾರ ಏನ್ಮಾಡಬೇಕು ಎಲ್ಲಾ ಮಾಡಿದೆ. ಯಾರದ್ದೋ ಮನಸ್ಸಿನಲ್ಲಿ ಅಸೂಯೆ ಇರಬೇಕು. ರೈತರಾದವರು ಯಾರೂ ಕೂಡ ಈ ರೀತಿ ಮಾಡುವುದಿಲ್ಲ. ಇತಿಹಾಸದಲ್ಲಿ ಯಾವ ಸರ್ಕಾರ ಕೊಡದ ದರ ನಾವು ಕೊಟ್ಟಿದ್ದೇವೆ. ರಾಜ್ಯದಲ್ಲಿ ಇಡೀ ರೈತ ಸಂಕುಲ ತುಂಬಾ ಸಂತೋಷದಿಂದ ಇದೆ. ಆದರೆ, ಇದು ಕೆಲವು ಕಿಡಿಗೇಡಿಗಳು ಮಾಡಿರುವ ಕೆಲಸ ಎಂದು ಅವರು ಹೇಳಿದ್ದಾರೆ.

**ಮಾಹಿತಿ ಪಡೆದ ಮುಖ್ಯಮಂತ್ರಿ**

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ದೂರವಾಣಿ ಮೂಲಕ ಬಾಗಲಕೋಟೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ತಿಮ್ಮಾಪುರ ಜೊತೆಯೂ ದೂರವಾಣಿ ಮೂಲಕ ಚರ್ಚೆ ಮಾಡಿದ್ದು, ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡುವಂತೆ ಸೂಚಿಸಿದ್ದಾರೆ.

# ಅಕ್ರಮ ಸಾಗಾಟ: 12 ಗಿರಿ ತಳಿಯ ಹಸುಗಳ ರಕ್ಷಣೆ

• ಪ್ರಜೋದಯ ವರದಿ

**ಸಕಲೇಶಪುರ:** ಅಕ್ರಮವಾಗಿ ಗೋ ಸಾಗಾಟ ಮಾಡುತ್ತಿದ್ದ ವಾಹನವನ್ನು ಹಿಂದೂ ಹಿತ ರಕ್ಷಣಾ ವೇದಿಕೆಯವರು ಖಚಿತ ಮಾಹಿತಿಯ ಆಧಾರದ ಮೇಲೆ ಪೊಲೀಸರ ಸಹಕಾರದಿಂದ ಹಿಡಿದು, 12 ಗಿರಿ ತಳಿಯ ಹಸುಗಳನ್ನು ರಕ್ಷಿಸಿರುವ ಘಟನೆ ನಡೆದಿದೆ.

ಈ ಕುರಿತು ಹಿಂದೂ ಹಿತ ರಕ್ಷಣಾ ವೇದಿಕೆಯ ಶಿವು ಮಾತನಾಡಿ, ತಡರಾತ್ರಿ ಸುಮಾರು ಎರಡು ಗಂಟೆಯ ಸುಮಾರಿಗೆ ಕೆಎ-46-2575 ನಂಬರ್‌ನ ಪಿಕ್‌ಅಪ್ ವಾಹನದಲ್ಲಿ ಅಕ್ರಮವಾಗಿ ಹಸುಗಳನ್ನು ಸಾಗಿಸುತ್ತಿದ್ದಾರೆಂಬ ಮಾಹಿತಿ ಖಚಿತಪಡಿಸಿಕೊಂಡು, ಸಕಲೇಶಪುರ ನಗರ ಪೊಲೀಸ್ ಠಾಣೆಗೆ ತಿಳಿಸಿದ್ದೇವೆ. ನಂತರ ಪೊಲೀಸರು ದೋಣಿಗಲ್ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನವನ್ನು ತಡೆದು 12 ಹಸುಗಳು ವಾಹನವನ್ನು ಚಾಲಕ ತಪ್ಪಿಸಿಕೊಂಡು ತಲೆಮರೆಸಿಕೊಂಡಿದ್ದಾನೆ.



ಎಲ್ಲಾ ಹಸುಗಳು ಗಿರಿ ತಳಿಯವುಗಳಾಗಿದ್ದು, ಆರೋಗ್ಯವಾಗಿವೆ. ಅವುಗಳ ಕಿವಿಯಲ್ಲಿ ಗುರುತು ಚಿಹ್ನೆ (ಟ್ಯಾಗ್) ಇತ್ತು. ಗೋಗಳನ್ನು ನಿಲ್ಲಲು ಅಥವಾ ಕೂರಲು ಆಗದ ರೀತಿಯಲ್ಲಿ ತುಂಬಿ ಸಾಗಿಸಲಾಗುತ್ತಿತ್ತು. ಕಳೆದ ತಿಂಗಳಲ್ಲಿಯೂ ಇದೇ ರೀತಿಯಾಗಿ ಸುಜುಕಿ ಬ್ರೆಜ್ಜಾ ವಾಹನದಲ್ಲಿ ನಾಲ್ಕು ಹಸುಗಳನ್ನು ಕಳ್ಳ ಸಾಗಣೆ ಮಾಡುತ್ತಿದ್ದವರನ್ನು ಪೊಲೀಸರ ಸಹಕಾರದಿಂದ ಪತ್ತೆ ಹಚ್ಚಿದ್ದೇವೆ ಎಂದರು.

ರಾಷ್ಟ್ರೀಯ ಹೆದ್ದಾರಿಯ ಮೂಲಕ ಸಕಲೇಶಪುರದಿಂದ ಕೇರಳ ಹಾಗೂ ಮಂಗಳೂರು ಭಾಗಗಳಿಗೆ ಗೋಗಳ ಕಳ್ಳ ಸಾಗಣೆ ನಿರಂತರವಾಗಿ ನಡೆಯುತ್ತಿದೆ. ಆದರೆ ಈ ಕುರಿತು ಪೊಲೀಸರು ಗಂಭೀರವಾಗಿ ತನಿಖೆ ನಡೆಸುತ್ತಿಲ್ಲ. ಹಿಂದಿನ ಪ್ರಕರಣಗಳಲ್ಲಿಯೂ ಆರೋಪಿಗಳು ಜಾಮೀನು ಪಡೆದು ಬಿಡುಗಡೆಯಾಗಿರುವುದರಿಂದ ಕಳ್ಳ ಸಾಗಣೆಗಾರರಿಗೆ ಯಾವುದೇ ಭಯವಿಲ್ಲದಂತಾಗಿದೆ ಎಂದು ಆರೋಪಿಸಿದರು.

ವಶಕ್ಕೆ ಪಡೆದಿರುವ ಗೋಗಳನ್ನು ಅರಸೀಕೆರೆ ತಾಲ್ಲೂಕಿನ ಭಾನುವಾರದಲ್ಲಿರುವ ಗೋಶಾಲೆಗೆ ಸಾಗಿಸಲಾಗಿದ್ದು, ವಶಪಡಿಸಿಕೊಂಡ ವಾಹನ ಮತ್ತು ಹಸುಗಳ ಕುರಿತು ಪ್ರಕರಣ ದಾಖಲಾಗಿದ್ದು ನಗರ ಪೊಲೀಸ್ ಠಾಣೆಯಲ್ಲಿ ತನಿಖೆ ಮುಂದುವರಿದಿದೆ.

ಒಂದು ವಾರದೊಳಗೆ ಆರೋಪಿಗಳನ್ನು ಬಂಧಿಸದಿದ್ದರೆ ಹಿಂದೂ ಹಿತ ರಕ್ಷಣಾ ವೇದಿಕೆ ದೊಡ್ಡ ಮಟ್ಟದ ಪ್ರತಿಭಟನೆಗೆ ಮುಂದಾಗಲಿದೆ ಎಂದು ಅವರು ಎಚ್ಚರಿಸಿದ್ದಾರೆ.

## ನ.15 ರಂದು ಮಾಹಿತಿ ಹಕ್ಕು ಕಾಯ್ದೆಯ ಕುರಿತು ತರಬೇತಿ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ರಾಜ್ಯ ಮಾಹಿತಿ ಆಯುಕ್ತರುಗಳಾದ ರುದ್ರಣ್ಣ ಹರ್ತಿಕೋಟೆ ಮತ್ತು ರಾಜಶೇಖರ್ ಎಸ್. ಅವರುಗಳು ನ.15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಹಾಸನ ಜಿಲ್ಲೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಮಾಹಿತಿ ಹಕ್ಕು ಅಧಿನಿಯಮ ಕುರಿತು ಜಾಗೃತಿ, ಸಂವಾದ, ಸಾರ್ವಜನಿಕರೊಂದಿಗೆ ಕಾಯ್ದೆಯ ಸದ್ಬಳಕೆ ಕುರಿತು ಚರ್ಚಿಸುವ ಸಂಬಂಧ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದ್ದಾರೆ.

# ಮಾಜಿ ಸಚಿವ ಶಿವರಾಂ ಮೇಲಿನ ಆರೋಪ ಸತ್ಯಕ್ಕೆ ದೂರ

• ಪ್ರಜೋದಯ ವರದಿ

**ಜಾವಗಲ್:** ಮಾಜಿ ಸಚಿವ ಬಿ. ಶಿವರಾಂ ಮೇಲೆ ಬಿಜೆಪಿ ಮುಖಂಡರಾದ ರಮೇಶ, ಕೋಳಗುಂದ ಪ್ರಸಾದ್ ಮಾಡಿರುವ ಇಲ್ಲಸಲ್ಲದ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ಮಾಜಿ ಜಿಲ್ಲಾ ಪಂಚಾಯತಿ ಸದಸ್ಯಹಾಗೂ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಕೆ.ಪ್ರಭಾಕರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿದ ಅವರು, ಇಂದು ಜಾವಗಲ್ ದೊಡ್ಡ ಕೆರೆ ತುಂಬಿ ಕೋಡಿ ಬೀಳಲು ಪ್ರಮುಖ ಕಾರಣ ಆದವರು ಮಾಜಿ ಸಚಿವ ಬಿ ಶಿವರಾಂ ಪಾತ್ರ ಬಹು ದೊಡ್ಡದಿದೆ. ಅಕ್ಟೋಬರ್ 19 ರಂದು ನಾಗಲಾಪುರ ಕಟ್ಟೆಯಿಂದ ಜಾವಗಲ್ ದೊಡ್ಡಕೆರೆಗೆ ಶೇ 80 ರಷ್ಟು ನೀರು ತುಂಬಿಸುವ ನಾಗಲಾಪುರ ಕಟ್ಟೆಯ ನಾಲೆಯನ್ನು ಸ್ಥಿತಿ ಗತಿಗಳನ್ನು ಖುದ್ದು ವೀಕ್ಷಿಸಿ ಪರಿಶೀಲಿಸಿ ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಎ ಇ ಇ ರವರೊಂದಿಗೆ ನಾಲೆಯಲ್ಲಿರುವ ದೋಷಗಳನ್ನು ಕೂಡಲೇ ಸರಿಪಡಿಸುವಂತೆ ದೂರವಾಣಿ ಮೂಲಕ ಸೂಚಿಸಿ, ತಕ್ಷಣ ದುರಸ್ತಿ ಮಾಡಿದ ಕಾರಣದಿಂದ ನಾಲೆಯಿಂದ ನೀರು ಸರಾಗವಾಗಿ ಹರಿದು ಕೆರೆ ತುಂಬುವಂತಾಯಿತು ಎಂದರು.



ಈ ಕುರಿತು ಅಕ್ಟೋಬರ್ 27 ರಂದು ಸಣ್ಣ ನೀರಾವರಿ ಸಚಿವರ ಇಲಾಖೆ ಹಾಗೂ ಅಕ್ಟೋಬರ್ 28 ರಂದು ಸಚಿವರು ಇಲಾಖೆಯ ಪ್ರಧಾನ ಕಾರ್ಯದರ್ಶಿ ಪವಿತ್ರಾ ಅವರೊಂದಿಗೆ ನಾಲೆಯ ದುರಸ್ತಿಯ ಬಗ್ಗೆ ವಿವರಿಸಿ ಕೂಡಲೇ ದುರಸ್ತಿ ಮಾಡಬೇಕೆಂದು ಮಾಜಿ ಗ್ರಾಮ ಪಂಚಾಯತಿ ಸದಸ್ಯ ನರಸಿಂಹಸ್ವಾಮಿ, ಗ್ಯಾರಂಟಿ ಕಮಿಟಿ ಸದಸ್ಯ ದೇಶಾಣಿ ಆನಂದ ಅವರೊಂದಿಗೆ ಚರ್ಚಿಸಿ ತಮ್ಮ ಹಸ್ತಾಕ್ಷರದಲ್ಲಿ ಇಲಾಖೆಗೆ ಅರ್ಜಿ ಸಲ್ಲಿಸಿ 7 ಕೋಟಿ ಅನುಮೋದನೆ ಡಿ ಪಿ ಆರ್ ಆಗಲು ಪ್ರಮುಖ ಕಾರಣ ಬಿ ಶಿವರಾಂ ಅವರಾಗಿದ್ದಾರೆ ಎಂದು ಸಮರ್ಥಿಸಿಕೊಂಡರು.

# ಕಣತೂರು ಗ್ರಾಪಂ ಉಪಾಧ್ಯಕ್ಷರಾಗಿ ಪದ್ಮ



• ಪ್ರಜೋದಯ ವರದಿ

**ಆಲೂರು:** ಕಣತೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾಗಿ ನಾಕಲಗೂಡು ಕ್ಷೇತ್ರದ ಸದಸ್ಯೆ ಪದ್ಮ ಜಗದೀಶ್ ಲಾಟರಿ ಮೂಲಕ ಆಯ್ಕೆಯಾದರು.

ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಮುರುಡೂರು ಕ್ಷೇತ್ರದ ಶಾರದ ಸೋಮಶೇಖರ್ ಅವರೂ ಸಹ ನಾಮಪತ್ರ ಸಲ್ಲಿಸಿದ್ದರು. 12 ಸದಸ್ಯರ ಬಲದಲ್ಲಿ ಇಬ್ಬರಿಗೂ ತಲಾ 6 ಮತಗಳು ಚಲಾವಣೆಯಾಗಿದ್ದವು. ಸ್ಪರ್ಧಿಗಳ ಒಮ್ಮತದ ಮೇರೆಗೆ, ಚುನಾವಣಾಧಿಕಾರಿ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯಶರ್ಮ ಅವರು ಲಾಟರಿ ಪರೀಕ್ಷೆಗೆ ಒಳಪಡಿಸಿದಾಗ, ಪದ್ಮಜಗದೀಶ್ ಅವರು ಜಯಶಾಲಿಯಾದರು ಎಂದು ಘೋಷಿಸಿದರು.

# ವನ್ಯಜೀವಿಗಳ ದಾಳಿ: ಗಾಯಾಳುಗಳಿಗೆ ತಕ್ಷಣ ಪರಿಹಾರ ವಿತರಿಸಿ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ವನ್ಯಜೀವಿಗಳ ದಾಳಿಯಿಂದ ಗಾಯಗೊಂಡವರಿಗೆ ಕೂಡಲೇ 24 ಗಂಟೆಯೊಳಗೆ ಪರಿಹಾರ ನೀಡಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಲತಾಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಮಾನವ ಮತ್ತು ಪ್ರಾಣಿಗಳ ಸಂಘರ್ಷ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು 2025 ರ ಜನವರಿಯಿಂದ ಇದುವರೆಗೆ ಸಂಭವಿಸಿರುವ ಅವಘಡಗಳು, ಸಾವು, ಗಾಯಗೊಂಡವರ ಪಟ್ಟಿಯನ್ನು ತಾಲ್ಲೂಕುವಾರು ಸಿದ್ದಪಡಿಸಿ. ಗಾಯಗೊಂಡವರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಸರ್ಕಾರದಲ್ಲಿ ಎಪೆನಾಲ್ ಆಗಿರುವ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡಲು ಒಂದು ಸುತ್ತೋಲೆ ಹೊರಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ತಾಲ್ಲೂಕು ಆರೋಗ್ಯ ಅಧಿಕಾರಿಗಳು ವಿಳಂಬ ಮಾಡದೆ ಗಾಯಾಳುಗಳ ಆರೋಗ್ಯದ ಮೇಲೆ ಉಂಟಾಗಿರುವ ತೀವ್ರತೆಯನ್ನು ಅರಿತು ತಕ್ಷಣ ಪ್ರಮಾಣ ಪತ್ರವನ್ನು ನೀಡಿ ಪರಿಹಾರ ನೀಡಲು ಸಹಾಯವಾಗುತ್ತದೆ. ಪರಿಹಾರಕ್ಕೆ ಜನರು ಅಲೆದಾಟ ಮಾಡದಂತೆ ಎಚ್ಚರಿಕೆವಹಿಸಿ ಪರಿಹಾರ ಒದಗಿಸಲು ಅಧಿಕಾರಿಗಳಿಗೆ ತಿಳಿಸಿದರು. ಶಾಶ್ವತ ಅಂಗವಿಕಲತೆಗೆ 10 ಲಕ್ಷ, ಭಾಗಶಃ ಅಂಗವಿಕಲತೆಗೆ 5 ಲಕ್ಷ ಪರಿಹಾರ ನೀಡಲು ಅಧಿಕಾರಿಗಳು ನಿಗಾ ವಹಿಸಲು ಲತಾಕುಮಾರಿ ನಿರ್ದೇಶನ ನೀಡಿದರು.

ಬೆಳೆ, ಪೈಪ್‌ಲೈನ್, ಗೇಟ್, ಕಾಂಪೌಂಡ್, ಶೆಡ್ ಮೇಲೆ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಪರಿಹಾರ ನೀಡಲು ಕ್ರಮ ವಹಿಸಿ. ತೆಂಗು, ಅಡಿಕೆ,ಕಾಫಿ, ಮೆಣಸು ಮತ್ತಿತರ ತೋಟಗಾರಿಕೆ ಬೆಳೆಗಳನ್ನು ವನ್ಯ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದಕ್ಕೆ ನೆರವಾಗುವಂತೆ ಒಂದು ಸಮಿತಿ ರಚಿಸಿ ವರದಿ ತಯಾರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಬಿಕ್ಕೋಡು, ಅರೆಹಳ್ಳಿ ವ್ಯಾಪ್ತಿಯಲ್ಲಿ ಆನೆಗಳು ಓಡಾಡುವುದರಿಂದ ಸಾರ್ವಜನಿಕರು ಕತ್ತಲೆ ಸಮಯದಲ್ಲಿ ಎಚ್ಚರವಹಿಸಲು ಸಹಕಾರಿಯಾಗುವಂತೆ ರಸ್ತೆಯ ತಿರುವಿನಲ್ಲಿ ಹಾಗೂ ಎರಡು ಬದಿಗಳಲ್ಲಿ ವಿದ್ಯುತ್ ದೀಪ ಅಳವಡಿಸಲು ಕ್ರಮ ವಹಿಸುವಂತೆ ಜಿಲ್ಲಾ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಮಲೆನಾಡು ಪ್ರದೇಶದಲ್ಲಿ ನೆಟ್ ವರ್ಕ್ ಸಿಗದಿರುವ ಗ್ರಾಮಗಳು ಮತ್ತು ಸ್ಥಳಗಳನ್ನು ಗುರುತಿಸಿ ಎಂದು ಹೇಳಿದರು.

ಅರೆಹಳ್ಳಿಯಲ್ಲಿ ಸುಸಜ್ಜಿತ ಅಂಬುಲೆನ್ಸ್ ಲಭ್ಯವಿರುವಂತೆ ನೋಡಿಕೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅವರಿಗೆ ಸೂಚಿಸಿದರಲ್ಲದೆ, ಈ ವ್ಯಾಪ್ತಿಯಲ್ಲಿ ಎಷ್ಟು ಶಾಲೆಗಳಿವೆ ಎಷ್ಟು ಮಕ್ಕಳಿದ್ದಾರೆ. ನಿಗದಿತ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಚಿಂತನೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಕಾಡು ಕೋಣ, ಕರಡಿ, ಚಿರತೆ ಮತ್ತಿತರ ವನ್ಯ ಪ್ರಾಣಿಗಳ ದಾಳಿಯಿಂದ ಉಂಟಾಗುವ ನಷ್ಟದ ಬಗ್ಗೆ ಎಲ್ಲಾ ತಹಸೀಲ್ದಾರ್‌ಗಳು ಗಮನಹರಿಸಿ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್‌ಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಭೂ ದಾಖಲೆಗಳ ಇಲಾಖೆಯ ಉಪ ನಿರ್ದೇಶಕಿ ಹೇಮಲತಾ ಇದ್ದರು.

## ಷರತ್ತುಗಳೊಂದಿಗೆ ನ.16 ರಂದು ಮೆರವಣಿಗೆಗೆ ಒಪ್ಪಿಗೆ ಸೂಚಿಸಿ ಹೈಕೋರ್ಟ್ ಆದೇಶ

# ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ

• ಪ್ರಜೋದಯ ವರದಿ


**ಬೆಂಗಳೂರು:** ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಹೈಕೋರ್ಟ್ ಕೊನೆಗೂ ಗುರುವಾರ ಅನುಮತಿ ನೀಡಿದೆ. ಆದರೆ ಕೆಲವು ಷರತ್ತುಗಳನ್ನು ವಿಧಿಸಿದೆ.

ಪಥಸಂಚಲನಕ್ಕೆ ಅನುಮತಿ ಕೋರಿ ಆರ್ ಎಸ್‌ಎಸ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ. ಶುಕುರೆ ಕಮಲ್ ಅವರು, ನವೆಂಬರ್ 16 ರಂದು 300 ಜನರು ಮತ್ತು 50 ಸದಸ್ಯರ ಬ್ಯಾಂಡ್‌ನೊಂದಿಗೆ ರೂಟ್ ಮಾರ್ಚ್ ನಡೆಸಲು ಅನುಮತಿ ನೀಡಿದ್ದಾರೆ.

ನವೆಂಬರ್ 16 ರಂದು ನಿಗದಿಯಾಗಿದ್ದ ಕಾರ್ಯಕ್ರಮಕ್ಕೆ ನಿರ್ದಿಷ್ಟ ಷರತ್ತುಗಳಿಗೆ ಒಳಪಟ್ಟು ಚಿತ್ತಾಪುರದ ತಹಶೀಲ್ದಾರ್ ಈಗಾಗಲೇ ಅನುಮತಿ ನೀಡಿದ್ದಾರೆ ಎಂದು ನ್ಯಾಯಮೂರ್ತಿ ಎಂಜಿಎಸ್ ಕಮಲ್ ತಿಳಿಸಿದ್ದಾರೆ.



ನವೆಂಬರ್ 16ರ ಮಧ್ಯಾಹ್ನ 3.30 ರಿಂದ ಸೂರ್ಯಾಸ್ತದವರೆಗೆ ಪಥ ಸಂಚಲನಕ್ಕೆ ಅವಕಾಶ ನೀಡಲಾಗಿದೆ. ಪಥಸಂಚಲನದಲ್ಲಿ 300 ಕಾರ್ಯಕರ್ತರು ಹಾಗೂ 50 ಬ್ಯಾಂಡ್ ವಾದಕರಿಗೆ ಅವಕಾಶ ನೀಡಲಾಗಿದ್ದು, ಒಟ್ಟು 350 ಜನ ಮಾತ್ರ ಭಾಗಿಯಾಗಬೇಕು ಎಂದು ತಿಳಿಸಿದೆ.



ವಿಚಾರಣೆಯ ಸಮಯದಲ್ಲಿ, ಅರ್ಜಿದಾರರನ್ನು ಪ್ರತಿನಿಧಿಸುವ ಹಿರಿಯ ವಕೀಲ ಅರುಣಾ ಶ್ಯಾಮ್, ಕಾರ್ಯಕ್ರಮಕ್ಕೆ ಅವಕಾಶ ನೀಡಿದ್ದಕ್ಕಾಗಿ ಅಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದರು. ಆದರೆ, ತಹಶೀಲ್ದಾರ್ ಅವರ ಆದೇಶದಲ್ಲಿನ ಎರಡು ಷರತ್ತುಗಳನ್ನು ಮಾರ್ಪಡಿಸುವಂತೆ ನ್ಯಾಯಾಲಯವನ್ನು ಕೋರಿದರು.

ಸಂಘದ ಶತಮಾನೋತ್ಸವ ಆಚರಣೆ ಮತ್ತು ಈ ಸಂದರ್ಭಕ್ಕೆ ಸಂಬಂಧಿಸಿದ ಸಾರ್ವಜನಿಕ ಭಾವನೆಗಳನ್ನು ಉಲ್ಲೇಖಿಸಿ, ಭಾಗವಹಿಸುವವರ ಮಿತಿಯನ್ನು 300 ರಿಂದ 600ಕ್ಕೆ ಮತ್ತು ಬ್ಯಾಂಡ್ ಸದಸ್ಯರ ಸಂಖ್ಯೆಯನ್ನು 25 ರಿಂದ 50 ಕ್ಕೆ ಹೆಚ್ಚಿಸಬೇಕೆಂದು ಅವರು ಕೋರಿದರು.

ರಾಜ್ಯದ ಪರವಾಗಿ ಹಾಜರಾದ ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ, ಭಾಗವಹಿಸುವವರ ಸಂಖ್ಯೆಯನ್ನು ಹೆಚ್ಚಿಸುವ ಮನವಿಯನ್ನು ವಿರೋಧಿಸಿದರು, ಅರ್ಜಿದಾರರು ಹತ್ತಿರದ ಪ್ರದೇಶಗಳಲ್ಲಿ ನಡೆಸಿದ ಇದೇ ರೀತಿಯ ಮೆರವಣಿಗೆಗಳನ್ನು ನಿರ್ಣಯಿಸಿದ ನಂತರ 300 ರ ಸಂಖ್ಯೆಯನ್ನು ನಿಗದಿಪಡಿಸಲಾಗಿದೆ ಎಂದು ಹೇಳಿದರು.

ಆದಾಗ್ಯೂ, ಬ್ಯಾಂಡ್ ಬಲವನ್ನು 25 ರಿಂದ 50 ಸದಸ್ಯರನ್ನು ಹೆಚ್ಚಿಸಲು ಅವರು ಆಕ್ಷೇಪಿಸಲಿಲ್ಲ.

**ಎರಡು ಬಾರಿ ಶಾಂತಿ ಸಭೆ**

ಚಿತ್ತಾಪುರದಲ್ಲಿ ಪಥಸಂಚಲನ ವಿಚಾರ ಸಂಬಂಧ ಎರಡು ಬಾರಿ ಶಾಂತಿ ಸಭೆ ನಡೆದಿತ್ತು. ಮೊದಲ ಬಾರಿಗೆ ಅ.28ರಂದು ಜಿಲಾಧಿಕಾರಿ ಕಚೇರಿಯಲ್ಲಿ ಸಭೆ ನಡೆದಿತ್ತು.

ಈ ಸಭೆ ವಿಫಲವಾಗಿದ್ದ ಹಿನ್ನಲೆಯಲ್ಲಿ ಹೈಕೋರ್ಟ್ ಸೂಚನೆಯಂತೆ 2ನೇ ಬಾರಿ ಶಾಂತಿ ಸಭೆಯನ್ನ ಬೆಂಗಳೂರಿನ ಅಡ್ವೊಕೇಟ್ ಜನರಲ್ (ಎಜಿ) ಕಚೇರಿಯಲ್ಲಿ ನವೆಂಬರ್ 5ರಂದು ನಡೆಸಲಾಗಿತ್ತು.

# ನಾಯಿಗಳ ಉಪಟಳ: ಸಂತಾನ ಶಕ್ತಿಹರಣ ಶಸ್ತ್ರಚಿಕಿತ್ಸೆಗೆ ಚಾಲನೆ

• ಪ್ರಜೋದಯ ವರದಿ

**ಸಕಲೇಶಪುರ:** ಸುಪ್ರೀಂ ಕೋರ್ಟ್‌ನ ನಿರ್ದೇಶನದಂತೆ ಬೀದಿ ನಾಯಿಗಳ ಉಪಟಳಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಆಂಟಿರೇಬಿಸ್ ಲಸಿಕೆ ಮತ್ತು ಸಂತಾನ ಶಕ್ತಿಹರಣ ಶಸ್ತ್ರಚಿಕಿತ್ಸೆ ಕಾರ್ಯಕ್ಕೆ ಸಕಲೇಶಪುರದಲ್ಲಿ ಅಧಿಕೃತವಾಗಿ ಚಾಲನೆ ನೀಡಲಾಗಿದೆ ಎಂದು ಉಪ ವಿಭಾಗಾಧಿಕಾರಿ ರಾಜೇಶ್ ಅವರು ಹೇಳಿದರು.

ಮಳಲಿ ಗ್ರಾಮದಲ್ಲಿರುವ ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಬೀದಿ ನಾಯಿಗಳನ್ನು ಹಿಡಿದು ಸಂತಾನಹರಣ ಶಸ್ತ್ರಚಿಕಿತ್ಸೆ ನಡೆಸಿ ನಂತರ ಆಂಟಿರೇಬಿಸ್ ಲಸಿಕೆ ನೀಡಲಾಗುತ್ತದೆ. ಈ ಮೂಲಕ ಸಾರ್ವಜನಿಕರಲ್ಲಿ ಹೆಚ್ಚುತ್ತಿರುವ ನಾಯಿಗಳ ಉಪಟಳವನ್ನು ಕಡಿಮೆಗೊಳಿಸುವ ಉದ್ದೇಶ ಹೊಂದಿದ್ದೇವೆ ಎಂದರು.

ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ ಅವರು ಮಾತನಾಡಿ, ಪಟ್ಟಣ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಕಾರ್ಯವನ್ನು ಪ್ರಾರಂಭಿಸಲಾಗಿದೆ. ಪಶುವೈದ್ಯ ಇಲಾಖೆಯ ಸಮೀಕ್ಷೆಯ ಪ್ರಕಾರ ಪಟ್ಟಣದಲ್ಲಿ ಸುಮಾರು 480 ನಾಯಿಗಳಿವೆ. ಪ್ರತಿದಿನ ಸುಮಾರು 20 ನಾಯಿಗಳಿಗೆ ಸಂತಾನಹರಣ ಶಸ್ತ್ರಚಿಕಿತ್ಸೆ ಮತ್ತು ಲಸಿಕೆ ನೀಡುವ ಕಾರ್ಯ ನಡೆಯಲಿದೆ ಎಂದು ತಿಳಿಸಿದರು.



ಪಶುವೈದ್ಯ ಡಾ. ಕಿರಣ್ ಅವರು ಮಾತನಾಡಿ, ನಾಯಿಗಳನ್ನು ಬೆಳಗಿನ ವೇಳೆ ಹಿಡಿದು ಘಟಕಕ್ಕೆ ತರಲಾಗುತ್ತದೆ. ನಂತರ ಶಸ್ತ್ರಚಿಕಿತ್ಸೆ ಗೆ ಮುನ್ನ ಶೇವಿಂಗ್ ಮತ್ತು ಡಿಸಿಂಫೆಕ್ಷನ್ ಮಾಡಲಾಗುತ್ತದೆ. ಅನಸ್ಥೇಶಿಯಾ ನೀಡಿ ಶಸ್ತ್ರಚಿಕಿತ್ಸೆ ನೆರವೇರಿಸಿ, ಮೂರರಿಂದ ಐದು ದಿನಗಳವರೆಗೆ ಆರೈಕೆ ನೀಡಿದ ಬಳಿಕ ನಾಯಿಗಳನ್ನು ಅದೇ ಸ್ಥಳದಲ್ಲಿ ಬಿಟ್ಟುಬಿಡಲಾಗುತ್ತದೆ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಪುರಸಭಾ ಸಿ.ಎ.ಒ. ನಟರಾಜ್, ಇಂಜಿನಿಯರ್ ಸುಜಾತ, ಪುರಸಭಾ ಸಿಬ್ಬಂದಿ ರೇವಣ್ಣ ಇನ್ನಿತರರು ಉಪಸ್ಥಿತರಿದ್ದರು.

# ರಸ್ತೆ ಬದಿ ಕಸ ಸುರಿದವರಿಗೆ ಪುರಸಭೆ ಸಿಬ್ಬಂದಿ ತರಾಟೆ

## ಬೈಕ್‌ನಲ್ಲಿ ಬಂದು ಕಸ ಎಸೆದ ವ್ಯಕ್ತಿ | ವಿದ್ಯಾವಂತರಿಂದಲೇ ಪಟ್ಟಣದ ಸೌಂದರ್ಯಕ್ಕೆ ಧಕ್ಕೆ

• ಪ್ರಜೋದಯ ವರದಿ

**ಬೇಲೂರು:** ಪಟ್ಟಣದ ಹಳೇಬೀಡು ರಸ್ತೆ ಬದಿ ಕಸ ಸುರಿದ ಸಾರ್ವಜನಿಕರನ್ನು ಪುರಸಭೆ ಸಿಬ್ಬಂದಿ ಗುರುವಾರ ತೀವ್ರ ತರಾಟೆಗೆ ತೆಗೆದುಕೊಂಡರು.

ಬಂಟೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಬದಿ ಮತ್ತು ನಾಲೆಗೆ ಕಸ ಸುರಿಯುತ್ತಿರುವುದನ್ನು ಖಚಿಪಡಿಸಿಕೊಂಡು ಸ್ಥಳಕ್ಕೆ ಧಾವಿಸಿದ ಸಿಬ್ಬಂದಿ ತಪ್ಪಿತಸ್ಥರಿಗೆ ಸ್ವಚ್ಛತೆಯ ಪಾಠ ಮಾಡಿದರು. ಬೆಂಗಳೂರಿನಲ್ಲಿ ರಸ್ತೆಗೆ ಕಸ ಸುರಿದವರ ಮನೆ ಮುಂದೆಯೇ ತ್ಯಾಜ್ಯ ಸುರಿದು ದಂಡ ವಿಧಿಸಲಾಗಿತ್ತು. ಇನ್ನು ಮುಂದೆಯೂ ಇದೇ ಪ್ರವೃತ್ತಿ ಮುಂದುವರಿದರೆ ತಾವೂ ಸಹ ಅದೇ ಕ್ರಮ ಕೈಗೊಳ್ಳಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಪುರಸಭಾ ಆರೋಗ್ಯ ನಿರೀಕ್ಷಾಧಿಕಾರಿ ಲೋಹಿತ್ ಅವರು ಮಾತನಾಡಿ, ಪಟ್ಟಣದಲ್ಲಿ ಸ್ವಚ್ಛತೆ ಕಾಪಾಡಲು ಪುರಸಭೆ ಸಿಬ್ಬಂದಿ ಹಗಲಿರುಳು ಶ್ರಮಿಸುತ್ತಾರೆ. ಬಂಟೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಸವನ್ನು ರಸ್ತೆಗೆ ಸುರಿಯುತ್ತಿರುವುದು ಶೋಚನೀಯ. ಈ ಬಗ್ಗೆ ಎಚ್ಚರಿಕೆ ನೀಡಿ ದರೂ ಕೂಡ ಕೆಲವರು ರಾತ್ರಿ ವೇಳೆ ಕಸ ಸುರಿಯುತ್ತಿದ್ದಾರೆ. ವ್ಯಕ್ತಿಯೊಬ್ಬ ಬೈಕ್‌ನಲ್ಲಿ ಕಸ ಸುರಿ ಯುತ್ತಿರುವ ಬಗ್ಗೆ ಖಚಿತ ಮಾಹಿತಿ ಪಡೆದು ತಿಳವಳಿಕೆ ನೀಡಿ ಎಚ್ಚರಿಕೆ ನೀಡಲಾಗಿದೆ. ವಿದ್ಯಾ ವಂತರೇ ಅನಾಗರಿಕರಂತೆ ವರ್ತಿಸುತ್ತಿದ್ದಾರೆಂದರು.




**ಪಟ್ಟಣದ ಸೌಂದರ್ಯಕ್ಕೆ ಧಕ್ಕೆ**

ಐತಿಹಾಸಿಕ ಚನ್ನಕೇಶವ ದೇವಸ್ಥಾನ ಇರುವ ಬೇಲೂರು ಪಟ್ಟಣಕ್ಕೆ ನಿತ್ಯ ನೂರಾರು ಪ್ರವಾಸಿಗರು ಬರುತ್ತಾರೆ. ರಾಜ್ಯ ಮಾತ್ರವಲ್ಲದೆ ವಿದೇಶಗಳಿಂದಲೂ ಸಾರ್ವಜನಿಕರು ಆಗಮಿಸುತ್ತಾರೆ. ಪಟ್ಟಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವುದು ಪುರಸಭೆಗೆ ಸವಾಲಿನ ಕೆಲಸವಾಗಿದೆ. ಅಧಿಕಾರಿಗಳ ಮುತುವರ್ಜಿಯಿಂದಾಗಿ ಪೌರ ಕಾರ್ಮಿಕರು ಶಕ್ತಿ ಮೀರಿ ಶ್ರಮಿಸುತ್ತಿದ್ದು ಪಟ್ಟಣದ ಪರಿಸರ ಕಾಪಾಡುತ್ತಿದ್ದಾರೆ. ಆದರೆ ಅದ್ಯಾವುದರ ಪರಿವೇ ಇಲ್ಲದಂತೆ ಕೆಲವರು ರಸ್ತೆಗೆ ಕಸ ಸುರಿದು ಸೌಂದರ್ಯ ಹಾಳುಗೆಡವುತ್ತಿದ್ದಾರೆ.

ಪುರಸಭೆಯ 23 ವಾರ್ಡ್‌ಗಳಲ್ಲೂ ಸ್ವಚ್ಛತೆಗೆ ಕ್ರಮ ವಹಿಸಲಾಗಿದೆ. ನಿತ್ಯ ಪೌರಕಾರ್ಮಿಕರು ಪಟ್ಟಣವನ್ನು ಸ್ವಚ್ಛಗೊಳಿಸಿದ ಬಳಿಕ ಕಸವನ್ನು ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ರವಾನಿಸುತ್ತಾರೆ. ಪ್ರತಿ ಮನೆಯಿಂದ ಒಣ ಮತ್ತು ಹಸಿ ಕಸ ಬೇರ್ಪಡಿಸಿ ವಾಹನಗಳ ಮೂಲಕ ತೆಗೆದುಕೊಂಡು ಹೋಗಲಾಗುತ್ತದೆ. ವಿಲೇವಾರಿ ಮಾಡಿದ ಬಳಿಕ ವೈಜ್ಞಾನಿಕವಾಗಿ ಕಸವನ್ನು ಸಾವಯುವ ಗೊಬ್ಬರವಾಗಿ ಪರಿವರ್ತಿಸಲಾಗುತ್ತದೆ. ಇಂತಹ ಮಹತ್ವಪೂರ್ಣ ಕೆಲಸಗಳನ್ನು ಪುರಸಭೆ ಸ್ವಚ್ಛತೆ ಹಿತದೃಷ್ಟಿಯಿಂದ ಕೈಗೊಂಡಿದೆ. ಕೆಲವರು ರಾತ್ರೋ ರಾತ್ರಿ ತಮ್ಮ ಮನೆಯಲ್ಲಿನ ರಾಶಿ ರಾಶಿ ಕಸವನ್ನು ಪುರಸಭೆಗೆ ವಾಹನಗಳಿಗೆ ನೀಡದೆ ಬೈಕ್‌ಗಳಲ್ಲಿ ಬಂದು ರಸ್ತೆ ಬದಿಯಲ್ಲಿ ಸುರಿಯುತ್ತಿರುವುದು ಖಂಡನೀಯ.

**ಬೀದಿ ನಾಯಿಗಳ ಉಪಟಳ ಅಧಿಕ**

ರಸ್ತೆ ಬದಿ ಕಸ ಸುರಿಯುತ್ತಿರುವುದರಿಂದ ದುರ್ನಾತ ಬೀರುತ್ತಿರುವುದು ಮಾತ್ರವಲ್ಲದೆ ಸಾಂಕ್ರಾಮಿಕ ರೋಗಗಳ ಭೀತಿಯೂ ಸ್ಥಳೀಯರನ್ನು ಕಾಡುತ್ತಿದೆ. ಇನ್ನು ಮಾಂಸ ದಂಗಡಿ, ಹೋಟೆಲ್‌ಗಳ ತ್ಯಾಜ್ಯ ಸುರಿಯುತ್ತಿರುವುದರಿಂದ ಆಹಾರ ಅರಸಿ ಬರುವ ಬೀದಿ ನಾಯಿಗಳು ಕಸವನ್ನು ಚೆಲ್ಲಾಪಿಲ್ಲಿ ಮಾಡುತ್ತವೆ. ರಸ್ತೆಯ ಮಧ್ಯ ಭಾಗಕ್ಕೆ ತ್ಯಾಜ್ಯ ಬಿಸಾಡುವುದರಿಂದ ವಾಹನ ಸವಾರರು, ಪಾದಚಾರಿಗಳು ಮೂಗು ಮುಚ್ಚಿಕೊಂಡು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪುರಸಭೆ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಇಂದು ಸಂಗಮೇಶ್ವರ ಶ್ರೀ ವರ್ಧಮಾನೋತ್ಸವ

• ಪ್ರಜೋದಯ ವರದಿ

**ಹಾಸನ:** ನಗರದ ಜವೇನಹಳ್ಳಿ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ ಅವರ ಜನ್ಮದಿನದ ವರ್ಧಮಾನೋತ್ಸವ ನ.14ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಮಠದ ಆವರಣದಲ್ಲಿ ನೆರವೇರಲಿದೆ. ರಾಯನಾಳು ಮಠದ ಸ್ವಾಮೀಜಿ, ಶಾಸಕ ಹೆಚ್.ಪಿ.ಸ್ವರೂಪ್ ಉಪಸ್ಥಿತಿ ವಹಿಸುವರು. ಮಠದ ಭಕ್ತರು, ಹಿತೈಷಿಗಳು, ಸಮಾಜ ಭಾಂದವರು ಭಾಗವಹಿಸಬೇಕೆಂದು ಕೋರಿದೆ.



ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಅವರನ್ನು ಸಂಸದ ಶ್ರೇಯಸ್ ಪಟೇಲ್ ಅವರು ಬೆಂಗಳೂರಿನಲ್ಲಿ ಭೇಟಿ ಮಾಡಿ, ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಹಾಗು ಮುಂದಿನ ಯೋಜನೆಗಳ ಕುರಿತು ಬೆಂಗಳೂರಿನಲ್ಲಿ ಗುರುವಾರ ಚರ್ಚೆ ನಡೆಸಿದರು.

## ಯಡಿಯೂರಪ್ಪ ವಿರುದ್ಧದ ಪ್ರಕರಣ ರದ್ದತಿಗೆ ಕೋರ್ಟ್ ನಕಾರ

• ಪ್ರಜೋದಯ ವರದಿ



**ಬೆಂಗಳೂರು:** ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣ ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ಪ್ರಕರಣ ರದ್ದುಗೊಳಿಸಬೇಕೆಂದು ಬಿ.ಎಸ್. ಯಡಿ ಯೂರಪ್ಪ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಶಾಸಕರು-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯ ಪೀಠದ ನ್ಯಾಯಮೂರ್ತಿ ಎಂ.ಐ.ಅರುಣ್ ಗುರುವಾರ ವಿಚಾರಣೆ ನಡೆಸಿದರು.

ಆಪಾದಿತ ಅಪರಾಧವನ್ನು ಗಮನದಲ್ಲಿಟ್ಟುಕೊಂಡು, ಬಿಜೆಪಿ ಹಿರಿಯ ನಾಯಕನಿಗೆ ಸಮನ್ಸ್ ಜಾರಿ ಮಾಡಿದ್ದ ವಿಚಾರಣಾ ನ್ಯಾಯಾಲಯದ ಫೆ.28ರ ಆದೇಶವನ್ನು ಪೀಠ ಎತ್ತಿಹಿಡಿದಿದೆ. ವಿಚಾರಣೆಗೆ ಹಾಜರಾಗುವಂತೆ ಯಡಿ ಯೂರಪ್ಪ ಅವರಿಗೆ ಒತ್ತಾಯಿಸಬಾರದು. ಅವರ ಉಪಸ್ಥಿತಿ ಅಗತ್ಯವಿಲ್ಲದಿದ್ದರೆ ವಿಚಾರಣೆಗೆ ಹಾಜರಾಗುವುದಕ್ಕೆ ವಿನಾ ಯಿತಿ ಕೋರಿ ಅವರ ಪರವಾಗಿ ಸಲ್ಲಿಸಲಾದ ಅರ್ಜಿಯನ್ನು ವಿಚಾರಣಾ ನ್ಯಾಯಾಲಯ ಪರಿಗಣಿಸಬೇಕೆಂದು ಆದೇಶ ದಲ್ಲಿ ತಿಳಿಸಿದೆ.

2024ರ ಫೆಬ್ರವರಿಯಲ್ಲಿ ಬೆಂಗಳೂರಿನ ತಮ್ಮ ನಿವಾಸ ದಲ್ಲಿ ನಡೆದ ಸಭೆಯ ಸಂದರ್ಭದಲ್ಲಿ ಯಡಿಯೂರಪ್ಪ ತಮ್ಮ 17 ವರ್ಷದ ಮಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆಂದು ಮಹಿಳೆಯೊಬ್ಬರು ಸದಾಶಿವನಗರ ಠಾಣೆಗೆ ದೂರು ನೀಡಿದ್ದರು. ಹೆಚ್ಚಿನ ತನಿಖೆಗಾಗಿ ಪ್ರಕರಣ ವನ್ನು ಸಿಐಡಿಗೆ ವರ್ಗಾಯಿಸಲಾಗಿತ್ತು. ಸಂಸ್ಥೆಯು ಎಫ್‌ಐಆರ್ ಮರು ದಾಖಲಿಸಿ, ಮಾಜಿ ಮುಖ್ಯಮಂತ್ರಿ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿತ್ತು.

## ರಾಜ್ಯದ 9 ಜಿಲ್ಲೆಯಲ್ಲಿ ಕೈಗಾರಿಕಾ ಪಾರ್ಕ್

» ಮೊದಲನೇ ಪುಟದಿಂದ

ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸುವ ಕುರಿತಂತೆ ಸಚಿವರೊಂದಿಗೆ ಸುದೀರ್ಘ ಸಮಾಲೋಚನೆ ನಡೆಸಲಾಯಿತು ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪದಂತೆ ಪ್ರಾದೇಶಿಕ ಕೈಗಾರಿಕಾ ಬೆಳವಣಿಗೆಯನ್ನು ಬಲಪಡಿಸಿ ಉತ್ತೇಜಿಸಲು, ಸಾಗಣೆಕೆಯ ಮೂಲಸೌಕರ್ಯವನ್ನು ಅಧಿಕವಾಗಿ ಅಭಿವೃದ್ಧಿಪಡಿಸಲು ಹಾಗು ಕರ್ನಾಟಕದ ಉದ್ದಗಲಕ್ಕೂ ಬೃಹತ್ ಪ್ರಮಾಣದಲ್ಲಿ ಉದ್ಯೋಗಾವಕಾಶ ಸೃಷ್ಟಿಸಲು ಈ ಯೋಜನೆಯು ಬಹುದೊಡ್ಡ ಮಟ್ಟದಲ್ಲಿ ಕೊಡುಗೆ ನೀಡುತ್ತದೆ ಎಂಬ ಅಂಶವನ್ನು ಸಚಿವ ಗೋಯಲ್ ಅವರಿಗೆ ಮನವರಿಕೆ ಮಾಡಿಕೊಡಲಾಯಿತು. ನನ್ನ ಪ್ರಸ್ತಾವನೆಗೆ ಅವರು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದರು. ರಾಜ್ಯದ ಕೈಗಾರಿಕಾಭಿವೃದ್ಧಿಗೆ ಕೈಜೋಡಿಸುವು ದಾಗಿ ಭರವಸೆ ನೀಡಿದರೆಂದು ಮಾಹಿತಿ ನೀಡಿದರು.

ಈ ಯೋಜನೆ ಅನುಷ್ಠಾನಕ್ಕೆ ಬಂದರೆ ಸಾಗಾಣಿಕೆ ಸುಲಭವಾಗಿ ಕೈಗಾರಿಕಾಭಿವೃದ್ಧಿ ವೇಗ ಗತಿಯಲ್ಲಿ ಸಾಗುತ್ತದೆ. ಉದ್ದೇಶಿತ ಜಿಲ್ಲೆಗಳಲ್ಲಿ ಯೋಜನೆ ಬಂದರೆ ಇಡೀ ರಾಜ್ಯಕ್ಕೆ ಸಮಗ್ರವಾಗಿ ಅನುಕೂಲವಾಗುತ್ತದೆ. ಮುಖ್ಯವಾಗಿ ಈ ಪ್ರದೇಶಗಳು ಸಾಮೂಹಿಕವಾಗಿ ದೊಡ್ಡ ಮಟ್ಟದಲ್ಲಿ ಕೈಗಾರಿಕಾ ಅಭಿವೃದ್ಧಿ ಕಾಣುವುದಲ್ಲದೆ, ಸಮತೋಲಿತ ಪ್ರಾದೇಶಿಕ ಬೆಳವಣಿಗೆಗೆ ಕಾಣಿಕೆ ನೀಡುತ್ತದೆ ಎಂದು ಹೇಳಿದರು.

ಪ್ರಸ್ತಾವಿತ ಕೈಗಾರಿಕಾ ಪಾರ್ಕ್‌ಗಳನ್ನು ಸೂಕ್ತವಾದ ಕೈಗಾರಿಕಾ ಕಾರಿಡಾರ್ ಇಲ್ಲವೇ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮದ ಚೌಕಟ್ಟಿನ ಅಡಿಯಲ್ಲಿ ಪರಿಗಣಿಸಬೇಕೆಂದು ವಿನಂತಿಸಲಾಗಿದೆ. ಈ ಜಿಲ್ಲೆಗಳನ್ನು ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್‌ಗಳಿಗೆ ಸಂಯೋಜಿಸುವ ಮೂಲಕ ಕರ್ನಾಟಕವು ಉದ್ಯೋಗ ಸೃಷ್ಟಿಯಲ್ಲಿ ನಿರ್ಣಾಯಕ ಪಾತ್ರ ವಹಿಸಲು ಅನುಕೂಲವಾಗುತ್ತದೆ. ಅಲ್ಲದೆ, ಸಾಗಾಣಿಗೆ ಸುಲಭವಾಗಿ ಖಾಸಗಿ ಬಂಡವಾಳ ಹೂಡಿಕೆಯಲ್ಲೂ ಗಮನಾರ್ಹ ಪ್ರಗತಿ ಸಾಧಿಸಲಿದೆ ಎಂದು ವಿವರಿಸಿದರು.

**ಉದ್ಯೋಗ ಸೃಷ್ಟಿ**

ಪ್ರಸ್ತಾವಿತ ಕೈಗಾರಿಕಾ ಪಾರ್ಕ್‌ಗಳು ದೊಡ್ಡ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಸುವ, ಪ್ರಾದೇಶಿಕ ಪೂರೈಕೆ ಸರಪಳಿಯ ಸಂಪರ್ಕಗಳನ್ನು ಮತ್ತಷ್ಟು ಬಲಪಡಿಸುವ ಹಾಗೂ ಹುಬ್ಬಳ್ಳಿ-ಧಾರವಾಡ ಮತ್ತು ಮಂಗಳೂರಿನಲ್ಲಿ ಸಾಗಣೆ ಮತ್ತು ಉತ್ಪಾದನೆಯಿಂದ ಮೊದಲುಗೊಂಡು ರಾಯಚೂರಿನಲ್ಲಿ ಕೃಷಿ ಸಂಸ್ಕರಣೆ, ಮೈಸೂರು ಮತ್ತು ಕೋಲಾರದಲ್ಲಿ ಮೌಲ್ಯವರ್ಧಿತ ವಲಯಗಳ ವಿಸ್ತರಣೆವರೆಗೆ ವಿಶೇಷ ಕೈಗಾರಿಕಾ ಸಮೂಹಗಳನ್ನು ಉತ್ತೇಜಿಸುತ್ತವೆ ಎಂದು ತಿಳಿಸಿದರು.

## ಕ್ರೀಡಾ ಚಟುವಟಿಕೆಗಳಿಲ್ಲದ ಶಿಕ್ಷಣ ಅಪೂರ್ಣ

• ಪ್ರಜೋದಯ ವರದಿ

**ಸಕಲೇಶಪುರ:** ಕ್ರೀಡಾ ಚಟುವಟಿಕೆಗಳಿಲ್ಲದ ಶಿಕ್ಷಣ ಪರಿಪೂರ್ಣವಾಗದು. ಮಕ್ಕಳ ಸರ್ವ ತೋಮುಖ ಬೆಳವಣಿಗೆಗೆ ದೈಹಿಕ ಚಟುವಟಿಕೆ ಅನಿವಾರ್ಯ ಹಾಗು ಕಡ್ಡಾಯ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.



ತಾಲ್ಲೂಕಿನ ಯಸಳೂರು ಹೋಬಳಿ ಕೇಂದ್ರದಲ್ಲಿರುವ ಹಿರಿಯ ಪ್ರಾಥ ಮಿಕ ಪಾಠ ಶಾಲೆ ಯಲ್ಲಿ ನೂತನ ಶಾಲಾ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಮಕ್ಕಳ ಬೆಳವಣಿಗೆಗೆ ಕ್ರೀಡೆಗಳು ಸಹ ಕಾರಿ. ಅದರಿಂದ ಮಕ್ಕಳ ದೈಹಿಕ ಹಾಗು ಮಾನಸಿಕ ಆರೋಗ್ಯ ಉತ್ತಮವಾಗಿರುತ್ತದೆಂದು ಅಭಿಪ್ರಾಯಪಟ್ಟರು.

ಭಾರತವು ಕ್ರೀಡೆಗಳಲ್ಲಿ ಹಿಂದುಳಿಯಲು ಅನೇಕ ಕಾರಣಗಳಿವೆ. ಅವುಗಳಲ್ಲಿ ಮುಖ್ಯವಾದವುಗಳೆಂದರೆ ಇತರೆ ದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಕ್ರೀಡೆಗಳಿಗೆ ನೀಡಿರುವ ಮಹತ್ವ ಕಡಿಮೆ. ಅದರ ಜೊತೆಗೆ ನಿರ್ಲಕ್ಷಕ್ಕೊಳಗಾದ ದೈಹಿಕ ಶಿಕ್ಷಣ, ಕ್ರೀಡೆಗಳ ಬಗ್ಗೆ ಪೋಷಕರ ನಿರಾಸಕ್ತಿ, ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ತರಬೇತಿ ಹಾಗು ಸೌಲಭ್ಯಗಳ ಕೊರತೆ, ಶಾಲೆಗಳಲ್ಲಿ ಆಟದ ಮೈದಾನದ ಕೊರತೆಯೆ ಮೂಲ ಕಾರಣವಾಗಿದೆ ಎಂದರು.

ಕ್ರೀಡೆಗಳಲ್ಲಿ ಮಹತ್ತರ ಸಾಧನೆ ಸಾಧಿಸಲು ಪ್ರಾಥಮಿಕ ಹಂತ ದಿಂದಲೇ ದೈಹಿಕ ಶಿಕ್ಷಣ ಅತ್ಯಂತ ಅವಶ್ಯಕ. ಎಲ್ಲಾ ವಿಷಯಗಳ ಕಲಿಕಾ ಸಾಮರ್ಥ್ಯಕ್ಕೆ ಸದೃಢವಾದ ದೇಹದ ಜೊತೆಗೆ ಮನಸ್ಸೂಬೇಕು. ಅದನ್ನು ಹೊಂದಲು ಶಾರೀರಿಕ ಶಿಕ್ಷಣ ಅವಶ್ಯಕ ಎಂಬುದನ್ನು ಶಿಕ್ಷಣತಜ್ಞರು ಹೇಳುತ್ತಲೇ ಬಂದಿದ್ದಾರೆ. ಅದಕ್ಕನುಗುಣವಾಗಿ ಶಾಲೆಗಳಲ್ಲಿ ದೈಹಿಕ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡದಿರುವುದು ಬೇಸರದ ವಿಷಯ. ಸರ್ಕಾರ ಕೂಡಲೇ ತಾಲ್ಲೂಕಿನಲಿರುವ ಹಿರಿಯ ಪ್ರಾಥಮಿಕ ಶಾಲೆ ಹಾಗು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿದರು.

ತಾಲ್ಲೂಕಿನಲ್ಲಿ ಹಲವು ಸರ್ಕಾರಿ ಕಟ್ಟಡಗಳು ಉಪಯೋಗಕ್ಕಿಲ್ಲದೇ ಪಾಳು ಬಿದ್ದಿರುವುದು ನನ್ನ ಗಮನಕ್ಕೆ ಬಂದಿದೆ. ಈ ಕುರಿತಂತೆ ಸರ್ಕಾರಕ್ಕೆ ವರದಿ ಸಲ್ಲಿಸಿ ಶಿಥಿಲ ಕಟ್ಟಡಗಳನ್ನು ನೆಲ ಸಮಗೊಳಿಸಲು ಸರ್ಕಾರಕ್ಕೆ ಪತ್ರ ಬರೆಯುತ್ತೇನೆ. ಅದರಿಂದ ಪಾಳು ಬಿದ್ದಿರುವ ಕಟ್ಟಡಗಳಲ್ಲಿ ನೆಡೆಯುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಿದಂತಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ದೈಹಿಕ ಶಿಕ್ಷಣ ಪರಿ ವೀಕ್ಷಕರಾದ ಕುಶ್ವಂತ್, ಎಸ್.ಡಿ.ಎಂ.ಸಿ. ಅಧ್ಯಕ್ಷೆ ಲೀಲಾವತಿ, ಉಪಾಧ್ಯಕ್ಷ ರಾಜು, ಶಾಲಾ ಶಿಕ್ಷಕಿ ಸುನಂದಾ, ಮುಖಂಡರಾದ ಸವಿನ್ ಗೌಡ, ಮುರಗೇಂದ್ರಪ್ಪ, ಮಂಜುನಾಥ್ ಇತರರು ಉಪಸ್ಥಿತರಿದ್ದರು.

## ಇಂದು ಬಿಹಾರ ಚುನಾವಣಾ ಫಲಿತಾಂಶ

» ಮೊದಲನೇ ಪುಟದಿಂದ

ನಿರಂತರ ವಿಡಿಯೋ ಮಾಡಲಾಗುತ್ತದೆ. ಮತ ಎಣಿಕೆ ಕೇಂದ್ರಕ್ಕೆ ಎರಡು ಹಂತಗಳ ಭದ್ರತೆ ಒದಗಿಸಲಾಗಿದೆ. ಅರೆಸೇನಾ ಪಡೆ, ರಾಜ್ಯ ಪೊಲೀಸ್ ಜೊತೆಗೆ 24 ಗಂಟೆಗಳ ಸಿಸಿಟಿವಿ ಕ್ಯಾಮೆರಾಗಳ ನಿಗಾ ಕೂಡಾ ಇರಲಿದೆ ಎಂದು ಹೇಳಿದೆ.

ಪ್ರತಿಯೊಂದು ಸ್ಟ್ರಾಂಗ್ ರೂಂ ಇರುವಲ್ಲಿ ನಿಯಂತ್ರಣ ಕೊಠಡಿಗಳನ್ನು ತೆರೆಯಲಾಗಿದೆ. ಇಲ್ಲಿ ಆಯಾ ಜಿಲ್ಲೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಲಭ್ಯರಿರಲಿದ್ದಾರೆ. ಇವರು ನಿರಂತರವಾಗಿ ಸ್ಟ್ರಾಂಗ್ ರೂಂಗೆ ಭೇಟಿ ನೀಡುತ್ತಲಿರುತ್ತಾರೆ.

**ಸಮೀಕ್ಷೆಯಲ್ಲಿ ಎನ್‌ಡಿಎಗೆ ಬಹುಮತ**

ನ.11ರಂದು ಕೊನೆಯ ಹಂತದ ಮತದಾನ ಪೂರ್ಣಗೊಂಡ ನಂತರ ವಿವಿಧ ಸಂಸ್ಥೆಗಳು ಚುನಾವಣೋತ್ತರ ಮತಗಟ್ಟೆ ಸಮೀಕ್ಷೆಗಳನ್ನು ಪ್ರಕಟಿಸಿದವು. ಅವುಗಳಲ್ಲಿ ಬಹುತೇಕ ಸಮೀಕ್ಷೆಗಳು ಜೆಡಿಯು-ಬಿಜೆಪಿಯ ಎನ್‌ಡಿಎಗೆ ಬಹುಮತ ನೀಡಿವೆ. ವಿರೋಧ ಪಕ್ಷಗಳ ಇಂಡಿಯಾ ಒಕ್ಕೂಟವು ಆರ್‌ಜೆಡಿ ಪಕ್ಷದ ತೇಜಸ್ವಿ ಯಾದವ್ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿ ಎಂದು ಘೋಷಿಸಿತ್ತು. ಸಮೀಕ್ಷೆಗಳು ಈ ಬಣಕ್ಕೆ ಬಹುಮತ ಸಿಗುವುದು ಕಷ್ಟ ಎಂದೇ ಹೇಳಿವೆ. ಆದರೂ ಮತದಾರರ ಚಿತ್ತ ಯಾರತ್ತ ಎಂಬುದಕ್ಕೆ ಶುಕ್ರವಾರ ನಡೆಯಲಿರುವ ಮತ ಎಣಿಕೆ ತೆರೆ ಎಳೆಯಲಿದೆ.

ಬಿಹಾರದಲ್ಲಿ ಎನ್‌ಡಿಎ ಬಣದಲ್ಲಿ ಒಟ್ಟು ಐದು ಪಕ್ಷಗಳಿದ್ದು ಜೆಡಿಯು ಮತ್ತು ಬಿಜೆಪಿ ತಲಾ 101 ಸ್ಥಾನಗಳಲ್ಲಿ ಸ್ಪರ್ಧಿಸಿವೆ. 41 ಕ್ಷೇತ್ರಗಳನ್ನು ಉಳಿದ ಪಕ್ಷಗಳಿಗೆ ಬಿಟ್ಟುಕೊಟ್ಟಿವೆ. ಇಂಡಿಯಾ ಒಕ್ಕೂಟದಲ್ಲಿ ಆರ್‌ಜೆಡಿ, ಕಾಂಗ್ರೆಸ್, ಸಿಪಿಐ(ಎಂಎಲ್), ವಿಕಶೀಲ್ ಇನ್ಸಾ ನ್ ಪಾರ್ಟಿ (ವಿಐಪಿ) ಸೇರಿ ಇತರೆ ಪಕ್ಷಗಳಿವೆ. ಈ ಬಾರಿ ಕಣದಲ್ಲಿ ಪ್ರಬಲ ಅಭ್ಯರ್ಥಿಗಳಾದ ಡಿಸಿಎಂ ಸಮರ್ಥ ಚೌದರಿ, ವಿಜಯ್ ಕುಮಾರ್ ಸಿನ್ಹಾ, ತೇಜಸ್ವಿ ಯಾದವ್, ತೇಜ್ ಪ್ರತಾಪ್ ಮತ್ತು ಕಾಂಗ್ರೆಸ್‌ನ ರಾಜೇಶ್ ಕುಮಾರ್ ಇದ್ದಾರೆ.

## ನ.17ರಂದು ನಗರದಲ್ಲಿ ಯೂನಿಟಿ ಅಭಿಯಾನ

• ಪ್ರಜೋದಯ ವರದಿ

**ಹಾಸನ:** ಕೇಂದ್ರ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಸಹ ಯೋಗದಲ್ಲಿ ರಾಷ್ಟ್ರವ್ಯಾಪಿ ಹಮ್ಮಿಕೊಂಡಿರುವ ಸರ್ದಾರ್ ಯೂನಿಟಿ ಅಭಿಯಾನ ಜಿಲ್ಲೆಯಲ್ಲಿ ನ.17ರಂದು ನಡೆಯಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಅವರು ತಿಳಿಸಿದರು.



ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ದಾರ್ ವಲ್ಲಭ ಭಾಯಿ ಪಟೇಲ್ ಅವರ 150ನೇ ಜನ್ಮದಿನಾಚರಣೆ ಪ್ರಯುಕ್ತ ನ.17 ರಂದು ನಗರದಲ್ಲಿ ಭವ್ಯವಾದ ಏಕತಾ ನಡಿಗೆ ಕಾರ್ಯಕ್ರಮ ಬೆಳಿಗ್ಗೆ 10 ಗಂಟೆಗೆ ನಗರದ ರೈಲ್ವೆ ನಿಲ್ದಾಣದಿಂದ ಏಕತಾ ನಡಿಗೆ ಆರಂಭವಾಗಲಿದೆ. ಬಿ.ಎಂ. ರಸ್ತೆ ಮೂಲಕ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಹಾದು, ಎನ್.ಆರ್.ವೃತ್ತ, ಹೇಮಾವತಿ ಪ್ರತಿಮೆ ಮೂಲಕ ಮಧ್ಯಾಹ್ನ 12 ಗಂಟೆ ವೇಳೆಗೆ ಜಿಲ್ಲಾ ಕನ್ನಡ ಸಾಹಿತ್ಯ ಭವನಕ್ಕೆ ತಲುಪಿ, ಅಲ್ಲೇ ಸಮಾಪ್ತಿಯಾಗಲಿದೆ ಎಂದು ಹೇಳಿದರು.

ಏಕತಾ ನಡಿಗೆಯಲ್ಲಿ ಸುಮಾರು 2000ಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ. ಯುವ ಕರು ಹಾಗು ನಾಗರಿಕರಲ್ಲಿ ರಾಷ್ಟ್ರಭಕ್ತಿ ಮತ್ತು ಏಕತೆಯ ಸಂದೇಶವನ್ನು ಸಾರುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಅದರ ಉಸ್ತುವಾರಿಯನ್ನಾಗಿ ರಾಜ್ಯಸಭಾ ಸದಸ್ಯ ಜಗ್ಗೇಶ್ ಅವರನ್ನು ನೇಮಿಸಲಾಗಿದೆ. ರಾಷ್ಟ್ರದಾದ್ಯಂತ ನಡೆಯಲಿರುವ ಈ ಕಾರ್ಯಕ್ರಮದ ಅಂತಿಮ ಹಂತದಲ್ಲಿ ಗುಜರಾತ್‌ನಲ್ಲಿ 180 ಕಿಲೋ ಮೀಟರ್ ಉದ್ದದ ಪಾದಯಾತ್ರೆ ನಡೆಯಲಿದ್ದು, ಪ್ರಧಾನಿ ನರೇಂದ್ರ ಮೋದಿ ಸೇರಿ ಹಲವು ಪ್ರಮುಖರು ಭಾಗವಹಿಸಲಿದ್ದಾರೆಂದರು.

ಹಾಸನದಲ್ಲಿ ನಡೆಯುವ ನಡಿಗೆಯಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು, ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು ಭಾಗವಹಿಸಲಿದ್ದಾರೆ. ಇದು ಪಕ್ಷದ ಕಾರ್ಯಕ್ರಮವಲ್ಲ. ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದಿಂದ ಹಮ್ಮಿ ಕೊಳ್ಳಲಾಗಿದೆ. ಹೀಗಾಗಿ ಜನಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದರು.

ಕೇಂದ್ರ ಕ್ರೀಡಾ ಸಚಿವಾಲಯದ ಅಧಿಕಾರಿ ಅಖಿಲ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯ ದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ಇದ್ದರು.

## ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ 27.93 ಕೋ. ರೂ.

» ಮೊದಲನೇ ಪುಟದಿಂದ

ಪೂರೈಸಲು ನಮ್ಮ ಸರ್ಕಾರ ಮತ್ತೊಂದು ಹೆಜ್ಜೆಯನ್ನು ಇಟ್ಟಿದೆ. ಸೆ.6 ರಂದು ಆಸ್ಪತ್ರೆಗೆ ಭೇಟಿ ನೀಡಿ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತುರ್ತಾಗಿ ಕಾರ್ಯ ಪ್ರಾರಂಭಿಸಲು, ಪ್ರಾಥಮಿಕ ಹಂತದಲ್ಲಿ ಕಾರ್ಡಿಯಾಲಿಜಿ, ನ್ಯೂರಾಲಜಿ, ನ್ಯೂರೋ ಸರ್ಜರಿ, ಯುರಾಲಜಿ ಮತ್ತು ಕಾರ್ಡಿಯಾ ಥೊರಾಸಿಕ್ ಸರ್ಜರಿ ವಿಭಾಗಗಳಿಗೆ ಅವಶ್ಯವಿರುವ ಉಪಕರಣ ಮತ್ತು ಪೀಠೋಪಕರಣಗಳು ಹಾಗು ಅನು ದಾನದ ಅಂದಾಜು ವೆಚ್ಚಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿತ್ತು ಎಂದು ತಿಳಿಸಿದ್ದಾರೆ.

ಕ್ಯಾತ್‌ಲ್ಯಾಬ್ ಸೌಲಭ್ಯಗಳನ್ನು ಒಳಗೊಂಡು ಕಾರ್ಡಿಯಾಕ್ ಯುನಿ ಟ್‌ನ್ನು ಸ್ಥಾಪಿಸಲು ಅಗತ್ಯ ಅನುದಾ ನದ ಅಂದಾಜು ಮೊತ್ತಕ್ಕೆ ಮನವಿ ಸಲ್ಲಿಸಲು ತಿಳಿಸಲಾಗಿತ್ತು. ವೈದ್ಯ ಕೀಯ ಉಪಕರಣಗಳು, ಅವಶ್ಯ ಪೀಠೋಪಕರಣಗಳು ಮತ್ತು ಕ್ಯಾತ್ ಲ್ಯಾಬ್‌ನೊಂದಿಗೆ ಕಾರ್ಡಿ ಯಾಕ್ ಯುನಿಟ್ ಒಳಗೊಂಡು 5 ಸೂಪರ್ ಸ್ಪೆಷಾಲಿಟಿ ವಿಭಾಗಗಳನ್ನು ಆರಂಭಿ ಸಲು ಒಟ್ಟು 27.93 ಕೋ.ರೂ. ಅನು ದಾನದ ಅವಶ್ಯಕತೆಯನ್ನು ಭರಿಸಲು ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ ನಿರ್ದೇಶಕ ಡಾ||ರಾಜಣ್ಣ ಅವರು ಪ್ರಸ್ತಾವನೆ ಸಲ್ಲಿಸಿದ್ದರು. ಅದಕ್ಕೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆಯಲಾಗಿದೆ ಎಂದು ಹೇಳಿದರು.

### ಕಾರು-ಲಾರಿ ಡಿಕ್ಕಿ: ಐವರಿಗೆ ಗಾಯ

• ಪ್ರಜೋದಯ ವರದಿ

**ಹಾಸನ:** ಲಾರಿ ಹಾಗು ಕಾರು ನಡುವೆ ಅಪಘಾತ ಸಂಭವಿಸಿ ಐವರು ಗಾಯಗೊಂಡಿರುವ ಘಟನೆ ನಗರ ಹೊರವಲಯದ ಬಿಟ್ಟಗೌಡನಹಳ್ಳಿ ಬಳಿ ಗುರುವಾರ ಬೆಳಿಗ್ಗೆ ನಡೆದಿದೆ.

ಸಾಲಿಗ್ರಾಮದಿಂದ ಬರುತ್ತಿದ್ದ ಕಾರಿಗೆ ಎದುರಿನಿಂದ ಬಂದ ಲಾರಿ ಡಿಕ್ಕಿಯಾಗಿ ಅಪಘಾತ ಸಂಭವಿಸಿದೆ. ಬೇಲೂರು ತಾಲ್ಲೂಕು ಸಾಣೇನಹಳ್ಳಿ ಗ್ರಾಮದ ಮಂಜುನಾಥ್ (35), ಪತ್ನಿ ಸುಮ (32) ಗಂಭೀರ ಗಾಯಗೊಂಡಿದ್ದಾರೆ. ಮದಘಟ್ಟ ಗ್ರಾಮದ ಸುಷ್ಮಾ (29), ನಯನ (9), ಆದಿತ್ಯ (6) ಸಣ್ಣಪುಟ್ಟ ಗಾಯಗಳಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಾಲಿಗ್ರಾಮದಲ್ಲಿ ಮದುವೆ ಮುಗಿಸಿಕೊಂಡು ಹುಟ್ಟೂರಿಗೆ ವಾಪಾಸ್ಸಾಗುತ್ತಿದ್ದಾಗ ಲಾರಿ ಚಾಲಕನ ನಿರ್ಲಕ್ಷ್ಯದಿಂದ ಅವಘಡ ಸಂಭವಿಸಿದೆ. ಅಪಘಾತದ ರಭಸಕ್ಕೆ ಕಾರು ಸಂಪೂರ್ಣ ಜಖಂಗೊಂಡಿದೆ.



ಹಾಸನ: ನಗರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಖಾಸಗಿ ಕಾರ್ಯಕ್ರಮದಲ್ಲಿ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ, ಹಾರನಹಳ್ಳಿ ಕೋಡಿಮಠದ ಶ್ರೀ ಶಿವಾನಂದ ಶಿವಯೋಗಿ ಸ್ವಾಮೀಜಿ, ಕೊಡಗಿನ ಕಿರಿಕೋಡ್ಲಿ ಮಠದ ಶ್ರೀ ಸದಾಶಿವ ಸ್ವಾಮೀಜಿ, ಅರೆಮೇರಿ ಕಳಂಚೇರಿ ಮಠದ ಶಾಂತ ಮಲ್ಲಿಕಾರ್ಜುನ ಶ್ರೀ, ಕಲ್ಲುಮಠದ ಶ್ರೀ ಮಹಾಂತ ಸ್ವಾಮೀಜಿ, ಹಾಸನ ತಣ್ಣೀರು ಹಳ್ಳ ಮಠದ ವಿಜಯಕುಮಾರ ಸ್ವಾಮೀಜಿ, ಬಂಡೆಮಠದ ಶ್ರೀ ಶಿವಲಿಂಗ ಸ್ವಾಮೀಜಿ, ಇಮ್ಮಡಿ ಶಿವಲಿಂಗ ಸ್ವಾಮೀಜಿ, ತೊರೆನೂರು ಮಠದ ಶ್ರೀ ಮಲ್ಲೇಶ್ ಸ್ವಾಮೀಜಿ, ಮಾಜಿ ಶಾಸಕ ಬಿ.ಆರ್.ಗುರುದೇವ್, ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಜಿಲ್ಲಾ ನಿರ್ದೇಶಕ ಅದ್ದೂರಿ ಕುಮಾರ್, ಮಾಜಿ ಅಧ್ಯಕ್ಷ ಬಿ.ಎಸ್.ರೋಹಿತ್ ಮತ್ತಿತರರಿದ್ದರು.

## ನ.16ರಂದು ಮಹಿಳೆಯರ ಅಭಿನಯದ ಕುರುಕ್ಷೇತ್ರ ನಾಟಕ ಪ್ರದರ್ಶನ

• ಪ್ರಜೋದಯ ವರದಿ

**ಹಾಸನ:** ಲಕ್ಷ್ಮಿ ರಂಗನಾಥಸ್ವಾಮಿ ಮಹಿಳಾ ಕಲಾ ಸೌರಭ ಹಾಗು ಜಿಲ್ಲಾ ಕಲಾವಿದರ ಹಿತ ರಕ್ಷಣಾ ಸಮಿತಿ ವತಿಯಿಂದ ನ.16ರ ಮಧ್ಯಾಹ್ನ 2.30ಕ್ಕೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಮಹಿಳೆಯರೇ ಅಭಿನಯಿಸಿರುವ ಕುರುಕ್ಷೇತ್ರ ನಾಟಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆಯೆಂದು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಅವರು ಹೇಳಿದರು.




ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪೌರಾಣಿಕ ನಾಟಕ ಅಭಿನಯಿಸುವವರು, ನೋಡುವವರು ಕಡಿಮೆ ಆಗಿದ್ದಾರೆ. ಇಂತಹ ಸನ್ನಿವೇಶದಲ್ಲಿ ಕೆಲಸದ ಒತ್ತಡದ ನಡುವೆಯೂ ಮಹಿಳೆಯರೇ ಒಟ್ಟಾಗಿ ಅದರಲ್ಲೂ ಪೌರಾಣಿಕ ನಾಟಕ ಅಭಿನಯ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದರು.

ಕಲಾ ಸಂಘದ ಅಧ್ಯಕ್ಷೆ ಸಾವಿತ್ರಿ ಗಂಗಾಧರ್ ಅವರು ಮಾತನಾಡಿ, ಸ್ತ್ರೀಯರೇ ತರಬೇತಿ ಪಡೆದು ಅಭಿನಯ ಮಾಡುತ್ತಿದ್ದೇವೆ. ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪ್ರೋತ್ಸಾಹ ನೀಡಬೇಕು. ಮಹಿಳೆ ಕೇವಲ ಅಡುಗೆ ಮನೆಗೆ ಸೀಮಿತವಲ್ಲ, ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆ ಮುಂಚೂಣಿಯಲ್ಲಿದ್ದಾಳೆ. ಅಂತೆಯೇ ನಾಟಕ ಕಲೆಯಲ್ಲೂ ನಮ್ಮ ಕಲಾವಂತಿಕೆ ಪ್ರದರ್ಶನ ಮಾಡಬೇಕೆಂಬ ಆಸೆಯಿಂದ ಈ ಪ್ರಯತ್ನ ಮಾಡಿದ್ದೇವೆಂದರು.

25 ಮಹಿಳೆಯರು ಪ್ರದರ್ಶನ ಮಾಡುತ್ತಿದ್ದೇವೆ. ಅದಕ್ಕಾಗಿ ಹಾರ್ಮೋನಿಯಂ ಮಾಸ್ಟರ್ ಪಾಲಾಕ್ಷಾಚಾರ್ ಅವರಿಂದ ಮೂರು ತಿಂಗಳಿಂದ ತರಬೇತಿ ಪಡೆದಿದ್ದು, ನಮಗೆ ಎಲ್ಲರೂ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಪಾತ್ರಧಾರಿಗಳಾದ ಶಶಿಕಲಾ, ಸಾವಿತ್ರಿ, ಶ್ವೇತಾ, ಜಿ.ಕುಮಾರ್, ಅನಿತಾ, ಕಾಮಾಕ್ಷಿ ಇದ್ದರು.

## ಮೂಲ ಜಾತಿ ಪ್ರಮಾಣ ಪತ್ರ ವಿತರಣೆಗೆ ಒತ್ತಾಯ

• ಪ್ರಜೋದಯ ವರದಿ

**ಹಾಸನ:** ಒಳ ಮೀಸಲಾತಿ ಜಾರಿಯಾಗಿರುವ ಹಿನ್ನಲೆ ಮೂಲ ಜಾತಿಯನ್ನು ನಮೂದಿಸಿ ಜಾತಿ ಪ್ರಮಾಣ ಪತ್ರವನ್ನು ವಿತರಣೆ ಮಾಡುವಂತೆ ಮಾದಿಗ ದಂಡೋರ ಸಮಿತಿ ರಾಜ್ಯ ಕಾರ್ಯದರ್ಶಿ ವಿಜಯಕುಮಾರ್ ಅವರು ಒತ್ತಾಯಿಸಿದರು.




ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾದಿಗ ಹಾಗು ಇತರೆ ಸಮ ನಾಂತರ ಜಾತಿಗಳ ಅರ್ಜಿದಾರರಿಗೆ ಜಾತಿ ಪ್ರಮಾಣ ಪತ್ರ ನೀಡುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ಕೂಲಂಕಷ ಪರಿಶೀಲನೆ ನಡೆಸಬೇಕೆಂದು ಹೇಳಿದರು.

ಪರಿಶಿಷ್ಟ ಜಾತಿ ಮಾದಿಗ ಜಾತಿಯವರಿಗೆ ಪ್ರವರ್ಗ-1 ಎಂದು ನಮೂದಿಸಿ ಜಾತಿ ಪ್ರಮಾಣ ಪತ್ರ ನೀಡಬೇಕೆಂಬ ನಿಯಮವಿದೆ. ಅದಕ್ಕೂ ಮುನ್ನ ಅಫಿಡವಿಟ್ ಸಲ್ಲಿಸಬೇಕು. ಅದರಲ್ಲಿ ಮಾದಿಗ, ಕೊರಚ, ಕೊರಗ ಇತ್ಯಾದಿ ಮೂಲ ಜಾತಿಯನ್ನು ನಮೂದಿಸಲೇಬೇಕು. ಇದಲ್ಲವನ್ನು ಪರಿಶೀಲಿಸಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದ ಅಧಿಕಾರಿಗಳು ಅಂದರೆ ಗ್ರಾಮಲೆಕ್ಕಿಗರು, ರಾಜಸ್ವ ನಿರೀಕ್ಷಕರು, ತಹಶೀಲ್ದಾರರು ಎಲ್ಲವನ್ನೂ ಕೂಲಂಕಷ ಪರಿಶೀಲನೆ ನಡೆಸಿದ ನಂತರವೇ ಜಾತಿ ಪ್ರಮಾಣ ಪತ್ರ ನೀಡಬೇಕು. ಪಡೆಯುವವರೂ ಅವರವರ ಮೂಲ ಜಾತಿಯನ್ನು ನಮೂದಿಸಬೇಕೆಂದು ಮನವಿ ಮಾಡಿದರು.

ಹೊಸದಾಗಿ ಜಾತಿ ಪ್ರಮಾಣ ಪತ್ರ ನೀಡಲು ಅಟಲ್ ಜೀ ತಂತ್ರಾಂಶದ ಅಡಿಯಲ್ಲಿ ತಂತ್ರಾಂಶ ಸಿದ್ಧಗೊಳಿಸಲಾಗಿದೆ. ಆದರೆ ಅದು ಅಷ್ಟೊಂದು ಅಪ್‌ಡೇಟ್ ಆಗಿಲ್ಲ. ಕೂಡಲೇ ಲೋಪ ದೋಷ ಸರಿಪಡಿಸಿ ವೇಗವಾಗಿ ಕಾರ್ಯ ನಿರ್ವಹಿಸುವಂತೆ ಮಾಡಬೇಕು. ಜಾತಿ ಮರೆ ಮಾಚಿ ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿದರೆ ಅದಕ್ಕೆ ಅಧಿಕಾರಿಗಳೇ ನೇರ ಹೊಣೆಗಾರರಾಗಿರುತ್ತಾರೆ. ಈ ಬಗ್ಗೆ ಸರಿಯಾಗಿ ಪರಿಶೀಲನೆ ನಡೆಸಬೇಕು. ಈ ಜಾತಿ ಪ್ರಮಾಣ ಪತ್ರ ಕೇವಲ ಶಿಕ್ಷಣ, ಉದ್ಯೋಗಕ್ಕೆ ಸೀಮಿತವಲ್ಲ. ಸೌಲಭ್ಯ ಪಡೆದುಕೊಳ್ಳಲು ಅನುಕೂಲವಾಗುತ್ತದೆ. ಆದ್ದರಿಂದ ಎಲ್ಲರೂ ಮೂಲ ಜಾತಿ ಪ್ರಮಾಣ ಪತ್ರ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರತ್ತ ಶೂ ಎಸೆದ ಘಟನೆಯನ್ನು ತೀವ್ರವಾಗಿ ಖಂಡಿಸಿ ಅವರು, ಸಂವಿಧಾನಕ್ಕೆ ಅಪಮಾನವಾಗುವ ಘಟನೆ ನಡೆದಿದ್ದರೂ, ರಾಷ್ಟ್ರೀಯ ಮಾನವ ಹಕ್ಕು ಆಯೋಗ ಏನು ಮಾಡುತ್ತಿದೆ, ಏಕೆ ನಿಷ್ಕ್ರಿಯವಾಗಿದೆ ಎಂದು ಪ್ರಶ್ನಿಸಿದ ಅವರು, ಆಯೋಗದ ಈ ನಿರ್ಲಕ್ಷ್ಯ ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ನ.15 ರಂದು ದೆಹಲಿಯ ಜಂತರ್ ಮಂಥರ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಆ ಪ್ರತಿಭಟನೆಯಲ್ಲಿ ಜಿಲ್ಲೆ, ರಾಜ್ಯದಿಂದಲೂ ಭಾಗಿಯಾಗುತ್ತಿದ್ದೇವೆ ಎಂದರು.

ಮುಖಂಡರಾದ ಭೈರೇಶ್ ಹಳೇಬೀಡು, ಸತೀಶ್, ವಿಜಯ್, ಮಂಜುನಾಥ್ ಇದ್ದರು.

## ನಾಳೆಯಿಂದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್

• ಪ್ರಜೋದಯ ವರದಿ

**ಬೆಂಗಳೂರು:** ಜೀ ಕನ್ನಡದ ಜನಪ್ರಿಯ ರಿಯಾಲಿಟಿ ಶೋ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ನ. 15 ರಿಂದ ಪ್ರಸಾರವಾಗಲಿದೆ.

ಹೊಸ ಥೀಮ್, ಅದ್ಭುತ ಪ್ರತಿಭೆಗಳ ಪ್ರದರ್ಶನಗಳೊಂದಿಗೆ ಈ ಬಾರಿಯ ಶೋ ಮತ್ತಷ್ಟು ಮನರಂಜನೆ ನೀಡಲು ಸಜ್ಜಾಗಿದೆ. ನ.15 ರಿಂದ ಪ್ರತಿ ಶನಿವಾರ ಮತ್ತು ಭಾನುವಾರ ಸಂಜೆ 7.30ಕ್ಕೆ ಪ್ರಸಾರ ವಾಗಲಿದೆ. ಖ್ಯಾತ ನಿರೂಪಕಿ ಅನುಶ್ರೀ ಈ ಸೀಸನ್‌ನ ಆಂಕರ್ ಆಗಿರ ಲಿದ್ದು, ನಟರಾದ ಡಾ.ಶಿವರಾಜಕುಮಾರ್, ರಚಿತಾರಾಮ್, ಚಿನ್ನಾರಿ ಮುತ್ತ ವಿಜಯ ರಾಘವೇಂದ್ರ, ಮತ್ತು ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ತೀರ್ಪುಗಾರರಾಗಿ ಕಾರ್ಯ ನಿರ್ವಹಿಸಲಿದ್ದಾರೆ.

ಈ ಸೀಸನ್‌ನಲ್ಲಿ ಜನಪ್ರಿಯ ಸೆಲೆಬ್ರಿಟಿಗಳು ರಾಜ್ಯದಾದ್ಯಂತ ಆಯ್ಕೆಯಾದ ಪ್ರತಿಭಾವಂತ ನೃತ್ಯಗಾರರೊಂದಿಗೆ ಜೋಡಿಯಾಗಿ ಪಾಲ್ಗೊಳ್ಳಲಿದ್ದಾರೆ. ಸೆಲೆಬ್ರಿಟಿಗಳ ಸಾಲಿನಲ್ಲಿ ಧನಂಜಯ್, ಭವ್ಯಗೌಡ, ಆರತಿ ಪಡುಬಿದ್ರಿ, ಅಮೋಘ್, ಪ್ರತೀಕ್ಷಾ, ನಂದಿನಿ, ಅನೂಪ್, ಸ್ಮೈಲ್ ಗುರು ರಕ್ಷಿತ್, ಜಗಪ್ಪ, ಅನನ್ಯ, ಪೂಜಾ ರಮೇಶ್ ಮತ್ತು ಅಶ್ವಿನ್ ಇರಲಿದ್ದಾರೆ. ಮೊದಲ ಎಪಿಸೋಡ್‌ನಲ್ಲಿ ಸೆಲೆಬ್ರಿಟಿ ಡ್ಯಾನ್ಸರ್‌ಗಳು ಇರಲಿದ್ದು, ಕರ್ನಾಟಕದ ವಿವಿಧ ಭಾಗಗಳಲ್ಲಿ ನಡೆದ ಆಡಿಷನ್‌ನಲ್ಲಿ ಆಯ್ಕೆಯಾದ ಡ್ಯಾನ್ಸರ್‌ಗಳು ಮುಂಬರಲಿರುವ ಎಪಿಸೋಡ್‌ಗಳಲ್ಲಿ ಜೋಡಿಯಾಗಲಿದ್ದಾರೆ.

## ನ.23ರಂದು ಅಸ್ಮಿತ ಅಥ್ಲೆಟಿಕ್ ಲೀಗ್

**ಹಾಸನ:** ಖೇಲೋ ಇಂಡಿಯಾ, ಸಾಯಿ, ಇಂಡಿಯನ್ ಅಥ್ಲೆಟಿಕ್ ವತಿಯಿಂದ ರಾಷ್ಟ್ರಮಟ್ಟದ 14 ಮತ್ತು 16 ವಯಮಿತಿಯ ಬಾಲಕಿ ಯರ ಅಸ್ಮಿತ ಅಥ್ಲೆಟಿಕ್ ಲೀಗ್ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನ. 23ರಂದು ನಡೆಯಲಿದೆ.

ಈ ಕ್ರೀಡಾಕೂಟದಲ್ಲಿ ಜಿಲ್ಲೆಯ ಬಾಲಕಿ ಯರು ಮಾತ್ರ ಭಾಗವಹಿಸಬಹುದಾಗಿದೆ. ಕ್ರೀಡಾಪಟುಗಳು ನ.21 ರೊಳಗೆ ನೋಂದಾಯಿಸಿಕೊಳ್ಳಬೇಕಿದೆ. ಮಾಹಿತಿಗಾಗಿ ಜಿಲ್ಲಾ ಅಮೆ ಚೂರ್ ಅಥ್ಲೆಟಿಕ್ ಸಂಸ್ಥೆ ಸಹಾಯಕ ಕಾರ್ಯದರ್ಶಿ ಎಸ್.ಎಲ್. ಪ್ರಸನ್ನ ಕುಮಾರ್ 91106 88347, 8088305409 ಅವರನ್ನು ಸಂಪರ್ಕಿಸಬಹುದಾಗಿದೆ.

## ಹೆಚ್‌ಆರ್‌ಪಿ ನಕಲಿ ದಾಖಲೆ ಸೃಷ್ಟಿಸಿ ಭೂಕಬಳಿಕೆಗೆ ಯತ್ನ

### ಕ್ರಮ ಕೈಗೊಳ್ಳದ ಅಧಿಕಾರಿಗಳು | ಕೆಲವಳ್ಳಿ, ಹೆಗ್ಗೋವೆ ಗ್ರಾಮಸ್ಥರ ಆರೋಪ

• ಪ್ರಜೋದಯ ವರದಿ

**ಹಾಸನ:** ಹೇಮಾವತಿ ಜಲಾಶಯ ಮುಳುಗಡೆ ಸಂತ್ರಸ್ತರ ಹೆಸರಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ ಭೂಮಿ ಕಬಳಿಸಲು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಮುಂದಾಗಿವೆ ಎಂದು ಸಕಲೇಶಪುರ ತಾಲ್ಲೂಕಿನ ಕೆಲವಳ್ಳಿ ಮತ್ತು ಹೆಗ್ಗೋವೆ ಗ್ರಾಮಸ್ಥರು ಆರೋಪಿಸಿದರು.




ಗುರುವಾರ ಸುದ್ದಿಗೋಷ್ಠಿಯಲ್ಲಿ ಗ್ರಾಮದ ಮುಖಂಡ ಹೆಚ್.ಇ.ರಾಜು ಅವರು ಮಾತನಾಡಿ, ಕೆಲವಳ್ಳಿ ಮತ್ತು ಹೆಗ್ಗೋವೆ ಗ್ರಾಮದ ಸರ್ವೆ ನಂ.7, 10 ಮತ್ತು 74 ರಲ್ಲಿ ಸುಮಾರು 80 ಎಕರೆ ಸರ್ಕಾರಿ ಭೂಮಿಯನ್ನು ಅಕ್ರಮವಾಗಿ ಕಬಳಿಸುವ ಹುನ್ನಾರ ನಡೆದಿದೆ ಎಂದು ದೂರಿದರು.

ಬೆಂಗಳೂರು ಮೂಲದ ಜಯರಾಂ ಎಂಬುವವರು ಸರ್ವೆ ಮಾಡಲು ಪ್ರಯತ್ನಿಸಿದಾಗ ನಾವು ಅಡ್ಡಿ ಪಡಿಸಿದ್ದೇವೆ. ಸ್ಥಳದಲ್ಲೇ ಪ್ರತಿಭಟನೆ ನಡೆಸಿ ವಿರೋಧ ವ್ಯಕ್ತಪಡಿಸಿದ್ದೇವೆ. ಸರ್ಕಾರಿ ಇಲಾಖೆಗಳನ್ನು ಸಂಪರ್ಕ ಮಾಡಿದರೆ ಹೇಮಾವತಿ ಸಂತ್ರಸ್ತರಿಗೆ ಹಂಚಿಕೆ ಮಾಡಲೆಂದು ಈ ಎರಡೂ ಗ್ರಾಮಗಳಲ್ಲಿ ಯಾವುದೇ ಭೂಮಿ ಕಾಯ್ದಿರಿಸಿಲ್ಲ. ಅದಕ್ಕೆ ಸಂಬಂಧಿಸಿದ ದಾಖಲೆಗಳೂ ಇಲ್ಲವೆಂದು ಮಾಹಿತಿ ನೀಡಿದ್ದಾರೆ. ಆದರೆ, ಜಯರಾಂ ಎಂಬಾತ ಹಿಂದೆ ಗೋಮಾಳ ಆಗಿದ್ದನ್ನು ವಾಮ ಮಾರ್ಗದ ಮೂಲಕ ನಕಲಿ ದಾಖಲೆ ಸೃಷ್ಟಿಸಿ ತನ್ನಂತೆ ಮಾಡಿಕೊಳ್ಳಲು ಬಂದಿದ್ದಾನೆಂದು ಆರೋಪಿಸಿದರು.

1999-2000ರಲ್ಲಿ ಸರ್ಕಾರಿ ಗೋಮಾಳವನ್ನು ತಮ್ಮಂತೆ ಮಾಡಿಕೊಂಡಿದ್ದವರ ಆರ್‌ಟಿಸಿ (ಪಹಣಿಯನ್ನು) ಆಗಿನ ಜಿಲ್ಲಾಧಿಕಾರಿಗಳು ವಜಾ ಮಾಡಿದ್ದಾರೆ. ಆದರೂ ನಕಲಿ ದಾಖಲೆಗಳ ಆಧಾರದಲ್ಲಿ ಹೊಸ ಸರ್ವೆ ನಂಬರ್ ಸೃಷ್ಟಿ ಮಾಡಿ ಭೂಮಿ ವಶಕ್ಕೆ ಪಡೆಯಲು ಪ್ರಯತ್ನ ನಡೆಯುತ್ತಿದೆ. ಈ ಸಂಬಂಧ ಕಂದಾಯ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನ ಆಗಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಭೂಮಾಫಿಯಾದ ಪ್ರಭಾವದ ಬಗ್ಗೆ ಅನುಮಾನ ಹುಟ್ಟಿಸಿದೆ. ಸರ್ಕಾರಿ ಭೂಮಿ ಉಳಿಸಲು ಸಂಬಂಧಪಟ್ಟವರು ಕ್ರಮ ಕೈಗೊಳ್ಳದಿದ್ದರೆ ಮುಂದೆ ಆಗುವ ಅನಾಹುತಗಳಿಗೆ ಸರ್ಕಾರ ಮತ್ತು ಅಧಿಕಾರಿಗಳೇ ಹೊಣೆ ಎಂದು ಎಚ್ಚರಿಸಿದರು. ಗ್ರಾಮಸ್ಥರಾದ ಸುನೀಲ್, ಮಾದೇಶ್, ಗಗನ್, ಸಂದೀಪ್, ಸುರೇಶ್ ಇದ್ದರು.

## ಕೇಂದ್ರ ಸರ್ಕಾರದಿಂದ ಕಾರ್ಮಿಕರ ಕಾನೂನು ತಿದ್ದುಪಡಿ

» ಮೊದಲನೇ ಪುಟದಿಂದ

ಮಾಡಲಾಗುತ್ತಿದೆ. ಇದು ಕೇವಲ ಬಿಜೆಪಿ ಅಧಿಕಾರದಲ್ಲಿ ಇರೋ ರಾಜ್ಯದಲ್ಲಿ ಮಾತ್ರವಲ್ಲ ಕಾಂಗ್ರೆಸ್ ಆಡಳಿತ ರಾಜ್ಯದಲ್ಲೂ ಕೂಡ ಇದೇ ನಡೆಯುತ್ತಿದೆ. ಸಿಐಟಿಯು 17ನೇ ರಾಷ್ಟ್ರೀಯ ಸಮ್ಮೇಳನ ಕಾರ್ಮಿಕರ ಮೇಲಿನ ಈ ದಾಳಿಗಳನ್ನು ಗುರುತಿಸಿ ಹೋರಾಟಕ್ಕೆ ಕರೆ ನೀಡಿತ್ತು ಎಂದರು.

ಜಗತ್ತಿನ ಕೋಟಿ ಕೋಟಿ ದುಡಿಯುವ ವರ್ಗ ಸಮಸ್ಯೆಗೆ ಸಿಲುಕಿದೆ. ಕೂಲಿ ಅಭದ್ರತೆ, ಕೆಲಸದ ಅಭದ್ರತೆ, ಸಾಮಾಜಿಕ ಅಭದ್ರತೆ ಕಾರ್ಮಿಕರನ್ನು ಆತಂಕದಲ್ಲಿ ಇರುವಂತೆ ಮಾಡಿದೆ. ಇದಕ್ಕೆ ಬಂಡವಾಳ ಶಾಹಿ ವ್ಯವಸ್ಥೆಯ ಬಿಕ್ಕಟ್ಟು ಕಾರಣ ಆಗಿದ್ದು, ಈ ಬಿಕ್ಕಟ್ಟಿನ ಹೊರೆಯನ್ನು ಕಾರ್ಮಿಕ ರ ಮೇಲೆ ವರ್ಗಾವಣೆ ಮಾಡಿ ಶೋಷಣೆ ಮಾಡಲಾಗುತ್ತಿದೆ. ಶೋಷಣೆ ವಿರೋಧಿಸಿ ಜಗತ್ತಿನ ದುಡಿಯೋ ವರ್ಗದ ಹೋರಾಟ ಕೂಡ ಹೆಚ್ಚಾಗಿದೆ. ಎಲ್ಲಾ ವರ್ಗದ ಜನರು ಹೋರಾಟಕ್ಕೆ ಇಳಿಯುತ್ತಿದ್ದಾರೆ. ಆದರೆ, ದುಡಿಯೋ ಜನರು ಹೋರಾಟಕ್ಕೆ ಇಳಿದರೆ ಬೇರೆ ಬೇರೆ ರೀತಿಯ ಷಡ್ಯಂತ್ರದ ಮೂಲಕ ಅವರ ಹೋರಾಟ ಒಡೆಯಲು ದಿಕ್ಕು ತಪ್ಪಿಸಲು ಯತ್ನ ನಡೆಯುತ್ತಿದೆ ಎಂದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019